# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ್, ಬಿ, ಗುಡಗೇನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

VOL.04 ISSUE. 306 ₹4, SATURDAY, 03 FEBRUARY 2024 NEWSBELAGAVI@GMAIL.COM 9900332089 RNI. KARKAN/2020/79084 REG.NO G-2/PMG/KA/NK/BM/139/2024-26


# ಲೋಕಸಭೆ ಚುನಾವಣೆಗೆ 'ಕೈ' ಭರ್ಜರಿ ಸಿದ್ಧತೆ

## ಬೆಂಗಳೂರಿಗೆ ಎಲಿವೇಟೆಡ್ ಮೇಲ್ಸೇತುವೆ ಸೇರಿ ಹಲವು ಯೋಜನೆಗಳಿಗೆ ಸಂಪುಟ ಅನುಮೋದನೆ



ಬೆಂಗಳೂರು: ಲೋಕಸಭಾ ಚುನಾವಣೆಗೆ ರಾಜ್ಯ ಕಾಂಗ್ರೆಸ್ ಭರ್ಜರಿ ಸಿದ್ಧತೆ ನಡೆಸುತ್ತಿದ್ದು, ಗುರುವಾರ ನಡೆದ ಸಂಪುಟ ಸಭೆಯಲ್ಲಿ ಬೆಂಗಳೂರಿಗೆ ಸರ್ ಎಂ ವಿಶ್ವೇಶ್ವರಯ್ಯ ಟರ್ಮಿನಸ್ ಬಳಿ ಎಲಿವೇಟೆಡ್ ಮೇಲ್ಸೇತುವೆಗೆ 263 ಕೋಟಿ ರೂಪಾಯಿ ಸೇರಿದಂತೆ ಹಲವು ಯೋಜನೆಗಳು ಮತ್ತು ಕಾಮಗಾರಿಗಳಿಗೆ ಹಸಿರು ನಿಶಾನೆ ತೋರಿದೆ.

ಸಂಪುಟ ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಕಾನೂನು ಸಚಿವ ಎಚ್.ಕೆ.ಪಾಟೀಲ್ ಅವರು, ನೈಋತ್ಯ ರೈಲ್ವೆ ನೂತನವಾಗಿ ನಿರ್ಮಿಸಿರುವ ಸರ್ ಎಂ ವಿವೇಶ್ವರಯ್ಯ ಟರ್ಮಿನಸ್ ನಿಂದ ಬೈಯಪ್ಪನಹಳ್ಳಿ ಮೆಟ್ರೊ ನಿಲ್ದಾಣದವರೆಗೆ ರಸ್ತೆ ಸಂಪರ್ಕ ಕಲ್ಪಿಸುವಂತೆ ಹಲವು ಬೇಡಿಕೆಗಳಿದ್ದವು. ಇದರಂತೆ ಬೈಯಪ್ಪನಹಳ್ಳಿ ರೈಲ್ವೆ ಲೆವೆಲ್ ಕ್ರಾಸಿಂಗ್ ಬಳಿ ಹೊಸ ಸರ್ ಎಂವಿ ಟರ್ಮಿನಲ್ ಗೆ ಎಲಿವೇಟೆಡ್ ಮೇಲ್ಸೇತುವೆ ನಿರ್ಮಿಸಲು 263 ಕೋಟಿ ರೂ.ಗೆ ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ ಎಂದು ಹೇಳಿದರು.

ಮೇಲ್ಸೇತುವೆಯು ಲಕ್ಷಾಂತರ ಜನರ ಪ್ರಯಾಣಕ್ಕೆ ಸಹಾಯ ಮಾಡುತ್ತದೆ ಮತ್ತು ಸಂಚಾರ ದಟ್ಟಣೆಯನ್ನೂ ಕಡಿಮೆ ಮಾಡುತ್ತದೆ. "ಈ ಸಮಸ್ಯೆಯನ್ನು ಪರಿಹರಿಸುವ ಸಲುವಾಗಿ, ಐಒಸಿ ಜಂಕ್ಷನ್‌ನಲ್ಲಿ 1.5–ಕಿಮೀ ಉದ್ದದ ಮೇಲ್ಸೇತುವೆ ಮತ್ತು ಬೈಯಪ್ಪನಹಳ್ಳಿ ರೈಲ್ವೆ ಲೆವೆಲ್ ಕ್ರಾಸಿಂಗ್‌ನಲ್ಲಿ ಹೆಚ್ಚುವರಿ ದ್ವಿಪಥದ ರೈಲ್ವೇ ಓವರ್ ಬ್ರಿಡ್ಜ್ ನಿರ್ಮಾಣವನ್ನು ಪ್ರಸ್ತಾಪಿಸಲಾಗಿದೆ. ಈ ಮೇಲ್ಸೇತುವೆಯು ಕಮ್ಮನಹಳ್ಳಿ, ಬಾಣಸವಾಡಿ ಮತ್ತು ಹಳೆ ಮದ್ರಾಸ್ ರಸ್ತೆಯ ಜನರಿಗೆ ಸಹಾಯಕವಾಗಲಿದೆ ಎಂದು ತಿಳಿಸಿದರು.

ಮೂಲ ಸೌಕರ್ಯಗಳನ್ನು ಒದಗಿಸಲು ಮತ್ತು ವೈಟ್ ಟಾಪಿಂಗ್ ರಸ್ತೆಗಳಿಗೆ 1,200 ಕೋಟಿ ರೂ.ಗಳ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಲು ಸಂಪುಟ ಅನುಮೋದನೆ ನೀಡಿದೆ. ರಸ್ತೆಗಳ ಉದ್ದದ ಬಗ್ಗೆ ಬಿಬಿಎಂಪಿ ನಿರ್ಧರಿಸಲಿದೆ ಎಂದು ಹೇಳಿದರು.

ಬಿಬಿಎಂಪಿ ವ್ಯಾಪ್ತಿಗೆ ಹೊಸದಾಗಿ ಸೇರ್ಪಡೆಗೊಂಡ ಗ್ರಾಮಗಳಿಗೆ ಕುಡಿಯುವ ನೀರು ಒದಗಿಸಲು 208 ಕೋಟಿ ರೂ.ಗಳ ಯೋಜನೆಗೆ ಅನುಮೋದನೆ ನೀಡಲಾಗಿದೆ. ಇದಲ್ಲದೇ ಕೆಸಿ ಜನರಲ್ ಆಸ್ಪತ್ರೆ ಆವರಣದಲ್ಲಿರುವ ತಾಯಿ ಮತ್ತು ಮಕ್ಕಳ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಲು 150 ಕೋಟಿ ರೂನ್ನು ಮೀಸಲಿಡಲಾಗಿದೆ ಎಂದರು.

ಇದಲ್ಲದೆ, ಸಂಪುಟ ಸಬೆ ಸಹಕಾರ ಸಂಘಗಳ ಮೂಲಕ ಸಾಲ ಪಡೆದು ಸುಸ್ತಿದಾರರಾಗಿರುವ ರೈತರು ಮಧ್ಯಮಾವಧಿ ಮತ್ತು ದೀರ್ಘಾವಧಿ ಕೃಷಿ ಹಾಗೂ ಕೃಷಿ ಸಂಬಂಧಿತ ಸಾಲಗಳ ಅಸಲು ಪಾವತಿಸಿದರೆ, ಬಡ್ಡಿ ಮನ್ನಾ ಮಾಡುವ ಯೋಜನೆಗೂ ಅನುಮೋದನೆ ನೀಡಿದೆ. ರೈತರು ಫೆಬ್ರುವರಿ 29ರೊಳಗೆ ಅಸಲು ಪಾವತಿಸಿದರೆ ಮಾತ್ರ ಬಡ್ಡಿ ಮನ್ನಾ ಆಗುತ್ತದೆ ಎಂದು ಪಾಟೀಲ್ ಅವರು ಮಾಹಿತಿ ನೀಡಿಬ3ದರು.

2023ರ ಡಿಸೆಂಬರ್ 31ಕ್ಕೆ ಸುಸ್ತಿದಾರರಾದವರಿಗೆ ಈ ಪ್ರಯೋಜನ ಸಿಗಲಿದೆ. ಈ ಸಂಬಂಧ ಜನವರಿ 20ರಂದೇ ಆದೇಶ ಹೊರಡಿಸಲಾಗಿತ್ತು. ಇದೀಗ ಸಂಪುಟ ಸಭೆ ಘಟನೋತ್ತರ ಅನುಮೋದನೆ ನೀಡಲಾಗಿದೆ. ಪ್ರಾಥಮಿಕ ಸಹಕಾರಿ ಕೃಷಿ ಮತ್ತು ಭೂ ಅಭಿವೃದ್ಧಿ ಬ್ಯಾಂಕ್‌ಗಳು (ಪಿಕಾರ್ಡ್) ಮತ್ತು ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್‌ಗಳಲ್ಲಿ ಸುಸ್ತಿಯಾಗಿರುವ ಮಧ್ಯಮಾವಧಿ ಮತ್ತು ದೀರ್ಘಾವಧಿ ಕೃಷಿ ಸಾಲಗಳ ಸುಸ್ತಿ ಬಡ್ಡಿ ರೂ.440.20 ಕೋಟಿ ಆಗಲಿದ್ದು, ಅದನ್ನು ಭರಿಸಲು ಒಪ್ಪಿಗೆ ನೀಡಲಾಯಿತು ಎಂದರು.

34 ಸ್ಥಳೀಯ ಸಂಸ್ಥೆಗಳಲ್ಲಿ ಅನಿಲ ಆಧಾರಿತ ಚಿತಾಗಾರ: ರಾಜ್ಯದ 10 ಮಹಾನಗರ ಪಾಲಿಕೆಗಳಲ್ಲಿ ಮತ್ತು ಆಯ್ದ 24 ನಗರಸಭೆಗಳಲ್ಲಿ ತಲಾ ಒಂದರಂತೆ 34 ಆಧುನಿಕ ಅನಿಲ /ವಿದ್ಯುತ್ ಚಿತಾಗಾರಗಳನ್ನು ನ್ಯಾಷನಲ್ ಹೌಸಿಂಗ್ ಬ್ಯಾಂಕ್ ನಗರ ಮೂಲಸೌಕರ್ಯ ಅಭಿವೃದ್ಧಿ ನಿಧಿ ಅಡಿ ರೂ.136 ಕೋಟಿ ವೆಚ್ಚದಲ್ಲಿ ಸ್ಥಾಪಿಸಲು ಸಂಪುಟ ಒಪ್ಪಿಗೆ ನೀಡಿದೆ.

ಶವಸಂಸ್ಕಾರ ನಡೆಸಲು ಆಧುನಿಕ ಮತ್ತು ವೈಜ್ಞಾನಿಕ ಪದ್ಧತಿಗಳನ್ನು ಬಳಸಲು 1 ಲಕ್ಷಕ್ಕಿಂತ ಹೆಚ್ಚಿನ ಜನಸಂಖ್ಯೆ ಇರುವ ಹಾಗೂ ಹೆಚ್ಚಿನ ಮರಣದ ಪ್ರಮಾಣ ಇರುವ ರಾಜ್ಯದ 10 ಮಹಾನಗರ ಪಾಲಿಕೆಗಳಲ್ಲಿ ಮತ್ತು ಆಯ್ದ 24 ನಗರಸಭೆಗಳಲ್ಲಿ ಚಿತಾಗಾರಗಳನ್ನು ತಲಾ ರೂ.4 ಕೋಟಿ ವೆಚ್ಚದಲ್ಲಿ ಸ್ಥಾಪಿಸಲಾಗುವುದು.

ಪೊಲೀಸ್ ಇಲಾಖೆಯ ಪ್ರಧಾನ ಕಚೇರಿ ಸೇರಿ ಇತರ ಘಟಕಗಳಲ್ಲಿನ ವಾಹನಗಳಿಗೆ ಪೆಟ್ರೋ ಕಾರ್ಡ್ ಮೂಲಕ ಇಂಧನ ಮತ್ತು ತೈಲವನ್ನು ಮೂರು ವರ್ಷಗಳ ಅವಧಿಗೆ ರೂ 170 ಕೋಟಿ ಅಂದಾಜು ವೆಚ್ಚದಲ್ಲಿ ಖರೀದಿಸಲು ಸಂಪುಟ ಒಪ್ಪಿಗೆ ನೀಡಿದೆ ಎಂದು ಹೇಳಿದರು.

## ಅಮೆರಿಕದಲ್ಲಿ ಭಾರತೀಯ ಮೂಲದ ಮತ್ತೊಬ್ಬ ವಿದ್ಯಾರ್ಥಿಯ ಶವ ಪತ್ತೆ ವಾರದಲ್ಲಿ ಇದು ಮೂರನೇ ಪ್ರಕರಣ




ನ್ಯೂಯಾರ್ಕ್: ಯುನೈಟೆಡ್ ಸ್ಟೇಟ್ಸ್ ನಲ್ಲಿ ಮತ್ತೊಬ್ಬ ವಿದ್ಯಾರ್ಥಿಯ ಶವ ಪತ್ತೆಯಾಗಿದೆ. ಶ್ರೇಯಸ್ ರೆಡ್ಡಿ ಎಂಬ ಇನ್ನೊಬ್ಬ ಭಾರತೀಯ ವಿದ್ಯಾರ್ಥಿ ಓಹಿಯೋದ ಸಿನ್ಸಿನಾಟಿಯಲ್ಲಿ ಶವವಾಗಿ ಪತ್ತೆಯಾಗಿದ್ದು, ಒಂದು ವಾರದೊಳಗೆ ಇದು ಮೂರನೇ ಪ್ರಕರಣವಾಗಿದೆ.

ಶ್ರೇಯಸ್ ರೆಡ್ಡಿ ಸಾವಿಗೆ ಕಾರಣ ಇನ್ನೂ ತಿಳಿದಿಲ್ಲ. ವರದಿಗಳ ಪ್ರಕಾರ, ರೆಡ್ಡಿ ಲಿಂಡರ್ ಸ್ಕೂಲ್ ಆಫ್ ಬ್ಯುಸಿನೆಸ್‌ನಲ್ಲಿ ವಿದ್ಯಾರ್ಥಿಯಾಗಿದ್ದರು. ನ್ಯೂಯಾರ್ಕ್‌ನಲ್ಲಿರುವ ಭಾರತೀಯ ಕಾನ್ಸುಲೇಟ್ ಘಟನೆಯ ಬಗ್ಗೆ ವಿಷಾದ ವ್ಯಕ್ತಪಡಿಸಿದೆ ಅವರ ಕುಟುಂಬದೊಂದಿಗೆ ಸಂಪರ್ಕದಲ್ಲಿದ್ದು, ಸಾಧ್ಯವಿರುವ ಎಲ್ಲ ಸಹಾಯವನ್ನು ನೀಡುತ್ತಿದೆ.

'ಓಹಿಯೋದಲ್ಲಿ ಭಾರತೀಯ ಮೂಲದ ವಿದ್ಯಾರ್ಥಿ ಶ್ರೇಯಸ್ ರೆಡ್ಡಿ ಬೆನ್ನಿಗೇರಿ ಅವರ ದುರದೃಷ್ಟಕರ ನಿಧನದಿಂದ ತೀವ್ರ ದುಃಖವಾಗಿದೆ. ಪೊಲೀಸ್ ತನಿಖೆ ನಡೆಯುತ್ತಿದೆ. ಈ ಹಂತದಲ್ಲಿ, ಯಾವುದೇ ಅನುಮಾನವಿಲ್ಲ, ಕಾನ್ಸುಲೇಟ್ ಕುಟುಂಬದೊಂದಿಗೆ ಸಂಪರ್ಕವನ್ನು ಮುಂದುವರೆಸಿ ಅವರಿಗೆ ಸಾಧ್ಯವಿರುವ ಎಲ್ಲ ಸಹಾಯವನ್ನು ನೀಡುತ್ತಿದೆ,' ಎಂದು ನ್ಯೂಯಾರ್ಕ್‌ನಲ್ಲಿರುವ ಭಾರತೀಯ ದೂತಾವಾಸ ಕಚೇರಿ ತಿಳಿಸಿದೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಹೆಚ್ಚಿನ ವಿವರಗಳನ್ನು ನಿರೀಕ್ಷಿಸಲಾಗುತ್ತಿದೆ. ವಿವೇಕ್ ಸೈನಿ ಮತ್ತು ನೀಲ್ ಆಚಾರ್ಯ ಎಂಬ ಭಾರತೀಯ ವಿದ್ಯಾರ್ಥಿಗಳ ಸಾವು ಪ್ರಕರಣ ಸಂಭವಿಸಿದ ವಾರದಲ್ಲಿಯೇ ಮತ್ತೊಬ್ಬ ಭಾರತೀಯ ವಿದ್ಯಾರ್ಥಿಯೊಬ್ಬನ ಸಾವಾಗಿದ್ದು ದುರದೃಷ್ಟಕರವೆನ್ನಬಹುದು.

## ಚುನಾವಣಾ ಶಾಖಾ ಸಿಬ್ಬಂದಿ ಶವ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆ



ರಾಮನಗರ: ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರ ಸ್ವಕ್ಷೇತ್ರ ಕನಕಪುರ ತಾಲೂಕು ಕಚೇರಿಯಲ್ಲಿ ಚುನಾವಣಾ ಶಾಖಾ ಸಿಬ್ಬಂದಿಯೊಬ್ಬರ ಶವ ಶುಕ್ರವಾರ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದೆ.

ತಾಲೂಕು ಕಚೇರಿಯ ಚುನಾವಣಾ ಶಾಖೆ ಕೊಠಡಿಯಲ್ಲಿ ಶಿರಸ್ತೇದಾರ್ ಸುರೇಶ್(45) ಅವರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಆತ್ಮಹತ್ಯೆಗೆ ನಿಖರ ಕಾರಣ ಏನೆಂಬುದು ತಿಳಿದುಬಂದಿಲ್ಲ. ನೇಣು ಬಿಗಿದ ಸ್ಥಿತಿಯಲ್ಲಿ ಶವ ಪತ್ತೆಯಾದ್ದರಿಂದ ಕನಕಪುರ ಟೌನ್ ಪೊಲೀಸರು ಪ್ರಕರಣ ದಾಖಲಿಸಿಕೊಂಡು, ತನಿಖೆ ಆರಂಭಿಸಿದ್ದಾರೆ.

ಘಟನಾ ಸ್ಥಳಕ್ಕೆ ರಾಮನಗರ ಎಸ್ ಪಿ ಕಾರ್ತಿಕ್ ರೆಡ್ಡಿ ಹಾಗೂ ಕನಕಪುರ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ವೇಳೆ ಡೆತ್ ನೋಟ್ ಸಿಕ್ಕಿದ್ದು, ಅದನ್ನು ಕೂಡ ಪರಿಶೀಲನೆ ನಡೆಸಲಾಗುತ್ತಿದೆ.

## ಫೆ.7ರಂದು ದೆಹಲಿಯಲ್ಲಿ ಕಾಂಗ್ರೆಸ್ ನಾಯಕರಿಂದ ಪ್ರತಿಭಟನೆ: ಡಿಸಿಎಂ ಡಿಕೆಶಿ



ಬೆಂಗಳೂರು: ಬರಗಾಲದ ಪರಿಹಾರ ನೀಡಲು ರಾಜ್ಯಕ್ಕೆ ಕೇಂದ್ರ ಸರ್ಕಾರ ಅನ್ಯಾಯ ಮಾಡಿದೆ. ಈ ಹಿನ್ನೆಲೆಯಲ್ಲಿ ಫೆ. 7 ರಂದು ದೆಹಲಿಯಲ್ಲಿ ಹೋರಾಟ ನಡೆಸಲಿದ್ದೇವೆ ಎಂದು ಮಾಜಿ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ತಿಳಿಸಿದರು.

ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈಗಾಗಲೇ ಬರಗಾಲಕ್ಕೆ ಸಂಬಂಧಿಸಿ ಕೇಂದ್ರ ಸಚಿವರನ್ನು ಭೇಟಿ ನೀಡಿ ಪರಿಹಾರಕ್ಕಾಗಿ ಒತ್ತಾಯಿಸಿದ್ದೇವು. ಆದರೆ ಇಲ್ಲಿವರೆಗೆ ಕೇಂದ್ರ ಸ್ಪಂದಿಸಿಲ್ಲ. ನಾವು ಬೇರೆ ರಾಜ್ಯವನ್ನು ಟೀಕೆ ಮಾಡಲು ಹೋಗುವುದಿಲ್ಲ. ದೇಶಕ್ಕೆ ಆರ್ಥಿಕವಾಗಿ ರಾಜ್ಯ ಹೆಚ್ಚು ಕೊಡುಗೆಯನ್ನು ನೀಡಿದೆ. ಈ ಹಿನ್ನೆಲೆಯಲ್ಲಿ ನಮ್ಮ ಪಾಲು ನಮಗೆ ಸಿಕ್ಕಿದರೇ ಸಾಕು ಎಂದು ಒತ್ತಾಯಿಸಿದರು.

ಪ್ರತಿ ವರ್ಷ ಕೇಂದ್ರದಿಂದ ಪರಿಹಾರಧನ ಕಡಿಮೆ ಆಗುತ್ತಿದೆ. ಈ ಹಿನ್ನೆಲೆಯಲ್ಲಿ 7ರಂದು ಬೆಳಗ್ಗೆ 10: 30ಗೆ ಕಾಂಗ್ರೆಸ್‌ನ ಎಲ್ಲಾ ಸಂಸದರು ಶಾಸಕರು ದೆಹಲಿಯಲ್ಲಿ ಪ್ರತಿಭಟನೆ ಮಾಡುತ್ತೇವೆ. ಪಕ್ಷಭೇಧ ಮರೆತು ಕಾಂಗ್ರೆಸ್ ರಾಜ್ಯದ ಜನರ ಹಿತ ಕಾಪಾಡುತ್ತದೆ. ಯಾರೂ ಬೇಕಾದರೂ ಈ ಹೋರಾಟಕ್ಕೆ ಪಾಲ್ಗೊಳ್ಳಬಹುದು. ಈ ವೇಳೆ ಕೇಂದ್ರದಿಂದ ಯಾವ ಯಾವ ರೀತಿಯ ಅನ್ಯಾಯವಾಗಿದೆ ಎಂದು ತಿಳಿಸುತ್ತೇವೆ ಎಂದು ಹೇಳಿದರು.

## ರೂಪದರ್ಶಿ ಪೂನಂ ಪಾಂಡೆ ಇನ್ನಿಲ್ಲ



ಮುಂಬೈ: ಭಾರತೀಯ ರೂಪದರ್ಶಿ ಪೂನಂ ಪಾಂಡೆ ನಿಧನರಾಗಿದ್ದಾರೆ ಎಂದು ಅವರ ಮ್ಯಾನೇಜರ್ ಸಾಮಾಜಿಕ ಜಾಲತಾಣದಲ್ಲಿ ಹೇಳಿಕೊಂಡಿದ್ದಾರೆ.

32 ವರ್ಷ ವಯಸ್ಸಿನ ಅವರು ಗರ್ಭಕಂಠದ ಕ್ಯಾನ್ಸರ್‌ನಿಂದ ಬಳಲುತ್ತಿದ್ದರು. ಚಿಕಿತ್ಸೆ ಫಲಿಸದೆ ನಟಿ ಪೂನಂ ಪಾಂಡೆ ನಿಧನರಾಗಿದ್ದಾರೆಂದು ಅವರ ಮ್ಯಾನೇಜರ್ ತಿಳಿಸಿದ್ದಾರೆ.

ಪೂನಂ ಪಾಂಡೆ 11 ಮಾರ್ಚ್ 1991ರಂದು ಕಾನ್ಪುರದಲ್ಲಿ ಜನಿಸಿದರು. ಶೋಭಾನಾಥ್ ಪಾಂಡೆ ಮತ್ತು ವಿದ್ಯಾ ಪಾಂಡೆಯ ಮಗಳಾಗಿ ಜನಿಸಿದ ಈಕೆ ಮಾಡೆಲಿಂಗ್ ಕ್ಷೇತ್ರದಲ್ಲಿ ಗುರುತಿಸಿಕೊಂಡಿದ್ದರು. ಮೃತ ಪೂನಂ ಪಾಂಡೆ ಶ್ರದ್ಧಾ ಪಾಂಡೆ ಮತ್ತು ನಿಲೇಶ್ ಪಾಂಡೆ ಎಂಬ ಸಹೋದರ, ಸಹೋದರಿಯನ್ನು ಬಿಟ್ಟು ಅಗಲಿದ್ದಾರೆ.

## ಕುಮಾರಸ್ವಾಮಿ ಅವರಿಂದ ನಾನು ಲೀಡರ್ ಆಗಿಲ್ಲ, ಮಂಡ್ಯವನ್ನು ಮಂಗಳೂರು ಆಗೋಕೆ ಬಿಡಲ್ಲ: ಚಲುವರಾಯಸ್ವಾಮಿ ಕಿಡಿ



ಮಂಡ್ಯ: ಮಾಜಿ ಸಿಎಂ ಎಚ್ ಡಿ ಕುಮಾರಸ್ವಾಮಿ ಮತ್ತು ಸಚಿವ ಚಲುವರಾಯಸ್ವಾಮಿ ನಡುವಿನ ವಾಕ್ಸಮರ ಮುಂದುವರಿದಿದೆ. ಹೆಚ್.ಡಿ ಕುಮಾರಸ್ವಾಮಿಯಿಂದ ನಾನು ಲೀಡರ್ ಆಗಿಲ್ಲ. ಅವರಿಂದ ವಿನಯತೆ ಹೇಳಿಸಿಕೊಳ್ಳುವ ಅಗತ್ಯ ನನಗಿಲ್ಲ ಎಂದು ಕೃಷಿ ಸಚಿವ ಚಲುವರಾಯಸ್ವಾಮಿ ಕಿಡಿಕಾರಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನೇನು ಕುಮಾರಸ್ವಾಮಿ ಅವರ ಮನೆ ಋಣದಲ್ಲಿ ಇದ್ದೇನಾ? ನಾನೇನೂ ಅವರ ಆಸ್ತಿ ತಿಂದಿದ್ದೇನಾ? ಗೌರವ ಬೇಡ ಎನ್ನಲಿ. ಅವರು ಮಾತಾಡಿದ್ದಕ್ಕಿಂತ ಬೇರೆ ರೀತಿಯೇ ನಾನು ಅವರಿಗೆ ಮಾತನಾಡುತ್ತೇನೆ. ಕುಮಾರಸ್ವಾಮಿ ಕೈಯಲ್ಲಿ ನನ್ನ ಹಣೆಬರಹ ಬರೆಯಲಾಗುತ್ತಾ? ಕುಮಾರಸ್ವಾಮಿ ಅವರ ವಿಚಾರವೇ ಪ್ರಸ್ತುತ ಅಲ್ಲ ಎಂದು ಆಕ್ರೋಶ ವ್ಯಕ್ತ ಪಡಿಸಿದ್ದಾರೆ.

ದೇವೇಗೌಡರ ಮೇಲಿನ ಗೌರವಕ್ಕಾಗಿ ಮಾತ್ರ ಸುಮ್ಮನಿದ್ದೀನಿ. ದೇವೇಗೌಡರ ಹೆಸರು ಅವರ ಜೊತೆ ಇಲ್ಲದಿದ್ದರೆ ಅದರ ಅಪ್ಪನಂಗೆ ನಾನು ಕುಮಾರಸ್ವಾಮಿಗೆ ಉತ್ತರ ಕೊಡುತ್ತಿದ್ದೆ ಎಂದು ಚಲುವರಾಯಸ್ವಾಮಿ ಅವರು ತಿರುಗೇಟು ನೀಡಿದರು.

ರಾಮಕೃಷ್ಣ ಹೆಗಡೆ, ಜೆ.ಎಚ್. ಪಟೇಲ್, ಬೈರೇಗೌಡ ಇವರನ್ನು ಜೆಡಿಎಸ್ ನಿಂದ ಹೊರ ಕಳುಹಿಸಿದ್ದು ಯಾರೆಂದು ಕುಮಾರಸ್ವಾಮಿ ಹೇಳಲಿ. ಮಂಡ್ಯ ಇವರಿಗೆ ಕೊಟ್ಟ ಗೌರವಕ್ಕೆ ಈಗ ಅಶಾಂತಿ, ಗಲಭೆಯ ರಿಟರ್ನ್ಸ್ ಕೊಡ್ತಿದ್ದಾರಾ ಎಂದರು.

ಮಂಡ್ಯದ ಅಭಿವೃದ್ಧಿ ಬಗ್ಗೆ ದಳಪತಿಗಳಿಂದ ಚರ್ಚೆ ಗೆ ಆಹ್ವಾನ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಚಲುವರಾಯಸ್ವಾಮಿ, ಅವರಿಗೆ ನಾಚಿಕೆ ಆಗಬೇಕು. ಒಂದು ಅಂಗನವಾಡಿ ಕಟ್ಟಡ ಕಟ್ಟಲು ಆಗಿಲ್ಲ. ಅವರೇನೂ ಅಭಿವೃದ್ಧಿ ಬಗ್ಗೆ ಚರ್ಚೆ ಮಾಡುತ್ತಾರೆ? ಹಿಟ್ ಅಂಡ್ ರನ್ ಕೇಸ್ ಅವರದ್ದು.

ಮಂಡ್ಯಗೆ ಬರಲು ಹೇಳಿ, ಇಲ್ಲದಿದ್ದರೆ ವಿಧಾನಸಭೆಯಲ್ಲೇ ಒಂದು ದಿನ ಮಂಡ್ಯ ಅಭಿವೃದ್ಧಿ ವಿಚಾರದಲ್ಲಿ ಚರ್ಚೆ ಮಾಡೋಣಾ. ನಾನು ಸ್ಪೀಕರ್ ಗೆ ಸಮಯ ಕೇಳುತ್ತೇನೆ. ಒಂದು ಇಡೀ ದಿನ ಕಲಾಪದಲ್ಲೇ ಚರ್ಚೆ ಮಾಡೋಣಾ. ಅವರ ಅಭಿವೃದ್ಧಿ ಶೂನ್ಯ.

ಮಂಡ್ಯ ಅಭಿವೃದ್ಧಿ ಮಾಡಿದ್ದರೆ ಎಂಟು ಜನ ಯಾಕೆ ಸೋತರು ಎಂದು ಪ್ರಶ್ನಿಸಿದರು. ಇನ್ನೂ ಮಂಡ್ಯ ಬಂದ್ ಬಗ್ಗೆ ಪ್ರತಿಕ್ರಿಯಿಸಿದ ಅವರು, ಮಂಡ್ಯವನ್ನು ಮಂಗಳೂರು ಮಾಡುವುದಕ್ಕೆ ಬಿಡಲ್ಲ. ಜನರೇ ಬಂದ್ ವಿರುದ್ದ ತಿರುಗಿ ಬಿದ್ದಿದ್ದಾರೆ ಎಂದು ಗುಡುಗಿದರು.

## ದೇಶದ ಸರ್ವತೋಮುಖ ಅಭಿವೃದ್ಧಿಗೆ ಮಧ್ಯಂತರ ಬಜೆಟ್–2024 ಪೂರಕವಾದ ಬಜೆಟ್



ಬೆಳಗಾವಿ: ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಸಂಸದನಲ್ಲಿ ಮಂಡಿಸಿದ ಮಧ್ಯಂತರ ಬಜೆಟ್–2024 ಬಡವರ, ಮಹಿಳೆಯರ, ಯುವಜನತೆ ಮತ್ತು ರೈತಪರ ಹಾಗೂ ದೇಶದ ಸರ್ವತೋಮುಖ ಅಭಿವೃದ್ಧಿಗೆ ಪೂರಕ ಬಜೆಟ್ ಇದಾಗಿದ್ದು. ಇದು ತಮಗೆ ಸಂತಸ ತಂದಿದೆ ಎಂದು ಬೆಳಗಾವಿ ಲೋಕಸಭಾ ಸದಸ್ಯರಾದ ಮಂಗಲ ಅಂಗಡಿ ಅವರು ತಿಳಿಸಿದ್ದಾರೆ.

ಪ್ರಸಕ್ತ ಬಜೆಟ್‌ನಲ್ಲಿ ಬಡಜನ ಹಾಗೂ ಮಧ್ಯಮ ವರ್ಗಕ್ಕೆ ಮನೆಗಳ ನಿರ್ಮಾಣಕ್ಕೆ ಯೋಜನೆ ಘೋಷಿಸಲಾಗಿದೆ. ಪ್ರಧಾನ ಮಂತ್ರಿ ಅವಾಸ್ ಯೋಜನೆ (ಗ್ರಾಮೀಣ) ಅಡಿಯಲ್ಲಿ ಎರಡು ಕೋಟಿ ಮನೆಗಳನ್ನು ಮುಂದಿನ ಐದು ವರ್ಷಗಳಲ್ಲಿ ನಿರ್ಮಿಸುವ ಗುರಿ ಹೊಂದಲಾಗಿದೆ. ಅದರಂತೆ ಪ್ರವಾಸೋದ್ಯಮ ಕ್ಷೇತ್ರದ ಬೆಳವಣಿಗೆಗೆ ಕೇಂದ್ರದಿಂದ ರೂ. 75,000 ಕೋಟಿ ಅನುದಾನ ದೀರ್ಘಾವಧಿ ಬಡ್ಡಿ ರಹಿತ ಸಾಲವನ್ನಾಗಿ ರಾಜ್ಯ ಸರ್ಕಾರಗಳಿಗೆ ನೀಡಲು ಮೀಸಲಿಡಲಾಗಿದ್ದು ಯುವ ಜನತೆಗೆ ಹೆಚ್ಚಿನ ಸಂಖ್ಯೆಯಲ್ಲಿ ಉದ್ಯೋಗವಕಾಶ ದೊರಕುವಂತಾಗುತ್ತದೆ.

ಅಂಗನವಾಡಿ, ಆಶಾ ಕಾರ್ಯಕರ್ತರಿಗೆ "ಆಯುಷ್ಯಮಾನ ಯೋಜನೆ" ವ್ಯಾಪ್ತಿಗೆ ಸೇರಿಸಿದ್ದು, ಮಹಿಳೆಯರಲ್ಲಿ ಗರ್ಭಕೋಶ ಕ್ಯಾನ್ಸರ್ ತಡೆಯಲು ಸಹ ಲಸಿಕೆ ನೀಡುವ ಯೋಜನೆ ರೋಪಿಸಿದೆ. ಇನ್ನು ರೈಲಿನಲ್ಲಿ ಸುಗಮ ಹಾಗೂ ಸುರಕ್ಷಿತ ಸಂಚಾರ ಕೈಗೊಳ್ಳಲು ಸುಮಾರು 40,000 ಬೋಗಿಗಳನ್ನು "ವಂದೇ ಭಾರತ್" ಮಾದರಿಯ ಕೋಚ್ ಗಳನ್ನಾಗಿ ಬದಲಾಯಿಸುವ ಗುರಿ ಹೊಂದಲಾಗಿದ್ದು ಇನ್ನು ಮುಂದೆ ಸಣ್ಣ ಪುಟ್ಟ ನಗರಗಳಿಗೆ ಸಹ ಮೆಟ್ರೋ ಸೌಲಭ್ಯ ವಿಸ್ತರ್ಣೆಗೆ ಯೋಜನೆ ರೂಪಿಸಲಾಗಿದೆ.

ವಿಶೇಷವೆಂದರೆ ಕಳೆದ 10 ವರ್ಷದ ಸನ್ 2047 ರಲ್ಲಿ ನಮ್ಮ ಭಾರತ ದೇಶವನ್ನು ಅವಧಿಯಲ್ಲಿ ತೆರಿಗೆ ಸಂಗ್ರಹಣೆ ದುಪ್ಪಟ್ಟು ಆಗಿದ್ದು, ಒಟ್ಟಿನಲ್ಲಿ "ವಿಕಸಿತ್ ಭಾರತ" ವನ್ನಾಗಿಸುವಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಕಂಡ ಕನಸು ಖಂಡಿತವಾಗಿಯು ನನಸಾಗುವುದರಲ್ಲಿ ಈ ಬಜೆಟ್ ಸಹಕಾರಿಯಾಗಲಿದೆ ಎಂದು ಬೆಳಗಾವಿ ಸಂಸದೆ ಮಂಗಲ ಅಂಗಡಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




## ಪೊಲೀಸ್ ದಂಪತಿಗಳ ಅಂತರ್ ಜಿಲ್ಲಾ ವರ್ಗಾವಣೆ ನಿಯಮ ಸಡಿಲಿಕೆಗೆ ಕ್ರಮ

ಬೆಂಗಳೂರು: ಪೊಲೀಸ್ ದಂಪತಿಗಳ ಅಂತರ್ ಜಿಲ್ಲಾ ವರ್ಗಾವಣೆಗೆ ಕೆಲ ನಿಯಮಗಳನ್ನು ಮಾಡಬೇಕು. ಈಗಿರುವ ನಿಯಮಗಳು ಕಠಿಣವಾಗಿದ್ದು, ಅವುಗಳನ್ನು ಸಡಿಲಗೊಳಿಸಬೇಕಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ ಹೇಳಿದ್ದಾರೆ.

ಸದಾಶಿವ ನಗರದ ತಮ್ಮ ನಿವಾಸದ ಬಳಿ ಮಾತನಾಡಿದ ಅವರು, ಪೊಲೀಸ್ ಪತಿ–ಪತ್ನಿಯರು, ಉತ್ತರ ಕರ್ನಾಟಕ ಭಾಗದವರು ಎಂಟತ್ತು ವರ್ಷಗಳಿಂದ ಕೆಲಸ ಮಾಡುತ್ತಿದ್ದಾರೆ. ಸ್ವಾಭಾವಿಕವಾಗಿ ಅವರಿಗೆ ತಮ್ಮ ಊರುಗಳ ಕಡೆ ಕೆಲಸ ಮಾಡಬೇಕೆಂಬ ಆಸೆ ಇರುತ್ತದೆ. ಪ್ರಾವಿಸನ್ ಹೇಗೆ ಮಾಡಬೇಕು ಎಂಬುದನ್ನು ಕಾನೂನಿನಲ್ಲಿ ನಿಯಮಗಳನ್ನು ತಿದ್ದುಪಡಿ ಮಾಡುತ್ತೇವೆ ಎಂದರು.

## ಬೆಳಗಾವಿ ಗ್ರಾಮೀಣ ಕ್ಷೇತ್ರಕ್ಕೆ ಬಂಪರ್ ಕೊಡುಗೆ : 800 ಕೋಟಿ ರೂ. ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಪ್ರಸ್ತಾವನೆಗೆ ಸಂಪುಟ ಒಪ್ಪಿಗೆ



ಬೆಂಗಳೂರು: ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ಮಂಡಿಸಿದ್ದ ಬೆಳಗಾವಿ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಸುಮಾರು 800 ಕೋಟಿ ರೂ.ಗಳ ಪ್ರಸ್ತಾವನೆಗೆ ಸಚಿವಸಂಪುಟಚ ಒಪ್ಪಿಗೆ ನೀಡಿದೆ.

ಗುರುವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಯೋಜನೆಗೆ ಮೂಜುರು ನೀಡಲಾಯಿತು. ಲಕ್ಷ್ಮೀ ಹೆಬ್ಬಾಳಕರ್ ಅವರು ಕನಸಿನ ಯೋಜನೆ ಹಿರೇಬಾಗೇವಾಡಿಯ 61 ಕೆರೆಗಳನ್ನು ತುಂಬಿಸುವ 519.10 ಕೋಟಿ ರೂ.ಗಳ ಅಂದಾಜು ಮೊತ್ತದ ಪರಿಷ್ಕೃತ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಕಳೆದ ಸುಮಾರು 5 ವರ್ಷದಿಂದ ಲಕ್ಷ್ಮೀ ಹೆಬ್ಬಾಳಕರ್ ಅವರು ಈ ಯೋಜನೆಗಾಗಿ ಪಟ್ಟು ಹಿಡಿದಿದ್ದರು. ನಂತರದಲ್ಲಿ ಕೆಲವರ ಅಡ್ಡಗಾಲಿನಿಂದಾಗಿ ಯೋಜನೆ ನನೆಗುದಿಗೆ ಬಿದ್ದಿತ್ತು. ಆದರೆ ಪಟ್ಟು ಬಿಡದ ಹೆಬ್ಬಾಳಕರ್ ಇದೀಗ ಯೋಜನೆ ಮಂಜೂರು ಮಾಡಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಹಾಗೆಯೇ, ಬೆಳಗಾವಿ ತಾಲ್ಲೂಕಿನ ಉಚಗಾಂವ್ ಹಾಗೂ ಸಂತಿಬಸ್ತವಾಡ ಹೋಬಳಿಯ 20 ಕೆರೆಗಳನ್ನು ತುಂಬಿಸುವ 287.55 ಕೋಟಿ ರೂ. ಯೋಜನಾ ವರದಿಗೆ ಸಹ ಸಚಿವಸಂಪುಟ ಒಪ್ಪಿಗೆ ನೀಡಿದೆ. ಈ ಬಹುಬೇಡಿಕೆಯ ಯೋಜನೆಗಳನ್ನು ಮಂಜೂರು ಮಾಡಿಸಿದ್ದಕ್ಕಾಗಿ ಕ್ಷೇತ್ರದ ಜನರು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರಿಗೆ ಧನ್ಯವಾದ ಸಲ್ಲಿಸಿದ್ದಾರೆ.

ಸಂಪುಟದಲ್ಲಿ ಒಪ್ಪಿಗೆ ನೀಡಿದ್ದಕ್ಕಾಗಿ ಲಕ್ಷ್ಮೀ ಹೆಬ್ಬಾಳಕರ್ ಮುಖ್ಯಮಂತ್ರಿಗಳು, ಉಪಮುಖ್ಯಮಂತ್ರಿಗಳು ಹಾಗೂ ಸಂಪುಟದ ಎಲ್ಲ ಸಚಿವರಿಗೆ ಧನ್ಯವಾದ ಸಲ್ಲಿಸಿದ್ದಾರೆ.

## ಉತ್ತರ ಕನ್ನಡ ಜಿಲ್ಲೆ ಭೀತಿ ಹುಟ್ಟಿಸಿದ ಮಂಗನ ಕಾಯಿಲೆ: 21 ಮಂದಿಯಲ್ಲಿ ಸೋಂಕು ಪತ್ತೆ



ಕಾರವಾರ: ಉತ್ತರ ಕನ್ನಡ ಜಿಲ್ಲೆಯಲ್ಲಿ ಮಂಗನ ಕಾಯಿಲೆ ಆತಂಕ ಹುಟ್ಟಿಸಿದ್ದು, ಈ ವರೆಗೂ 21 ಮಂದಿಯಲ್ಲಿ ಸೋಂಕು ಪತ್ತೆಯಾಗಿದೆ ಎಂದು ತಿಳಿದುಬಂದಿದೆ.

ಸಿದ್ದಾಪುರ ತಾಲೂಕಿನಲ್ಲಿ ಮಂಗನ ಕಾಯಿಲೆ ಕಂಡು ಬರುತ್ತಿದೆ. ಬುಧವಾರ ಒಂದೇ ದಿನ 16 ಪ್ರಕರಣಗಳು ಪತ್ತೆಯಾಗಿದೆ. ಬಿಸಿಲು ಹೆಚ್ಚಾದಂತೆ ಕಾಯಿಲೆ ಹೆಚ್ಚಾಗುವ ಆತಂಕ ಜನರಲ್ಲಿ ಮನೆ ಮಾಡಿದೆ.

ಸೋಂಕು ಹರಡುವಿಕೆ ತಡೆಗೆ ಸದ್ಯ ರೋಗ ನಿರೋಧಕ ಲಸಿಕೆ ಇಲ್ಲ. ಹೀಗಾಗಿ ಮುನ್ನೆಚ್ಚರಿಕೆ ಕ್ರಮ ವಹಿಸಿಕೊಳ್ಳುವುದೊಂದೇ ದಾರಿ ಮತ್ತು ಅತೀ ಅವಶ್ಯಕ ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ. ನೀರಜ್ ಅವರು ಹೇಳಿದ್ದಾರೆ.

ಮಂಗನ ಕಾಯಿಲೆ ಎಂಬುದು ಮಂಗಗಳಿಗೆ ಸೋಂಕು ತಗುಲಿಸುವ ವೈರಸ್‌ನಿಂದ ಉಂಟಾಗುವ ಕಾಯಿಲೆಯಾಗಿದೆ. ಕಾಡುಗಳಲ್ಲಿ ಜಾನುವಾರುಗಳನ್ನು ಮೇಯಿಸಲು ಹೋಗುವ ಜನರಿಗೆ ಸೋಂಕು ತಗುಲುವ ಸಾಧ್ಯತೆಗಳು ಹೆಚ್ಚಾಗಿರುತ್ತವೆ. ಒಣ ವಾತಾವರಣದಲ್ಲಿ ಈ ವೈರಲ್ ಗಳು ಬದುಕುಳಿಯುವ ಸಾಧ್ಯತೆಗಳು ಹೆಚ್ಚಾಗಿರುತ್ತವೆ. ಹೀಗಾಗಿ ರೋಗ ಉಲ್ಬಣಕ್ಕೆ ಬರ ಕೂಡ ಒಂದು ಕಾರಣವಾಗಿರಬಹುದು. ಆದರೆ, ಪರಿಸ್ಥಿತಿ ಎದುರಿಸಲು ನಾವು ಸನ್ನದ್ಧರಾಗಿದ್ದೇವೆಂದು ತಿಳಿಸಿದ್ದಾರೆ. ಕಳೆದ ವರ್ಷ ಯಾವುದೇ ಪ್ರಕರಣಗಳು ಪತ್ತೆಯಾಗಿರಲಿಲ್ಲ. ಆದರೆ, ಇತ್ತೀಚಿನ ದಿನಗಳಲ್ಲಿ ಏಕಾಏಕಿ ಸೋಂಕು ಉಲ್ಬಣಗೊಳ್ಳುತ್ತಿದೆ. ವೈದ್ಯಕೀಯ ಸಿಬ್ಬಂದಿಗಳ ಅಲರ್ಟ್ ಆಗಿದ್ದು, ರೋಗ ಹರಡುವ ಸಾಧ್ಯತೆ ಇರುವ ಸ್ಥಳಗಳಲ್ಲಿ ನಾವು ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳುತ್ತಿದ್ದೇವೆಂದು ಹೇಳಿದ್ದಾರೆ.

ಜೋಯಿಡಾ, ಕುಂಬಾರವಾಡ ಸುತ್ತಮುತ್ತಲಿನ ಸ್ಥಳಗಳು ಎಚ್ಚರಿಕೆ ವಹಿಸಲಾಗಿದೆ. ಸೋಂಕಿತರ ಸಾವು ಮತ್ತು ಸೋಂಕು ಪ್ರಕರಣಗಳ ಮೇಲೆ ನಿಗಾ ಇಡುವಂತ ಸಿಬ್ಬಂದಿಗಳಿಗೆ ಸೂಚಿಸಲಾಗಿದೆ. ಆಸ್ಪತ್ರೆಗಳಲ್ಲಿ ಸಮೀಕ್ಷೆ ನಡೆಸುವಂತೆ ಹಾಗೂ ಅಗತ್ಯ ಔಷಧಿಗಳ ಸಂಗ್ರಹಿಸುವಂತೆ ತಿಳಿಸಲಾಗಿದೆ. ಸೋಂಕು ಉಲ್ಬಣಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ಜೀವನೋಪಾಯಕ್ಕಾಗಿ ಅರಣ್ಯವನ್ನು ಅವಲಂಬಿಸಿರುವ ಜನರು ಅರಣ್ಯ ಪ್ರದೇಶಗಳಿಗೆ ಹೋಗದಂತೆಯೂ ತಿಳಿಸಲಾಗಿದೆ ಎಂದು ಜಿಲ್ಲಾ ಆರೋಗ್ಯಾಧಿಕಾರಿಗಳು ಹೇಳಿದ್ದಾರೆ.

## ನಿಧಿ ಆಸೆ: ಬಸವಣ್ಣನ ಮೂರ್ತಿಯ, ಶಿವಲಿಂಗ ವಿಗ್ರಹ ವಿರೂಪಗೊಳಿಸಿದ ದುಷ್ಕರ್ಮಿಗಳು



ರಾಯಚೂರು: ನಿಧಿ ಆಸೆಗೆ ದೇವರ ಮೂರ್ತಿ ಭಗ್ನಗೊಳಿಸಿದ ಘಟನೆ ಜಿಲ್ಲೆಯ ಲಿಂಗಸುಗೂರು ತಾಲೂಕಿನ ಕರಡಕಲ್ಲನಲ್ಲಿ ನಡೆದಿದೆ.

ಬಿಲ್ಲಮರಾಜನ ಬೆಟ್ಟದ ಕೆಳಭಾಗದ ಗುರುಲಿಂಗೇಶ್ವರ ಕರ್ತೃ ಗದ್ದುಗೆಯ ಈಶ್ವರ ಲಿಂಗ ಮತ್ತು ಬಸವಣ್ಣ ಮೂರ್ತಿಗಳು ಭಗ್ನಗೊಂಡಿವೆ. ಈಶ್ವರ ಮೂರ್ತಿಯ ಮೇಲ್ಭಾಗಕ್ಕೆ ಹಾನಿಯಾಗಿದೆ. ಬಸವಣ್ಣ ಮೂರ್ತಿಯ ಕುತ್ತಿಗೆಯನ್ನು ಕತ್ತರಿಸಿದ್ದಾರೆ.

ಗದ್ದುಗೆ ಹಿಂಭಾಗದಲ್ಲಿ ಆಳವಾದ ಗುಂಡಿಯನ್ನೂ ಅಗೆಯಲಾಗಿದೆ. ನಿಧಿಗಳ್ಳರ ಹಾವಳಿಗೆ ಐತಿಹಾಸಿಕ ಸ್ಥಳ, ದೇವರ ಮೂರ್ತಿ ನೆಲಸಮ ಆಗುತ್ತಿರೋದಕ್ಕೆ ಸ್ಥಳೀಯಕರು ಕಳವಳ ವ್ಯಕ್ತಪಡಿಸಿದ್ದಾರೆ. ದೇವರು ಮೂರ್ತಿಗಳನ್ನು ಭಗ್ನಗೊಳಿಸಿರುವವರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳುವಂತೆ ಒತ್ತಾಯಿಸಿದ್ದಾರೆ.

## ಅಭಿಮಾನಿಗೆ ಸರ್ಪ್ರೈಸ್ ಕೊಟ್ಟ ಕ್ರಿಕೆಟ್ ದೇವರು



ಮುಂಬೈ:ಕ್ರಿಕೆಟ್ ದೇವರು ಸಚಿನ್ ತೆಂಡುಲ್ಕರ್ ಅಭಿಮಾನಿಯೊಬ್ಬರಿಗೆ ಬಿಗ್ ಸರ್ಪ್ರೈಸ್ ನೀಡಿದ್ದಾರೆ. ಮುಂಬೈನ ರಸ್ತೆ ಒಂದರಲ್ಲಿ ತೆಂಡುಲ್ಕರ್ ಅಭಿಮಾನಿಯೊಬ್ಬ ಬೈಕ್ ಮೇಲೆ ಹೋಗುತ್ತಿದ್ದ. ಈ ಅಭಿಮಾನಿ ಐಪಿಎಲ್ ಫ್ರಾಂಚೈಸಿ ಮುಂಬೈ ಇಂಡಿಯನ್ಸ್ ಜರ್ಸಿ ತೊಟ್ಟಿದ್ದ. ಅದರ ಹಿಂದೆ 10, ಖ ಝ ಥಿಠಣ ಎಂದು ಬರೆಯಲಾಗಿತ್ತು. ಹಿಂಬದಿಯಿಂದ ಜರ್ಸಿ ನೋಡ್ತಿದ್ದಂತೆಯೇ ಆತ ತೆಂಡುಲ್ಕರ್ ಅಭಿಮಾನಿ ಅನ್ನೋದು ದೃಢವಾಗುತ್ತಿತ್ತು. ಅದೇ ಮಾರ್ಗವಾಗಿ ತೆಂಡುಲ್ಕರ್ ಕೂಡ ಹೋಗುತ್ತಿದ್ದರು. ಅಭಿಮಾನಿ ಧರಿಸಿದ್ದ ಜರ್ಸಿ ತೆಂಡುಲ್ಕರ್ ಕಣ್ಣಿಗೆ ಬಿದ್ದಿದೆ. ಆಗ ಸಚಿನ್ಗೆ ಆತನನ್ನು ಮಾತನಾಡಿಸುವ ಬಯಕೆ ಆಗಿದೆ.

ಕೂಡಲೇ ಕಾರಿನ ಮೂಲಕ ಬೈಕ್ ಚೇಸ್ ಮಾಡುತ್ತಾರೆ. ಆತ ಬೈಕ್ ನಿಲ್ಲಿಸುತ್ತಿದ್ದಂತೆಯೇ, ಕಾರಿನ ವಿಂಡೋ ಓಪನ್ ಮಾಡಿದ ಕ್ರಿಕೆಟ್ ದೇವರು, ವಿಮಾನ ನಿಲ್ದಾಣಕ್ಕೆ ಹೋಗುವ ರಸ್ತೆ ಬಗ್ಗೆ ಕೇಳಬೇಕಿತ್ತು ಎಂದು ಕೇಳುತ್ತಾರೆ.

ಆಗ ಸಚಿನ್‌ರನ್ನು ನೋಡ್ತಿದ್ದಂತೆ ಅಭಿಮಾನಿ ಬಿಗ್‌ಸರ್ಪ್ರೈಸ್ ಆಗ್ತಾರೆ. ಸರ್.. ಸರ್.. ಎಂದು ಕೈಮುಗಿಯುತ್ತಾರೆ. ಕೊನೆಗೆ ಅಭಿಮಾನಿ ಜೊತೆ ತೆಂಡುಲ್ಕರ್ ಮಾತುಕತೆ ನಡೆಸ್ತಾರೆ..ಕೊನೆಗೆ ಸಚಿನ್ ಪ್ರೀತಿಯ ಅಭಿಮಾನಿಗೆ ಆಟೋಗ್ರಾಫ್ ನೀಡಿದ್ದಾರೆ. ಈ ಅಭಿಮಾನಿಯನ್ನು ಭೇಟಿಯಾದ ಅನುಭವವನ್ನ ತೆಂಡುಲ್ಕರ್ ಟ್ವಿಟರ್ನಲ್ಲಿ ಹಂಚಿಕೊಂಡಿದ್ದಾರೆ.

## ಫೆ.4 ರಂದು ಶ್ರೀ ನಿಜ ಶರಣ ಅಂಬಿಗರ ಚೌಡಯ್ಯನವರ ಜಯಂತಿ ಉತ್ಸವ

ಬೆಳಗಾವಿ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತ ಆಶ್ರಯದಲ್ಲಿ ಫೆ.4 ರಂದು ಬೆಳಿಗ್ಗೆ 11 ಗಂಟೆಗೆ ಸರ್ದಾರ ಹೈಸ್ಕೂಲ್ ಮೈದಾನದಲ್ಲಿ ಶ್ರೀ ನಿಜ ಅಂಬಿಗರ ಚೌಡಯ್ಯನವರ ಜಯಂತಿ ಉತ್ಸವ ಕಾರ್ಯಕ್ರಮ ನಡೆಯಲಿದೆ.

ಕೋಟೆ ಕೆರೆಯಿಂದ ಸರ್ದಾರ ಹೈಸ್ಕೂಲ್ ಮೈದಾನದ ವರೆಗೆ ಬೆಳಗ್ಗೆ 8 ಗಂಟೆಗೆ ಶ್ರೀ ನಿಜ ಅಂಭಿಗರ ಚೌಡಯ್ಯನವರ ಭಾವಚಿತ್ರದ ಮೆರವಣಿಗೆ ನಡೆಯಲಿದೆ.

ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿ ಅವರು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಅವರು ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಬೆಳಗಾವಿ ಉತ್ತರ ವಿಧಾನ ಸಭೆ ಮತ ಕ್ಷೇತ್ರದ ಶಾಸಕರಾದ ಆಸೀಫ್ (ರಾಜು) ಸೇಠ್ ಅಧ್ಯಕ್ಷತೆಯನ್ನು ವಹಿಸಲ್ಲಿದ್ದಾರೆ.

ವಿಧಾನಸಭೆ ಸರ್ಕಾರಿ ಮುಖ್ಯ ಸಚೇತಕರಾದ ಅಶೋಕ ಪಟ್ಟಣ, ನವದೆಹಲಿಯ ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿ–2 ಪ್ರಕಾಶ ಹುಕ್ಕೇರಿ, ವಾಯವ್ಯ ಸಾರಿಗೆ ನಿಗಮ ನಿಯಮಿತ ಅಧ್ಯಕ್ಷರಾದ ಭರಮಗೌಡ ಕಾಗೆ, ಹಣಕಾಸು ಸಂಸ್ಥೆ ಅಧ್ಯಕ್ಷರಾದ ಮಹಾಂತೇಶ ಕೌಜಲಗಿ ವಿಶೇಷ ಆಮಂತ್ರಣರಾಗಿ ಆಗಮಿಸಲಿದ್ದಾರೆ.

ಜಿಲ್ಲಾ ಕೋಳಿ ಬೆಸ್ತ ಸಮಾಜ ಸಂಘದ ಅಧ್ಯಕ್ಷರಾದ ದಿಲೀಪ ಕುಮಾರ ಕುರಂದವಾಡೆ ಅವರು ಆಮಂತ್ರಿತರಾಗಿ ಇರಲಿದ್ದಾರೆ.

ಪ್ರಾದೇಶಿಕ ಆಯುಕ್ತರಾದ ಸಂಜಯ ಶೆಟ್ಟೆಣ್ಣವರ, ಉತ್ತರ ವಲಯ ಪೊಲೀಸ್ ಮಹಾನಿರೀಕ್ಷರಾದ ವಿಕಾಶ್ ಕುಮಾರ ವಿಕಾಶ್, ಜಿಲ್ಲಾಧಿಕಾರಿಗಳಾದ ನಿತೇಶ್ ಪಾಟೀಲ, ನಗರ ಪೊಲೀಸ್ ಆಯುಕ್ತರಾದ ಎಸ್.ಎನ್. ಸಿದ್ದರಾಮಪ್ಪ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಡಾ. ಭೀಮಾಶಂಕರ ಎಸ್. ಗುಳೇದ, ಜಿಲ್ಲಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ಶಿಂಧೆ, ಮಹಾನಗರ ಪಾಲಿಕೆ ಆಯುಕ್ತರಾದ ಅಶೋಕ ದುಡಗುಂಟಿ ಕಾರ್ಯಕ್ರಮದಲ್ಲಿ ಉಪಸ್ಥಿತರಿರಲಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕರಾದ ವಿದ್ಯಾವತಿ ಭಜಂತ್ರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಫೆ. 10ಕ್ಕೆ ಗಾಜನೂರು ಜವಾಹರ ನವೋದಯ ವಿದ್ಯಾಲಯ ಪ್ರವೇಶ ಪರೀಕ್ಷೆ

ಶಿವಮೊಗ್ಗ: ಶಿವಮೊಗ್ಗ ಜಿಲ್ಲೆ ಗಾಜನೂರಿನ ಜವಾಹರ ನವೋದಯ ವಿದ್ಯಾಲಯದಲ್ಲಿ 2024–25ನೇ ಸಾಲಿನಲ್ಲಿ 9 ಮತ್ತು 11ನೇ ತರಗತಿಗಾಗಿ ಪ್ರವೇಶ ಪರೀಕ್ಷೆಯನ್ನು ಫೆ. 10 ರಂದು ನಡೆಸಲಾಗುತ್ತಿದ್ದು, ಈಗಾಗಲೇ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳು **www.navodaya.gov.in** ವೆಬ್ಸೈಟ್ ಮೂಲಕ ಪ್ರವೇಶ ಪತ್ರಗಳನ್ನು ಪಡೆದುಕೊಂಡು ಪರೀಕ್ಷೆಗೆ ಹಾಜರಾಗುವಂತೆ ಪ್ರಾಚಾರ್ಯೆ ಜಿ. ವಲ್ಲಿಯಮ್ಮೈರವರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಯೋಗ ತರಬೇತುದಾರರ ನೇಮಕಕ್ಕೆ ಅರ್ಜಿ ಆಹ್ವಾನ

ಶಿವಮೊಗ್ಗ: ಆಯುಷ್ಮಾನ್ ಆರೋಗ್ಯ ಮಂದಿರಗಳಿಗೆ ಅರೆಕಾಲಿಕ ಯೋಗ ತರಬೇತುದಾರರನ್ನು ನೇಮಿಸಲು ನೇರ ಸಂದರ್ಶನವನ್ನು ಏರ್ಪಡಿಸಲಾಗಿದೆ. ಜಿಲ್ಲೆಯ ಸರ್ಕಾರಿ ಆಯುರ್ವೇದ ಚಿಕಿತ್ಸಾಲಯಗಳಾದ ಹೊಸನಗರ ತಾಲ್ಲೂಕಿನ ಹರತಾಳು, ಪುರಪ್ಪೆಮನೆ, ಭದ್ರಾವತಿ ತಾಲ್ಲೂಕಿನ ಮೈದೊಳಲು ಇಲ್ಲಿ ತಲಾ 2 ಯೋಗ ತರಬೇತುದಾರರು (1–ಪುರುಷ, 1–ಮಹಿಳೆ) ಮತ್ತು ಭದ್ರಾವತಿಯ ಹನುಂತಾಪುರದ ಸರ್ಕಾರಿ ಆಯುರ್ವೇದ ಚಿಕಿತ್ಸಾಲಯಕ್ಕೆ 1 ಯೋಗ ತರಬೇತಿದಾರ(1–ಪುರುಷ) ಒಟ್ಟು 07 ಯೋಗ ತರಬೇತುದಾರರ ಸೇವೆಯನ್ನು 11 ತಿಂಗಳ ಅವಧಿಗೆ ಪಡೆಯಲು ಫೆ.9 ರ ಮಧ್ಯಾಹ್ನ 2.30 ರಿಂದ 4 ಗಂಟೆವರೆಗೆ ಶಿವಮೊಗ್ಗದ ಜಿಲ್ಲಾ ಆಯುಷ್ ಕಚೇರಿಯಲ್ಲಿ ನೇರ ಸಂದರ್ಶನವನ್ನು ಏರ್ಪಡಿಸಲಾಗಿದೆ.

ಅದೇ ದಿನ ಬೆಳಿಗ್ಗೆ 10 ರಿಂದ ಮಧ್ಯಾಹ್ನ 12.30 ರವರೆಗೆ ಕಚೇರಿಯಲ್ಲಿ ಅರ್ಜಿಗಳನ್ನು ಪಡೆದು ಸಲ್ಲಿಸಬಹುದು. ವಿದ್ಯಾರ್ಹತೆ, ವಯೋಮಿತಿ ಮತ್ತು ಗೌರವಧನ ಇತರೆ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆಯುಷ್ ಕಚೇರಿಯನ್ನು ಸಂಪರ್ಕಿಸಬಹುದೆಂದು ಜಿಲ್ಲಾ ಆಯುಷ್ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯುತ್ ವ್ಯತ್ಯಯ

ಶಿವಮೊಗ್ಗ: ಮೆಸ್ಕಾಂ 11 ಕೆವಿ. ಮಾರ್ಗದ ನಿರ್ವಹಣಾ ಕಾಮಗಾರಿ ಹಮ್ಮಿಕೊಂಡಿರುವುದರಿಂದ ಫೆ. 04 ರಂದು ಬೆಳಿಗ್ಗೆ 10.00 ರಿಂದ ಮ. 02.00 ರವರೆಗೆ ಪರ್ಫೆಕ್ಟ್ ಅಲೈಯನ್ಸ್, ಜೆಎನ್ಎನ್ಸಿ ಕಾಲೇಜ್, ಎನ್ಇಎಸ್ ಬಡಾವಣೆ, ರೆಡ್ಡಿ ಲೇಔಟ್ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯವಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಮೆಸ್ಕಾಂ ಪ್ರಕಟಣೆಯಲ್ಲಿ ತಿಳಿಸಿದೆ.

## ಈ ಹೂವನ್ನು ತಿಂದರೆ ಯೂರಿಕ್ ಆಸಿಡ್, ಕಿಡ್ನಿ ಸಮಸ್ಯೆ ದೂರವಾಗುತ್ತದೆ..!



ಭಾರತದಲ್ಲಿ ಬಾಳೆಹೂವನ್ನು ಆಹಾರ ಪದಾರ್ಥ, ಔಷಧಿಯ ರೂಪವಾಗಿ ಬಳಸಲಾಗುತ್ತದೆ. ಬಂಗಾಳ ಮತ್ತು ಬಿಹಾರದಲ್ಲಿ, ಬಾಳೆ ಹೂವುಗಳಿಂದ ಪಕೋಡಗಳನ್ನು ತಯಾರಿಸಲಾಗುತ್ತದೆ. ಕೆಲವು ರಾಜ್ಯಗಳಲ್ಲಿ ಬಾಳೆ ಹೂವಿನ ಬೆಳೆಯನ್ನು ಸಹ ಬೆಳೆಯಲಾಗುತ್ತದೆ.

ಬಾಳೆಹೂವು ಫಾಸ್ಫರಸ್ ಕ್ಯಾಲ್ಸಿಯಂ ಪೊಟ್ಯಾಸಿಯಮ್ ಮತ್ತು ಕಬ್ಬಿಣದಂತಹ ಅನೇಕ ಪೋಷಕಾಂಶಗಳನ್ನು ಹೊಂದಿದ್ದು ಅದು ಆರೋಗ್ಯಕ್ಕೆ ಬಹಳ ಪ್ರಯೋಜನಕಾರಿ. ನಿಮಗೆ ಯೂರಿಕ್ ಆಸಿಡ್ ಸಮಸ್ಯೆ ಇದ್ದರೆ ಮತ್ತು ಯೂರಿಕ್ ಆಮ್ಲ ನಿರಂತರವಾಗಿ ಹೆಚ್ಚಿದ್ದರೆ ಈ ಹೂವನ್ನು ಸೇವಿಸಿ. ಈ ಹೂವನ್ನು ತಿನ್ನುವುದರಿಂದ ಯೂರಿಕ್ ಆಸಿಡ್ ಸಮಸ್ಯೆ ಮತ್ತು ಕಿಡ್ನಿ ಸಂಬಂಧಿತ ಸಮಸ್ಯೆ ದೂರವಾಗುತ್ತದೆ.

**ಬಾಳೆ ಹೂವಿನ ಪ್ರಯೋಜನಗಳು**

1. ಬಾಳೆಹೂವು ಕರಗುವ ಮತ್ತು ಕರಗದ ಎರಡು ರೀತಿಯ ಫೈಬರ್ ಅನ್ನು ಹೊಂದಿದೆ. ಇವೆರಡೂ ಚಯಾಪಚಯ ಕ್ರಿಯೆಯನ್ನು ಹೆಚ್ಚಿಸುತ್ತವೆ, ಅಲ್ಲದೆ, ಪ್ಯೂರಿನ್ ಜೀರ್ಣಕ್ರಿಯೆಯನ್ನು ತೀವ್ರಗೊಳಿಸುತ್ತವೆ. ಇದು ಮಲದ ಮೂಲಕ ದೇಹದಿಂದ ಪ್ಯೂರಿನ್ ಅನ್ನು ತೆಗೆದುಹಾಕುತ್ತದೆ.
2. ಬಾಳೆಹೂವು ಪೊಟ್ಯಾಸಿಯಮ್, ಕ್ಯಾಲ್ಸಿಯಂ, ವಿಟಮಿನ್ ಎ, ಸಿ ಮತ್ತು ಇ ಅನ್ನು ಹೊಂದಿರುತ್ತದೆ. ಇದು ಕೀಲು ನೋವನ್ನು ಕಡಿಮೆ ಮಾಡುತ್ತದೆ ಮತ್ತು ಮೂಳೆಯ ಸಾಂದ್ರತೆಯನ್ನು ಹೆಚ್ಚಿಸುತ್ತದೆ.
3. ಮೂಳೆಯೊಳಗೆ ಅಂತರವು ರೂಪುಗೊಳ್ಳಲು ಪ್ರಾರಂಭಿಸಿದರೆ, ಯೂರಿಕ್ ಆಮ್ಲವು ಅದರಲ್ಲಿ ಸಂಗ್ರಹಗೊಳ್ಳುತ್ತದೆ. ಬಾಳೆಹೂವು ಉರಿಯೂತ ಶಮನಕಾರಿ ಗುಣಗಳನ್ನು ಹೊಂದಿದ್ದು ಅದು ತ್ವರಿತವಾಗಿ ಕೆಲಸ ಮಾಡುತ್ತದೆ ಮತ್ತು ನೋವನ್ನು ಗುಣಪಡಿಸುತ್ತದೆ.

(ಹಕ್ಕುತ್ಯಾಗ: ಇಲ್ಲಿ ನೀಡಲಾದ ಮಾಹಿತಿ ಮತ್ತು ಮನೆಮದ್ದುಗಳು ಸಾಮಾನ್ಯ ಮಾಹಿತಿಯನ್ನು ಆಧರಿಸಿವೆ. ಅದನ್ನು ಅಳವಡಿಸಿಕೊಳ್ಳುವ ಮೊದಲು ವೈದ್ಯಕೀಯ ಸಲಹೆಯನ್ನು ತೆಗೆದುಕೊಳ್ಳಬೇಕು.

# ಬ್ಯಾಕ್‌ಲಾಗ್: ವರವಲ್ಲ ಸಂಕಷ್ಟ!



ಎಂಜಿನಿಯರಿಂಗ್ ಅಂತಿಮ ವರ್ಷದ ವಿದ್ಯಾರ್ಥಿಯೊಬ್ಬನ ತಾಯಿ, ಮಗ ಓದುತ್ತಿರುವ ಕಾಲೇಜಿಗೆ ಭೇಟಿ ನೀಡಿ, ವಿಭಾಗದ ಮುಖ್ಯಸ್ಥರ ಬಳಿ ಮಗನ ಶೈಕ್ಷಣಿಕ ಪ್ರಗತಿಯ ಕುರಿತು ಸಮಾಲೋಚಿಸತೊಡಗಿದರು. ‘ವಿವಿಧ ಕಂಪನಿಗಳು ನಡೆಸುವ ಕ್ಯಾಂಪಸ್ ನೇಮಕಾತಿ ಪ್ರಕ್ರಿಯೆಯಲ್ಲಿ ನನ್ನ ಮಗ ಭಾಗವಹಿಸಲು ಅವಕಾಶ ಇಲ್ಲವೇ’ ಎನ್ನುವುದು ಅವರ ಮುಖ್ಯ ಪ್ರಶ್ನೆಯಾಗಿತ್ತು.

ಸದ್ಯ ಏಳನೇ ಸೆಮಿಸ್ಟರ್‌ನಲ್ಲಿ ಓದುತ್ತಿರುವ ಅವರ ಮಗ, ಹಿಂದಿನ ಸೆಮಿಸ್ಟರ್‌ಗಳ 13 ವಿಷಯಗಳಲ್ಲಿ ಪಾಸ್ ಆಗದೆ ಹಾಗೇ ಉಳಿಸಿಕೊಂಡಿದ್ದ. ಹೀಗಾಗಿ, ಈ ವಿದ್ಯಾರ್ಥಿಗೆ ಕ್ಯಾಂಪಸ್ ನೇಮಕಾತಿ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳಲು ಅವಕಾಶ ಇರಲಿಲ್ಲ. ಏಳು ಮತ್ತು ಎಂಟನೇ ಸೆಮಿಸ್ಟರ್‌ನಲ್ಲಿ ಓದಬೇಕಿರುವ ವಿಷಯಗಳೊಂದಿಗೆ ಪಾಸಾಗದೆ ಉಳಿಸಿಕೊಂಡಿರುವ 13 ವಿಷಯಗಳ ಪರೀಕ್ಷೆ ಬರೆದು ಪಾಸ್ ಆಗುವುದು ಕಷ್ಟಸಾಧ್ಯವೇ ಸರಿ.

ವಾಸ್ತವಾಂಶ ಮನಗಂಡು, ನಾಲ್ಕು ವರ್ಷಗಳಲ್ಲಿ ಆಗದಿದ್ದರೂ ಸಾಧ್ಯವಾದಷ್ಟು ಬೇಗ ಮಗ ಎಂಜಿನಿಯರಿಂಗ್ ಮುಗಿಸಲು ಏನು ಮಾಡಬೇಕೆನ್ನುವ ಕುರಿತು ಮಾಹಿತಿ ಪಡೆಯುವುದು ಅವರ ಏಕಮಾತ್ರ ಆದ್ಯತೆಯಾಗಬಹುದೇನೋ ಎನ್ನುವ ನಿರೀಕ್ಷೆ ಅಧ್ಯಾಪಕರಲ್ಲಿತ್ತು.

ಆದರೆ, ಅವರಿಗೆ ಮಗ ಇನ್ನು ಆರೇಳು ತಿಂಗಳುಗಳಲ್ಲಿ ಎಂಜಿನಿಯರಿಂಗ್ ಪದವಿ ಮುಗಿಸುವ ಕುರಿತು ಅಪರಿಮಿತ ಭರವಸೆ ಇದ್ದ ಹಾಗಿತ್ತು. ‘ಏಳನೇ ಸೆಮಿಸ್ಟರ್‌ನಲ್ಲಿ ಹೆಚ್ಚುವರಿಯಾಗಿ ಆರು ಹಾಗೂ ಎಂಟನೇ ಸೆಮಿಸ್ಟರ್‌ನಲ್ಲಿ ಹೆಚ್ಚುವರಿಯಾಗಿ ಏಳು ವಿಷಯಗಳ ಪರೀಕ್ಷೆ ಬರೆದು ಪಾಸಾದರೆ ನಾಲ್ಕು ವರ್ಷಕ್ಕೆ ಎಂಜಿನಿಯರಿಂಗ್ ಮುಗಿಸಬಹುದಲ್ಲವೇ?’ ಎಂದು ವಿಚಾರಿಸಿದರು.

ಆದರೆ, ನಿಯಮಾವಳಿ ಪ್ರಕಾರ, ಅವರ ಮಗ ಆಯಾ ಸೆಮಿಸ್ಟರ್‌ನ ಏಳೆಂಟು ವಿಷಯಗಳೊಂದಿಗೆ ಹೆಚ್ಚುವರಿಯಾಗಿ ಆರೇಳು ವಿಷಯಗಳ ಪರೀಕ್ಷೆ ತೆಗೆದುಕೊಳ್ಳಲು ಅವಕಾಶ ಇರಲಿಲ್ಲ. ಅಲ್ಲದೆ 13 ವಿಷಯಗಳನ್ನು ಬಾಕಿ ಉಳಿಸಿಕೊಂಡಿರುವ ವಿದ್ಯಾರ್ಥಿಯ ಪಾಲಿಗೆ ಒಂದೇ ಬಾರಿಗೆ 14ಕ್ಕಿಂತ ಹೆಚ್ಚು ವಿಷಯಗಳಲ್ಲಿ ಪಾಸಾಗುವುದು ಅಸಾಧ್ಯ ಎನಿಸುವಂತಹ ಸವಾಲೇ ಸರಿ. ವಸ್ತುಸ್ಥಿತಿ ಹೀಗಿದ್ದರೂ ತಾಯಿಗೆ ಮಗ ಕ್ಯಾಂಪಸ್ ಸಂದರ್ಶನದ ಮೂಲಕ ಹೇಗಾದರೂ ಕೆಲಸ ಪಡೆಯಲೇಬೇಕೆನ್ನುವ ಮಹತ್ವಾಕಾಂಕ್ಷೆಯನ್ನು ಸಡಿಲಿಸಲು ಸಾಧ್ಯವಾಗಲೇ ಇಲ್ಲ.

ವಿಶ್ವವಿದ್ಯಾಲಯ ರೂಪಿಸಿರುವ ನಿಯಮಾವಳಿ ಹಾಗೂ ಕ್ಯಾಂಪಸ್ ಸಂದರ್ಶನಕ್ಕೆ ಬರುವ ಕಂಪನಿಗಳು ಅನುಸರಿಸುವ ಮಾನದಂಡಗಳು ಯಾವುವು ಎನ್ನುವುದನ್ನು ಪ್ರಾಧ್ಯಾಪಕರು ಅವರಿಗೆ ವಿವರಿಸಿ, ‘ನಿಮ್ಮ ಮಗ ಮೊದಲು ಎಂಜಿನಿಯರಿಂಗ್ ಪದವಿ ಮುಗಿಸುವ ಹಾಗೆ ನೋಡಿಕೊಳ್ಳಿ. ಈಗಲೇ ಕೆಲಸದ ಬಗ್ಗೆ ಹೆಚ್ಚು ಚಿಂತಿಸಲು ಹೋಗಬೇಡಿ’ ಎನ್ನುವ ಸಲಹೆ ನೀಡಿ ಕಳಿಸಿದರು.

ಕೊರೊನಾ ಕಾರಣಕ್ಕೆ ತರಗತಿಗಳು ಸಕಾಲಕ್ಕೆ ನಡೆಯದೆ, ಆನ್‌ಲೈನ್ ತರಗತಿಗಳ ಮೂಲಕ ಕಲಿಸುವ ಸನ್ನಿವೇಶ ಅನಿರ್ದಿಷ್ಟಾವಧಿಗೆ ಮುಂದುವರಿದಾಗ, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯವು ಅದುವರೆಗೂ ಜಾರಿಯಲ್ಲಿದ್ದ ಗರಿಷ್ಠ ನಾಲ್ಕು ಬ್ಯಾಕ್‌ಲಾಗ್ ನಿಯಮವನ್ನು ಸಡಿಲಗೊಳಿಸಿತು.

ವಿದ್ಯಾರ್ಥಿಗಳು ಹಿಂದಿನ ಸೆಮಿಸ್ಟರ್‌ಗಳ ಅದೆಷ್ಟೇ ವಿಷಯಗಳಲ್ಲಿ ಫೇಲ್ ಆಗಿದ್ದರೂ ಮುಂದಿನ ವರ್ಷಕ್ಕೆ ದಾಖಲಾಗಬಹುದು ಎನ್ನುವ ರಿಯಾಯಿತಿ ಘೋಷಿಸಿ ಅನುಷ್ಠಾನಕ್ಕೂ ತರಲಾಯಿತು.

ವಿಶ್ವವಿದ್ಯಾಲಯಗಳು ಜಾರಿಗೆ ತಂದ ಈ ಸಡಿಲಿಕೆ ತಮ್ಮ ಪಾಲಿಗೆ ವರದಾನವಾಗಲಿದೆ ಎಂದು, ಕಲಿಕೆಯಲ್ಲಿ ಹಿಂದುಳಿದಿದ್ದ ವಿದ್ಯಾರ್ಥಿಗಳು ಮೊದಲಿಗೆ ಭಾವಿಸಿದ್ದರು. ಆದರೆ ಇದರ ದುಷ್ಪರಿಣಾಮ ಏನೆಂಬುದು ವಿದ್ಯಾರ್ಥಿಗಳು ಹಾಗೂ ಪೋಷಕರಿಗೆ ಈಗ ಮನದಟ್ಟಾಗತೊಡಗಿದೆ.

ಗರಿಷ್ಠ ನಾಲ್ಕು ಬ್ಯಾಕ್‌ಲಾಗ್ ನಿಯಮ ಜಾರಿಯಲ್ಲಿದ್ದ ವೇಳೆ, ಯಾವುದೇ ವಿದ್ಯಾರ್ಥಿ ನಾಲ್ಕಕ್ಕಿಂತ ಹೆಚ್ಚು ವಿಷಯಗಳನ್ನು ಪಾಸ್ ಆಗದೆ ಉಳಿಸಿಕೊಂಡಿದ್ದರೆ ಮುಂದಿನ ಶೈಕ್ಷಣಿಕ ವರ್ಷಕ್ಕೆ ದಾಖಲಾಗಲು ಅವಕಾಶ ಇರಲಿಲ್ಲ. ಹೀಗಾಗಿ, ಬಾಕಿ ಇರುವ ವಿಷಯಗಳನ್ನು ಆದಷ್ಟು ಬೇಗ ಪಾಸು ಮಾಡಿಕೊಳ್ಳುವುದು ವಿದ್ಯಾರ್ಥಿಗಳ ಮೊದಲ ಆದ್ಯತೆಯಾಗುತ್ತಿತ್ತು.

ಇನ್ನು ಆರೇಳು ತಿಂಗಳುಗಳಲ್ಲಿ ಎಂಜಿನಿಯರಿಂಗ್ ಓದು ಮುಗಿಸಬೇಕಿರುವ 2023–24ನೇ ಸಾಲಿನ ಕೆಲ ವಿದ್ಯಾರ್ಥಿಗಳು, 20ಕ್ಕಿಂತ ಹೆಚ್ಚು ವಿಷಯಗಳಲ್ಲಿ ಪಾಸ್ ಆಗದೆ ಹಾಗೇ ಉಳಿಸಿಕೊಂಡಿರುವ ನಿದರ್ಶನಗಳೂ ಇವೆ. ಹೀಗೆ ಅಧಿಕ ಸಂಖ್ಯೆಯ ಬ್ಯಾಕ್‌ಲಾಗ್‌ಗಳನ್ನು ಉಳಿಸಿಕೊಂಡು ನಿಗದಿತ ಅವಧಿಗೆ ಪದವಿ ಪಡೆಯುವ ಅರ್ಹತೆ ಗಳಿಸಲು ವಿಫಲರಾಗುವವರ ಬಗ್ಗೆ ಪೋಷಕರು ಹಾಗೂ ಆಯಾ ಕಾಲೇಜು–ವಿಶ್ವವಿದ್ಯಾಲಯಗಳು ವಿಶೇಷ ಮುತುವರ್ಜಿ ತೋರದೇ ಹೋದರೆ, ಅವರು ಪದವಿ ಪೂರ್ಣಗೊಳಿಸುವುದೇ ಅನುಮಾನ.

ಕೊರೊನಾ ಲಾಕ್‌ಡೌನ್ ಜಾರಿಯಲ್ಲಿದ್ದ ವೇಳೆ ಪದವಿ ಓದುತ್ತಿದ್ದ ಮೂರ್ನಾಲ್ಕು ಬ್ಯಾಚುಗಳ ವಿದ್ಯಾರ್ಥಿಗಳಷ್ಟೇ ಈ ಅಪರಿಮಿತ ಬ್ಯಾಕ್‌ಲಾಗ್‌ಗಳ ದುಷ್ಪರಿಣಾಮ ಎದುರಿಸಬೇಕಿದೆ.

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯವು 2022–23ನೇ ಸಾಲಿನ ನಂತರ ಎಂಜಿನಿಯರಿಂಗ್ ಪದವಿಗೆ ದಾಖಲಾಗಿರುವ ವಿದ್ಯಾರ್ಥಿಗಳಿಗೆ 16 ಕ್ರೆಡಿಟ್‌ಗಿಂತ ಹೆಚ್ಚು ವಿಷಯಗಳನ್ನು ಪಾಸ್ ಮಾಡದೆ ಉಳಿಸಿಕೊಂಡಿದ್ದರೆ, ಅಂತಹ ವಿದ್ಯಾರ್ಥಿಗಳು ಮುಂದಿನ ಶೈಕ್ಷಣಿಕ ವರ್ಷಕ್ಕೆ ಪದೋನ್ನತಿ ಹೊಂದಲು ಅವಕಾಶವಿಲ್ಲ ಎಂಬ ನಿಯಮವನ್ನು ಈಗಾಗಲೇ ಜಾರಿಗೆ ತಂದಿದೆ. ಹೀಗಾಗಿ, ಅಪರಿಮಿತ ಬ್ಯಾಕ್‌ಲಾಗ್ ತಂದೊಡ್ಡಿರುವ ಸಂಕಷ್ಟ ಮೂರ್ನಾಲ್ಕು ಬ್ಯಾಚುಗಳ ವಿದ್ಯಾರ್ಥಿಗಳನ್ನಷ್ಟೇ ಬಾಧಿಸಲಿದೆ.

## ತೂಕ ಇಳಿಕೆಗೆ ಪ್ರತಿದಿನ ಇದನ್ನು ಕುಡಿಯುತ್ತಾರೆ ನೀವು ಸಹ ಟ್ರೈ ಮಾಡಿ



ಬಾಲಿವುಡ್‌ನ ಅತ್ಯಂತ ಫಿಟ್ ಮತ್ತು ಹಾಟ್ ನಟಿಯ ವಿಷಯಕ್ಕೆ ಬಂದರೆ, ಮಲೈಕಾ ಅರೋರಾ ಅದರಲ್ಲಿ ಮುಂಚೂಣಿಯಲ್ಲಿದ್ದಾರೆ. 49ರ ಹರೆಯದ ಮಲೈಕಾಳ ದೇಹವನ್ನು ನೋಡಿ ಎಲ್ಲರೂ ಅವರ ಅಭಿಮಾನಿಗಳಾಗುತ್ತಾರೆ. ಆದರೆ ಯೋಗದ ಹೊರತಾಗಿ, ಮಲೈಕಾ ತನ್ನನ್ನು ತಾನು ಫಿಟ್ ಆಗಿಟ್ಟುಕೊಳ್ಳಲು ಪ್ರತಿದಿನ ಒಂದು ಪಾನೀಯವನ್ನು ಕುಡಿಯುತ್ತಾರೆ.

ಈ ಪಾನೀಯವನ್ನು ನೀವು ಪ್ರತಿದಿನ ಸೇವಿಸಿದರೆ, ನೀವು ಕೂಡ ಮಲೈಕಾ ಅವರಂತೆ ಟೋನ್ ಮತ್ತು ಪರಿಪೂರ್ಣ ದೇಹವನ್ನು ಪಡೆಯಬಹುದು. ಈ ಪಾನೀಯ ಯಾವುದು ಮತ್ತು ಮಲೈಕಾ ಇದನ್ನು ಪ್ರತಿದಿನ ಹೇಗೆ ಕುಡಿಯುತ್ತಾರೆ ಎಂದು ತಿಳಿಯಿರಿ.

ನೀವು ಮಲೈಕಾ ಅರೋರಾ ಅವರಂತಹ ಪರಿಪೂರ್ಣ ದೇಹವನ್ನು ಪಡೆಯಲು ಬಯಸಿದರೆ, ನಿಮ್ಮ ಆಹಾರದಲ್ಲಿ ಮನೆಯಲ್ಲಿ ಇರುವ ಈ ಮೂರು ಮಸಾಲೆಗಳನ್ನು ನೀವು ಸೇರಿಸಿಕೊಳ್ಳಬೇಕು. ಈ ಮೂರು ಮಸಾಲೆಗಳು ಮೆಂತ್ಯ, ಅಜ್ವಾನ ಮತ್ತು ಜೀರಿಗೆ.


ಈ ಮೂರು ಅಂಶಗಳು ಆರೋಗ್ಯಕ್ಕೆ ಪ್ರಯೋಜನಕಾರಿ. ಮತ್ತೊಂದೆಡೆ, ನೀವು ಈ ಮೂರು ಪದಾರ್ಥಗಳನ್ನು ಒಟ್ಟಿಗೆ ಸೇವಿಸಿದರೆ, ಅದು ನಿಮ್ಮ ತೂಕವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ.

ಮನೆಯಲ್ಲಿರುವ ಈ ಮೂರು ಮಸಾಲೆಗಳನ್ನು ನೀವು ಸರಿಯಾದ ರೀತಿಯಲ್ಲಿ ಬಳಸಿದರೆ, ಅವು ನಿಮ್ಮ ತೂಕವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಈ ಪಾನೀಯವನ್ನು ತಯಾರಿಸಲು, ಮೊದಲನೆಯದಾಗಿ ನೀವು ಮೆಂತ್ಯ, ಅಜ್ವಾನ ಮತ್ತು ಜೀರಿಗೆ ತಲಾ ಅರ್ಧ ಟೀಚಮಚವನ್ನು ತೆಗೆದುಕೊಳ್ಳಬೇಕು.

ಇದರ ನಂತರ, ಒಂದು ಪಾತ್ರೆಯನ್ನು ತೆಗೆದುಕೊಂಡು ಅದರಲ್ಲಿ ಸುಮಾರು 2 ಗ್ಲಾಸ್ ನೀರನ್ನು ಮಿಶ್ರಣ ಮಾಡಿ. ಈ ನೀರಿನಲ್ಲಿ ಎಲ್ಲಾ ಮೂರು ವಸ್ತುಗಳನ್ನು ತೆಗೆದು–ಕೊಂಡು ರಾತ್ರಿಯಿಡೀ ನೆನೆಸಿಡಿ. ಮರುದಿನ ಈ ನೀರನ್ನು ಕುದಿಸಿ.

ಈ ನೀರು 2 ಗ್ಲಾಸ್‌ನಿಂದ 1 ಗ್ಲಾಸ್‌ವರೆಗೆ ಉಳಿಯುವವರೆಗೆ ಕುದಿಸಿ ಅದನ್ನು ಫಿಲ್ಟರ್ ಮಾಡಿ ಮತ್ತು ಬೆಳಿಗ್ಗೆ ಖಾಲಿ ಹೊಟ್ಟೆಯಲ್ಲಿ ಕುಡಿಯಿರಿ.

## ಮೆದುಳಿಗೂ ಆಘಾತವಾಗಬಹುದು ಎಚ್ಚರ..!



ಹೃದಯಾಘಾತದಂತೆ ಮೆದುಳಿನ ಆಘಾತವೂ ಹಲವು ಮಂದಿಯ ಪ್ರಾಣಕ್ಕೆ ಎರವಾಗುತ್ತದೆ. ಮೆದುಳಿಗೆ ರಕ್ತದ ಹರಿವು ಕಡಿಮೆಯಾದಾಗ ಅಥವಾ ಮೆದುಳಿಗೆ ರಕ್ತ ಸಾಗಿಸುವ ಕೊಳವೆಗಳು ಹಾಳಾಗುವುದರಿಂದ ಮೆದುಳಿನ ಆಘಾತ ಸಂಭವಿಸುತ್ತದೆ.

ಇದರಿಂದ ವ್ಯಕ್ತಿಗೆ ಮಾತನಾಡಲು ಕಷ್ಟವಾಗುತ್ತದೆ, ದೇಹದ ಯಾವುದಾದರೂ ಭಾಗದಲ್ಲಿ ನಿಶ್ಯಕ್ತಿ, ದೃಷ್ಟಿ ಹೀನತೆ, ದೇಹದ ಸಮತೋಲನದಲ್ಲಿ ನಿಯಂತ್ರಣ ಕಳೆದುಕೊಳ್ಳುವುದು ಮತ್ತು ಪ್ರಜ್ಞಾಹೀನ ಸ್ಥಿತಿ ಕಂಡು ಬರಬಹುದು.

ಈ ಸಂದರ್ಭದಲ್ಲಿ ವೈದ್ಯರು ಎಂ.ಆರ್.ಐ. ನಡೆಸುತ್ತಾರೆ. ಔಷಧ ಆರಂಭಿಸುವ ಮುನ್ನ ಆಘಾತಕ್ಕೊಳಗಾದ ವ್ಯಕ್ತಿ ಈ ಲಕ್ಷಣ ಕಂಡು ಬಂದ ಮೊದಲ 4–5 ಗಂಟೆಯೊಳಗೆ ಆಸ್ಪತ್ರೆಗೆ ದಾಖಲಾಗಬೇಕು.

ಈ ಅವಧಿಯನ್ನು ’ಗೋಲ್ಡನ್ ಅವರ್’ ಎಂದು ಕರೆಯುತ್ತಾರೆ. ಹೀಗಾದಾಗ ಮಾತ್ರ ವ್ಯಕ್ತಿಗೆ ಸೂಕ್ತ ಚಿಕಿತ್ಸೆ ಹಾಗೂ ಔಷಧ ನೀಡಲು ಸಾಧ್ಯ.

ಗ್ರಾಮೀಣ ಭಾಗದ ಜನರೂ ಸೇರಿದಂತೆ ಎಲ್ಲರಿಗೂ ಇದರ ಅರಿವು ಮೂಡುವಂತಾಗಬೇಕು. ಮೆದುಳು ಆಘಾತಕ್ಕೆ ಒಳಗಾದ ವ್ಯಕ್ತಿಗಳನ್ನು ಸರಿಯಾಗಿ ನೋಡಿಕೊಳ್ಳುವುದು ಮತ್ತು ಸೂಕ್ತ ಸಮಯಕ್ಕೆ ಔಷಧಿ ನೀಡುವ ಬಗ್ಗೆ ಎಲ್ಲರಿಗೂ ಮಾಹಿತಿ ದೊರೆತರೆ ಮಾತ್ರ ಇದರಿಂದ ಗುಣಮುಖವಾಗುವುದು ಸಾಧ್ಯ.

## ನಿಮಗೂ ಕಿವಿ ಸಂಬಂಧಿ ಈ ಸಮಸ್ಯೆಗಳು ಕಾಡುತ್ತವೆಯೇ



ಹೆಚ್ಚು ಧೂಳಿಗೆ ಓಡಾಡಿದಾಗ, ಹೆಚ್ಚು ಹೊತ್ತು ತಲೆ ಒದ್ದೆಯಾಗಿದ್ದಾಗ ಅಥವಾ ಸ್ನಾನ ಮಾಡುವಾಗ ಕಿವಿಯೊಳಗೆ ನೀರು ಹೋದರೆ ವ್ಯಾಕ್ಸ್ ತುಂಬಿಕೊಂಡು ಕಿವಿ ನೋವು ಕಾಣಿಸಿಕೊಳ್ಳುತ್ತದೆ.

ಕೆಲವೊಮ್ಮೆ ಅಲ್ಲಿ ತುರಿಕೆ ಉಂಟಾಗಿ ನಾವು ಏನೇನನ್ನೋ ಕಿವಿಯೊಳಗೆ ತುರುಕಿಸಿಕೊಂಡು ನೋವು ಹೆಚ್ಚಿಸಿಕೊಂಡು ಬವಣೆ ಪಡುತ್ತೇವೆ.

ಇದರಿಂದ ಕಿವಿ ನೋವು ಹೆಚ್ಚುತ್ತದೆಯೇ ಹೊರತು ಕಡಿಮೆಯಾಗುವುದಿಲ್ಲ. ಅದರ ಬದಲು ಹೀಗೆ ಕಿವಿ ಸಂಬಂಧಿ ಸಮಸ್ಯೆ ಇರುವವರು ಕಡ್ಡಾಯವಾಗಿ ಕಿವಿಗೆ ಹತ್ತಿಯನ್ನು ಇಟ್ಟೇ ತಲೆ ಸ್ನಾನ ಮಾಡಿ. ಸ್ವಿಮ್ಮಿಂಗ್ ಪೂಲ್ ಗೆ ಇಳಿಯುವ ಮುನ್ನ ಕಡ್ಡಾಯವಾಗಿ ಕಿವಿ ಮುಚ್ಚಿಕೊಳ್ಳಿ.

ಹೀಗಿದ್ದೂ ಕಿವಿಯಲ್ಲಿ ವ್ಯಾಕ್ಸ್ ತುಂಬಿಕೊಂಡರೆ ಹೀಗೆ ಮಾಡಿ. ಅಡುಗೆ ಸೋಡಾವನ್ನು ನೀರಿನಲ್ಲಿ ಕದಡಿಸಿ ಎರಡು ಹನಿಯನ್ನು ಕಿವಿಯೊಳಗೆ ಬಿಡಿ. ಇದರಿಂದ ಕಿವಿಯಿಂದ ವಾಸನೆ ಬರುವುದು ನಿಲ್ಲುತ್ತದೆ ಹಾಗೂ ವ್ಯಾಕ್ಸ್ ಸಮಸ್ಯೆ ದೂರವಾಗುತ್ತದೆ. ಬೆಳ್ಳುಳ್ಳಿ ಎಣ್ಣೆಯಿಂದಲೂ ಇದೇ ಪ್ರಯೋಜನವನವನ್ನು ಪಡೆಯಬಹುದು.

ಕಿವಿಯ ಕೊಳಕು ತೆಗೆದು ಹಾಕಲು ಹೈಡ್ರೋಜನ್ ಪೆರಾಕ್ಸೈಡ್ ಸಾಮಾನ್ಯವಾಗಿ ಬಳಸುತ್ತಾರೆ. ಇದ–ರಿಂದ ನಿಮ್ಮ ಕಿವಿಯಲ್ಲಿ ಗುಳ್ಳೆಗಳು ಕಾಣಿಸಿಕೊಂಡಾವು. ಹಾಗಾಗಿ ಇದನ್ನು ಬಳಸುವ ಮುನ್ನ ಎಚ್ಚರವಿರಲಿ.

ಕಿವಿ ದೇಹದ ಸೂಕ್ಷ್ಮ ಭಾಗಗಳಲ್ಲಿ ಒಂದಾದ್ದರಿಂದ ಪ್ರಯೋಗಕ್ಕೆ ಮುಂದಾಗುವ ಮುನ್ನ ವೈದ್ಯರ ಸಲಹೆ ಪಡೆದುಕೊಳ್ಳುವುದು ಒಳ್ಳೆಯದು.

## ಚಳಿಗಾಲದಲ್ಲಿ ರೋಗನಿರೋಧಕ ಶಕ್ತಿ ಹೆಚ್ಚಿಸಲು ಇಲ್ಲಿದೆ ಸಲಹೆ



ನೆಲ್ಲಿಕಾಯಿ ಆಯುರ್ವೇದ ಮೂಲಿಕೆ. ಫೈಬರ್, ಫೋಲೇಟ್, ಎಂಟಿ ಒಕ್ಸಿಡೆಂಟ್‌ಗಳು, ರಂಜಕ, ಕಬ್ಬಿಣ, ಕಾರ್ಬೋಹೈಡ್ರೇಟ್‌ಗಳು, ಒಮೆಗಾ 3, ಮೆಗ್ನೀಸಿಯಮ್ ಮತ್ತು ಕ್ಯಾಲ್ಸಿಯಂ, ವಿಟಮಿನ್‌ಗಳ ಸೇರಿದಂತೆ ಅನೇಕ ಪೋಷಕಾಂಶಗಳು ನೆಲ್ಲಿಕಾಯಿಯಲ್ಲಿವೆ.

ಅದಕ್ಕಾಗಿಯೇ ನೆಲ್ಲಿಕಾಯಿ ಆರೋಗ್ಯಕ್ಕೆ ಅತ್ಯುತ್ತಮವೆಂದು ಪರಿಗಣಿಸಲಾಗಿದೆ. ನೆಲ್ಲಿಕಾಯಿ ದೇಹದ ನಿರ್ವಿಶೀಕರಣಕ್ಕೆ ಸಹಾಯ ಮಾಡುತ್ತದೆ. ನೆಲ್ಲಿಕಾಯಿ ಸೇವನೆಯಿಂದ ಚಯಾಪಚಯ ಮತ್ತು ರೋಗನಿರೋಧಕ ಶಕ್ತಿ ಸಹ ಹೆಚ್ಚಾಗುತ್ತದೆ.

ನೆಲ್ಲಿಕಾಯಿ ಅನೇಕ ರೋಗಗಳಿಂದ ನಿಮ್ಮನ್ನು ದೂರವಿಡುತ್ತದೆ. ಮಾತ್ರವಲ್ಲ ಹೆಚ್ಚುತ್ತಿರುವ ತೂಕವನ್ನು ನಿಯಂತ್ರಿಸಲು ಸಹ ಇದು ಸಹಕಾರಿಯಾಗಿದೆ. ನೆಲ್ಲಿಕಾಯಿಯನ್ನು ಹಾಗೇ ತಿನ್ನುವುದು ಅಸಾಧ್ಯವೆನಿಸಿದರೆ ಕ್ಯಾಂಡಿ ಮಾಡಿಕೊಂಡು ಸವಿಯಬಹುದು. ಇದು ಮಸಾಲೆಯುಕ್ತ ರುಚಿಯನ್ನು ಹೊಂದಿರುತ್ತದೆ. ಇದನ್ನು ತಿಂದರೆ ಆಹಾರ ಸುಲಭವಾಗಿ ಜೀರ್ಣವಾಗುತ್ತದೆ.

ನೆಲ್ಲಿಕಾಯಿ ಕ್ಯಾಂಡಿಗೆ ಬೇಕಾಗುವ ಸಾಮಗ್ರಿ: ಜೀರಿಗೆ 1.5 ಟೀಸ್ಪೂನ್, ಪುಡಿ ಸಕ್ಕರೆ 1.5 ಟೀಸ್ಪೂನ್, 2 ಕೆಜಿ ನೆಲ್ಲಿಕಾಯಿ, ಸಕ್ಕರೆ 1.5 ಕೆ.ಜಿ, ಚಾಟ್ ಮಸಾಲಾ 1.5 ಟೀಸ್ಪೂನ್. ಕ್ಯಾಂಡಿ ಮಾಡುವ ವಿಧಾನ: ಮೊದಲು ನೆಲ್ಲಿಕಾಯಿಯನ್ನು ತೊಳೆದು ಸ್ವಚ್ಛಗೊಳಿಸಿ. ಅದನ್ನು ಕುಕ್ಕರ್‌ನಲ್ಲಿ ಹಾಕಿ 1 ವಿಷಲ್ ಹೊಡೆಸಿಕೊಳ್ಳಿ. ಅದು ತಣ್ಣಗಾದ ಬಳಿಕ ಸಿಪ್ಪೆ ತೆಗೆದು ಮಿಠಾಯಿಯ ಆಕಾರದಲ್ಲಿ ಕತ್ತರಿಸಿ ಇಟ್ಟುಕೊಳ್ಳಿ. ಕತ್ತರಿಸಿದ ನೆಲ್ಲಿಕಾಯಿ ತುಂಡುಗಳನ್ನು ತಟ್ಟೆಯಲ್ಲಿ ಹರಡಿ.

ಅವುಗಳ ಮೇಲೆ ಜೀರಿಗೆ, ಚಾಟ್ ಮಸಾಲ ಮತ್ತು ಸಕ್ಕರೆ ಸಿಂಪಡಿಸಿ, ಒಣ ಬಟ್ಟೆಯಿಂದ ಮುಚ್ಚಿ.ಅವುಗಳನ್ನು ಕನಿಷ್ಠ ಒಂದು ಅಥವಾ ಎರಡು ದಿನಗಳವರೆಗೆ ಬಟ್ಟೆಯಿಂದ ಮುಚ್ಚಿಡಿ. ನಂತರ ಸ್ಟ್ರೈನರ್ ಸಹಾಯದಿಂದ ನೆಲ್ಲಿಕಾಯಿಯ ರಸವನ್ನು ಫಿಲ್ಟರ್ ಮಾಡುವ ಮೂಲಕ ಪ್ರತ್ಯೇಕಿಸಿ.

ಬಳಿಕ ಕ್ಯಾಂಡಿಯನ್ನು ಸುಮಾರು ಎರಡು ದಿನಗಳವರೆಗೆ ಒಣಗಲು ಇರಿಸಿ. ಮಸಾಲೆಯುಕ್ತ ನೆಲ್ಲಿಕಾಯಿ ಕ್ಯಾಂಡಿ ಸವಿಯಲು ಸಿದ್ಧವಾಗಿದೆ. ಇದನ್ನು ಹಲವು ದಿನಗಳವರೆಗೆ ಸಂಗ್ರಹಿಸಿಟ್ಟು ತಿನ್ನಬಹುದು.

## ಉಪವಾಸ ಮಾಡಿದರೆ ಇಳಿಯದು ತೂಕ....!



ದೇಹ ತೂಕ ಕಡಿಮೆ ಮಾಡಬೇಕು ಎಂಬ ಕಾರಣಕ್ಕೆ ಉಪವಾಸ ಇರುವವರನ್ನು ನೀವು ಕಂಡಿರಬಹುದು. ಅದು ತಪ್ಪು, ಖಾಲಿ ಹೊಟ್ಟೆಯಿಂದ ಸಮಸ್ಯೆಗಳು ಹೆಚ್ಚುತ್ತವೆಯೇ ಹೊರತು ಕಡಿಮೆಯಾಗುವುದಿಲ್ಲ.

ನಿಗದಿತ ಸಮಯಕ್ಕೆ ಊಟ ಮಾಡುವುದನ್ನು ತಪ್ಪಿಸಬೇಡಿ. ಆದರೆ ತಿನ್ನುವ ಪ್ರಮಾಣ ಕಡಿಮೆ ಮಾಡಿ. ಒಂದು ಬಟ್ಟಲು ಊಟ ಮಾಡುವವರು ಮೊದಲು ಅದನ್ನು ಅರ್ಧಕ್ಕೆ ಇಳಿಸಲು ಪ್ರಯತ್ನಿಸಿ. ಗಬ ಗಬನೆ ಊಟ ಮಾಡುವುದರ ಬದಲು ನಿಧಾನವಾಗಿ ತಿಂದರೆ ಬಹುಬೇಗ ತೂಕ ಇಳಿಸಬಹುದು ಎನ್ನುತ್ತದೆ ಸಂಶೋಧನೆ.

ವ್ಯಾಯಾಮ ತಪ್ಪಿಸದಿರಿ. ಬೆಳಗ್ಗೆದ್ದು ಬೆವರು ಹರಿಸಿ. ವಾಕಿಂಗ್ ಜಾಗಿಂಗ್ ಜೊತೆಗೆ ಮೆಟ್ಟಿಲು ಹತ್ತಿ ಇಳಿಯಿರಿ. ಬೆಳಗಿನ ಉಪಾಹಾರ ತಪ್ಪಿಸದಿರಿ. ರಾತ್ರಿ ಮಲಗುವ ಕನಿಷ್ಠ ಎರಡರಿಂದ ಮೂರು ಗಂಟೆ ಮೊದಲೇ ಊಟ ಮಾಡಿ ಮುಗಿಸಿ. ನೀವು ಮಲಗುವ ವೇಳೆ ಸೇವಿಸಿದ ಆಹಾರ ಜೀರ್ಣಗೊಂಡಿರಲಿ. ಇದು ತೂಕ ಇಳಿಕೆಗೆ ಸಹಕಾರಿ.

ಸಸ್ಯಾಹಾರದೊಂದಿಗೆ ತರಕಾರಿ, ಹಣ್ಣಿಗೆ ಆದ್ಯತೆ ನೀಡಿ. ಸಾಕಷ್ಟು ನೀರು ಕುಡಿಯಿರಿ. ಹಣ್ಣಿನ ಜ್ಯೂಸ್ ಮಾಡಿ ಕುಡಿಯುವ ಬದಲು ನೇರವಾಗಿ ಹಣ್ಣನ್ನು ಸೇವಿಸಿ. ಇದರಿಂದ ದೇಹಕ್ಕೆ ಕಡಿಮೆ ಸಕ್ಕರೆ ಪ್ರಮಾಣ ಸೇರುತ್ತದೆ ಮತ್ತು ಬಹುಬೇಗ ತೂಕ ಇಳಿಸಬಹುದು.

## ನಂತಹ ಮಾರಕ ಕಾಯಿಲೆಯಿಂದ ರಕ್ಷಣೆ ಒದಗಿಸುತ್ತದೆ ಈ ಗಿಡದ ತೊಗಟೆ



ಅರ್ಜುನ ಗಿಡದ ತೊಗಟೆಯು ಒಂದು ಆಯುರ್ವೇದ ಗಿಡಮೂಲಿಕೆಯಾಗಿದ್ದು, ಇದನ್ನು ಅನೇಕ ಕಾಯಿಲೆಗಳಿಗೆ ಚಿಕಿತ್ಸೆ ನೀಡಲು ಅನಾದಿ ಕಾಲದಿಂದಲೂ ಬಳಸಲಾಗುತ್ತಿದೆ. ಆದರೆ ಅರ್ಜುನನ ತೊಗಟೆಯಿಂದ ತಯಾರಿಸಿದ ಕಷಾಯವು ನಮ್ಮ ಆರೋಗ್ಯಕ್ಕೆ ಹಲವು ಪ್ರಯೋಜನಗಳನ್ನು ನೀಡುತ್ತದೆ ಎಂಬುದು ನಿಮಗೆ ತಿಳಿದಿದೆಯೇ? ಇಲ್ಲದಿದ್ದರೆ, ಇಂದು ನಾವು ಅರ್ಜುನ್ ತೊಗಟೆಯ ಕಷಾಯ ಮಾಡುವ ಪಾಕವಿಧಾನವನ್ನು ನಿಮಗೆ ಹೇಳಿಕೊಡುತ್ತೇವೆ.

ಅರ್ಜುನ್ ತೊಗಟೆ ನಮ್ಮ ಹೃದಯಕ್ಕೆ ತುಂಬಾ ಪ್ರಯೋಜನಕಾರಿ ಎಂದು ಪರಿಗಣಿಸಲಾಗಿದೆ, ಆದ್ದರಿಂದ ಇದನ್ನು ಸೇವಿಸುವುದರಿಂದ ಹೃದಯಾಘಾತದಂತಹ ಮಾರಣಾಂತಿಕ ಕಾಯಿಲೆಗಳನ್ನು ತಪ್ಪಿಸಬಹುದು. ಇದರೊಂದಿಗೆ ಅರ್ಜುನ್ ತೊಗಟೆ ರೋಗನಿರೋಧಕ ಶಕ್ತಿ ವರ್ಧಕವಾಗಿಯೂ ಕಾರ್ಯನಿರ್ವಹಿಸುತ್ತದೆ. ಇದಲ್ಲದೆ ಅರ್ಜುನ್ ತೊಗಟೆ ನಮ್ಮ ದೇಹದಲ್ಲಿನ ಒಳ್ಳೆಯ ಕೊಲೆಸ್ಟ್ರಾಲ್ ಅನ್ನು ಹೆಚ್ಚಿಸುವಲ್ಲಿ ಸಹ ಸಹಕಾರಿಯಾಗಿದೆ, ಹಾಗಾದರೆ ಅರ್ಜುನ್ ಗಿಡದ ತೊಗಟೆಯ ಕಷಾಯ ಹೇಗೆ ಮಾಡಬೇಕೆಂದು ತಿಳಿಯೋಣ ಬನ್ನಿ,

**ಅರ್ಜುನ ತೊಗಟೆಯ ಕಷಾಯ ತಯಾರಿಸಲು ಬೇಕಾಗುವ ಸಾಮಗ್ರಿಗಳು**

3–4 ಅರ್ಜುನ್ ಗಿಡದ ತೊಗಟೆಯ ತುಂಡುಗಳು
7–8 ತುಳಸಿ ಎಲೆಗಳು
1/2 ಇಂಚಿನಷ್ಟು ಶುಂಠಿ ತುಂಡು

ಶರೀರದ ಈ ಲಕ್ಷಣಗಳು ಕ್ಯಾನ್ಸರ್ ಸಂಕೇತಗಳಾಗಿರಬಹುದು! ಮರೆತೂ ನಿರ್ಲಕ್ಷಿಸಬೇಡಿ

**ಅರ್ಜುನ್ ತೊಗಟೆಯ ಡಿಕಾಕ್ಷನ್ ಮಾಡುವುದು ಹೇಗೆ?**

>> ಅರ್ಜುನನ ತೊಗಟೆಯ ಕಷಾಯವನ್ನು ಮಾಡಲು, ಮೊದಲು ಅರ್ಜುನನ ತೊಗಟೆಯನ್ನು ಚೆನ್ನಾಗಿ ತೊಳೆಯಿರಿ.

>> ನಂತರ ನೀವು ಅದನ್ನು ರಾತ್ರಿಯಿಡೀ ಒಂದು ಕಪ್ ನೀರಿನಲ್ಲಿ ನೆನೆಹಾಕಿ.

>> ಇದರ ನಂತರ, ನೀವು ಮರುದಿನ ಬೆಳಗ್ಗೆ ತೊಗಟೆಯ ಜೊತೆಗೆ ಈ ನೀರನ್ನು ಒಂದು ಪಾತ್ರೆಯಲ್ಲಿ ಹಾಕಿ.

>> ನಂತರ ಪಾತ್ರೆಯಲ್ಲಿ ಮತ್ತೆ ಮೂರು ಕಪ್ ನೀರು ಹಾಕಿ ಮತ್ತು ಬಿಸಿ ಮಾಡಲು ಮಧ್ಯಮ ಉರಿಯಲ್ಲಿ ಇರಿಸಿ.

>> ಇದರ ನಂತರ, ಅದು ಸುಮಾರು 1–2 ನಿಮಿಷಗಳ ಕಾಲ ಕುದಿಸಿದಾಗ, ಅದಕ್ಕೆ ಪುಡಿಮಾಡಿದ ತುಳಸಿ ಎಲೆಗಳು ಮತ್ತು ಶುಂಠಿ ತುಂಡನ್ನು ಸೇರಿಸಿ.

>> ನಂತರ ಈ ಪಾತ್ರೆಯನ್ನು ಮುಚ್ಚಿ ಮತ್ತು ನೀರು ಅರ್ಧಕ್ಕೆ ಬರುವಷ್ಟು ಅದನ್ನು ಕುದಿಸಿ.

>> ಇದಾದ ಬಳಿಕ ಆಫ್ ಮಾಡಿದ ನಂತರ, ಸಿದ್ಧಪಡಿಸಿದ ಡಿಕಾಕ್ಷನ್ ಅನ್ನು ಸರ್ವಿಂಗ್ ಗ್ಲಾಸ್ನಲ್ಲಿ ಫಿಲ್ಟರ್ ಮಾಡಿ.

>> ನಿಮ್ಮ ಪೌಷ್ಟಿಕಾಂಶದಿಂದ ಕೂಡಿದ ಅರ್ಜುನ್ ತೊಗಟೆಯ ಕಷಾಯ ಸಿದ್ಧವಾಗಿದೆ. ನಂತಹ ಮಾರಣಾಂತಿಕ ಕಾಯಿಲೆಯ ಅಪಾಯ ಕಡಿಮೆ ಮಾಡುವ ತಾಕತ್ತಿದೆ ಈ ತರಕಾರಿಗೆ ಈ ಲೇಖನದಲ್ಲಿ ನೀಡಲಾಗಿರುವ ಮಾಹಿತಿ ಸಾಮಾನ್ಯ ಜ್ಞಾನ ಹಾಗೂ ಮನೆಮದ್ದು ಮಾಹಿತಿಯನ್ನು ಆಧರಿಸಿದೆ. ಅನುಸರಿಸುವ ಮುನ್ನ ವೈದ್ಯಕೀಯ ಸಲಹೆ ಪಡೆದುಕೊಳ್ಳಿ.

# ಬೆಳಗಾವಿಯಲ್ಲಿ ಫೆ.5ರಂದು "ಗ್ಯಾರಂಟಿ ಯೋಜನೆ" ಫಲಾನುಭವಿಗಳ ಬೃಹತ್ ಸಮಾವೇಶ

ಬೆಳಗಾವಿ: ಸರಕಾರದ ಐದು ಮಹತ್ವಾಕಾಂಕ್ಷಿ ಗ್ಯಾರಂಟಿ ಯೋಜನೆಗಳಾದ ಅನ್ನಭಾಗ್ಯ, ಗೃಹಜ್ಯೋತಿ, ಗೃಹಲಕ್ಷ್ಮೀ, ಶಕ್ತಿ ಹಾಗೂ ಯುವನಿಧಿ ಫಲಾನುಭವಿಗಳ ಸಮಾವೇಶವನ್ನು ನಗರದ ಸರದಾರ ಹೈಸ್ಕೂಲ್ ಮೈದಾನದಲ್ಲಿ ಫೆ.5 ರಂದು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶದ ಕುರಿತು ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಶುಕ್ರವಾರ(ಫೆ2) ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಎಲ್ಲ ಯೋಜನೆಗಳ ಫಲಾನುಭವಿಗಳನ್ನು ಕರೆದು ಗ್ಯಾರಂಟಿ ಯೋಜನೆಗಳ ಕುರಿತು ಸಮಾವೇಶ ನಡೆಸಲಾಗುವುದು.

ಅನ್ನಭಾಗ್ಯ, ಗೃಹಲಕ್ಷ್ಮೀ, ಗೃಹಜ್ಯೋತಿ, ಯುವನಿಧಿ ಮತ್ತು ಶಕ್ತಿ ಯೋಜನೆಗಳ ಫಲಾನುಭವಿಗಳನ್ನು ಸಮಾವೇಶಕ್ಕೆ ಆಹ್ವಾನಿಸಲಾಗುವುದು.

ಫಲಾನುಭವಿಗಳನ್ನು ಗುರುತಿಸಿ ಅವರನ್ನು ಸಮಾವೇಶಕ್ಕೆ ಆಹ್ವಾನಿಸಲು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ನಿರ್ದೇಶನ ನೀಡಿದರು.

ಪೊಲೀಸ್ ಇಲಾಖೆಯ ಅಧಿಕಾರಿಗಳು ಸಂಚಾರ ನಿರ್ವಹಣೆ: ಪಾರ್ಕಿಂಗ್ ವ್ಯವಸ್ಥೆ ಮಾಡಬೇಕು.

ಆರೋಗ್ಯ ಇಲಾಖೆಯ ಅಧಿಕಾರಿಗಳು ತುರ್ತು ಚಿಕಿತ್ಸೆಗೆ ಅನುಕೂಲವಾಗುವಂತೆ ಅಂಬ್ಯುಲೆನ್ಸ್ ಹಾಗೂ ವೈದ್ಯಕೀಯ ತಂಡಗಳನ್ನು ನಿಯೋಜಿಸಬೇಕು ಎಂದು ಜಿಲ್ಲಾಧಿಕಾರಿ ಹೇಳಿದರು.

ಸಭೆಯಲ್ಲಿ ಮಾತನಾಡಿದ ಶಾಸಕ ಆಸಿಫ್(ರಾಜು) ಸೇಠ್ ಅವರು, ಪ್ರತಿವರ್ಷ ಸರಕಾರದಿಂದ 60 ಸಾವಿರ ಕೋಟಿ ರೂಪಾಯಿಗಳನ್ನು ಖರ್ಚು ಮಾಡುತ್ತಿದೆ.



ಆದ್ದರಿಂದ ಎಲ್ಲ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳಿಗೆ ಯೋಜನೆಗಳ ಬಗ್ಗೆ ಇನ್ನಷ್ಟು ಅರಿವು ಮೂಡಿಸುವ ಕಾರಣಕ್ಕೆ ಸಮಾವೇಶವನ್ನು ಆಯೋಜಿಸಲಾಗುತ್ತಿದೆ ಎಂದರು.

ಬೆಳಗಾವಿ ಉತ್ತರ, ದಕ್ಷಿಣ ಹಾಗೂ ಗ್ರಾಮೀಣ ಮತಕ್ಷೇತ್ರಗಳಲ್ಲಿರುವ ಗೃಹಲಕ್ಷ್ಮೀ ಯೋಜನೆಯ ಫಲಾನುಭವಿಗಳನ್ನು ಸಮಾವೇಶಕ್ಕೆ ಆಹ್ವಾನಿಸಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.

ಗೃಹಲಕ್ಷ್ಮೀ ಮಾತ್ರವಲ್ಲದೇ ಇತರೆ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳನ್ನು ಕರೆತರಬೇಕು ಎಂದರು.

ಇದಕ್ಕಾಗಿ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳನ್ನು ಸಮನ್ವಯಕ್ಕಾಗಿ ನಿಯೋಜಿಸಬೇಕು ಎಂದರು.

ಮಹಾನಗರ ಪಾಲಿಕೆಯ ಆಯುಕ್ತರಾದ ಅಶೋಕ ದುಡಗುಂಟಿ, ಸಮಾವೇಶಕ್ಕೆ ಆಗಮಿಸುವ ಫಲಾನುಭವಿಗಳಿಗೆ ಊಟೋಪಹಾರ, ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗುವುದು ಎಂದರು.

ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಶಿವನಗೌಡ ಪಾಟೀಲ, ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ್ ಕಂಕಣವಾಡಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ಬಸವರಾಜ್, ವಾರ್ತಾ ಇಲಾಖೆ ಉಪ ನಿರ್ದೇಶಕ ಗುರುನಾಥ ಕಡಬೂರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

**ಸಮಾವೇಶದ ಸಿದ್ಧತೆ ಪರಿಶೀಲನೆ:**

ಪೂರ್ವಭಾವಿ ಸಭೆಯ ಬಳಿಕ ಸರದಾರ ಹೈಸ್ಕೂಲ್ ಮೈದಾನಕ್ಕೆ ಭೇಟಿ ನೀಡಿದ ಶಾಸಕ ಆಸಿಫ್(ರಾಜು) ಸೇಠ್, ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಗ್ಯಾರಂಟಿ ಯೋಜನೆಯ ಫಲಾನುಭವಿಗಳ ಸಮಾವೇಶದ ಸಿದ್ಧತೆಗಳನ್ನು ಪರಿಶೀಲಿಸಿದರು.

ಸಮಾವೇಶದಲ್ಲಿ ಹದಿನೈದು ಸಾವಿರಕ್ಕೂ ಅಧಿಕ ಫಲಾನುಭವಿಗಳು ಭಾಗವಹಿಸಲಿರುವುದರಿಂದ ಊಟ, ಕುಡಿಯುವ ನೀರು, ಪಾರ್ಕಿಂಗ್ ಮತ್ತಿತರ ವ್ಯವಸ್ಥೆಯಲ್ಲಿ ಯಾವುದೇ ರೀತಿಯ ಅನಾನುಕೂಲ ಆಗದಂತೆ ಎಚ್ಚರಿಕೆ ವಹಿಸಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.

ನಗರದಲ್ಲಿಯೇ ಸಮಾವೇಶ ನಡೆಯಲಿರುವುದರಿಂದ ಗ್ಯಾರಂಟಿ ಯೋಜನೆ ಫಲಾನುಭವಿಗಳು ಮತ್ತು ನಾಗರಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಶಾಸಕ ಆಸಿಫ್ ಸೇಠ್ ಹಾಗೂ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಮನವಿ ಮಾಡಿಕೊಂಡರು.

ಇದೇ ಸಂದರ್ಭದಲ್ಲಿ ಭಾನುವಾರ(ಫೆ.5) ಸರದಾರ ಹೈಸ್ಕೂಲ್ ಮೈದಾನದಲ್ಲಿ ನಡೆಯಲಿರುವ ಅಂಬಿಗರ ಚೌಡಯ್ಯ ಜಯಂತಿ ಕಾರ್ಯಕ್ರಮದ ಸಿದ್ಧತೆಯನ್ನೂ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಪರಿಶೀಲಿಸಿದರು.

ಶಾಸಕ ಆಸಿಫ್(ರಾಜು) ಸೇಠ್, ಪಾಲಿಕೆ ಆಯುಕ್ತ ಅಶೋಕ ದುಡಗುಂಟಿ, ಜಿಲ್ಲಾ ಗಂಗಾಮತಸ್ಥ ಸಮಾಜದ ಜಿಲ್ಲಾಧ್ಯಕ್ಷ ದಿಲೀಪ್ ಕುರಂದವಾಡೆ ಹಾಗೂ ಸಮಾಜದ ಮುಖಂಡರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಪತ್ನಿಗೆ ಕೈಕೊಟ್ಟು ಮತ್ತೊಂದು ಮದುವೆ



ಯಾದಗಿರಿ: ಪ್ರೀತಿಸಿ ಮದುವೆಯಾಗಿದ್ದ ಯುವತಿಗೆ ಯುವಕ ಲವ್ ದೋಖಾ ಮಾಡಿರುವ ಪ್ರಸಂಗ ನಡೆದಿದೆ. ಮದುವೆಯಾಗಿ ಒಂದು ಮಗುವಾದ ಬಳಿಕ ಯುವಕ ಮತ್ತೊಂದು ಮದುವೆ ಮಾಡಿಕೊಂಡಿದ್ದಾನೆ.

ಯಾದಗಿರಿ ಜಿಲ್ಲೆಯ ಶಹಾಪುರ ತಾಲೂಕಿನ ದೋರನಹಳ್ಳಿ ಗ್ರಾಮದ ಶರಣು ದೋರನಹಳ್ಳಿ ಮೋಸ ಮಾಡಿದ ಯುವಕ ಎಂದು ತಿಳಿದುಬಂದಿದೆ. ದೂರದ ರಾಮನಗರ ಜಿಲ್ಲೆಯ ಕನಕಪುರದ ಯುವತಿ ಸಿಂಧೂ ಮೋಸ ಹೋದ ಯುವತಿ

ಶರಣು ದೋರನಹಳ್ಳಿ ಮತ್ತು ಸಿಂಧೂ ಕಳೆದ ನಾಲ್ಕು ವರ್ಷಗಳ ಹಿಂದೆ ಪ್ರೀತಿಸಿ ಮದುವೆಯಾಗಿದ್ದರು. ಇಬ್ಬರ ಮದುವೆ ಬಳಿಕ ದಂಪತಿಗೆ ಒಂದು ಗಂಡು ಮಗು ಜನಿಸಿದೆ. ಆದರೆ ಶರಣು ಇತ್ತೀಚೆಗೆ ವರದಕ್ಷಿಣೆ ಕಿರುಕುಳ ನೀಡಿ ಹಲ್ಲೆ ಮಾಡಿ ಹೆಂಡತಿ ಸಿಂಧೂಳನ್ನು ಮನೆಯಿಂದ ಹೊರ ಹಾಕಿದ್ದಾನೆ ಎಂದು ಆರೋಪಿಸಲಾಗಿದೆ.

ಶರಣು ವಿರುದ್ಧ ಜನವರಿ 10 ರಂದು ಶಹಾಪುರ ಪೊಲೀಸ್ ಠಾಣೆಯಲ್ಲಿ 307 ಕಲಂ ಅಡಿ ಕೇಸ್ ದಾಖಲಾಗಿದೆ. ಸಿಂಧೂ ಮನೆಯಿಂದ ಹೊರ ಹಾಕಿ ಶರಣು ಇನ್ನೊಂದು ಮದುವೆ ಮಾಡಿಕೊಂಡಿದ್ದಾನೆ ಎಂದು ಸಿಂಧೂ ಆರೋಪ ಮಾಡಿದ್ದಾಳೆ. ಸಿಂಧೂಗೆ ವಿಚ್ಛೇದನ ನೀಡದೆ ಮತ್ತೊಂದು ಮಾಡಿಕೊಂಡಿದ್ದಾನೆ ಎಂಬುದು ಆರೋಪವಾಗಿದೆ. ಹೀಗಾಗಿ ನ್ಯಾಯಕ್ಕಾಗಿ ಸಿಂಧೂ ಹಾಗೂ ಪೋಷಕರು ಯಾದಗಿರಿ ಪೊಲೀಸ್ ವರಿಷ್ಠಾಧಿಕಾರಿಯ ಮೊರೆ ಹೋಗಿದ್ದಾರೆ.

## ವಿವಿಧ ಕಾಮಗಾರಿಗಳ ಶಂಕುಸ್ಥಾಪನೆ



ವಿಜಯಪುರ: ಜಿಲ್ಲೆಯ ಮುದ್ದೇಬಿಹಾಳ ಪಟ್ಟಣದಲ್ಲಿ ಹಮ್ಮಿಕೊಂಡ ತಾಲೂಕಿನ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ, ಶಂಕುಸ್ಥಾಪನೆ ಹಾಗೂ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ನೆರವೇರಿಸಿದರು.

ಶಾಸಕ ಸಿ.ಎಸ್. (ಅಪ್ಪಾಜಿ) ನಾಡಗೌಡ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ, ಜವಳಿ, ಕೃಷಿಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ, ವಿಧಾನ ಪರಿಷತ್ ಮಾಜಿ ಮುಖ್ಯ ಸಚೇತಕ ಪ್ರಕಾಶ ರಾಥೋಡ, ಶಾಸಕರುಗಳಾದ ಯಶವಂತರಾಯಗೌಡ ಪಾಟೀಲ, ಹಣಮಂತ ನಿರಾಣಿ, ಸುನೀಲಗೌಡ ಪಾಟೀಲ, ಪ್ರೊ. ಎಚ್.ಪೂಜಾರ, ವಿಠ್ಠಲ ಕಟಕಧೋಂಡ, ಅಶೋಕ ಮನಗೂಳಿ, ಭೀಮನಗೌಡ ಪಾಟೀಲ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಕಾಂತಾ ನಾಯಕ, ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ವಿದ್ಯಾರಾಣಿ ತುಂಗಳ ಇತರರು ಇದ್ದರು.

## ನೀರಿನ ಕಂದಾಯ ವಸೂಲಾತಿಗೆ ವಿಶೇಷ ಕೌಂಟರ್ ಆರಂಭ

ಶಿವಮೊಗ್ಗ: ಶಿವಮೊಗ್ಗ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ನಿರ್ವಹಣಾ ವಿಭಾಗ ಮತ್ತು ಉಪವಿಭಾಗವು ದಿ: 04/02/2024 ರ ಭಾನುವಾರದಂದು 2023–24 ನೇ ಸಾಲಿನ ನೀರಿನ ಕಂದಾಯ ಮತ್ತು ಬಾಕಿ ಕಂದಾಯ ವಸೂಲಾತಿಗಾಗಿ ನಗರದ "ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ– ಹೊಳೆಹೊನ್ನೂರು ಮುಖ್ಯರಸ್ತೆ ಹತ್ತಿರ, ಹಳೇ ಜೈಲ್ ಗೇಟ್ ಎದುರು– ರಾಜೇಂದ್ರನಗರ ಪಾರ್ಕ್ ಹತ್ತಿರ, ಅಪೂರ್ವ ಕಾಲೇಜ್ ಎದುರು–ಬೊಮ್ಮನಕಟ್ಟೆ ಮುಖ್ಯರಸ್ತೆ, ಕಿದ್ವಾಯಿ ಶಾಲೆ ಪಕ್ಕ– ಆರ್.ಎಂ.ಎಲ್.ನಗರ, ಹರಿಗೆ ಗಣಪತಿ ದೇವಸ್ಥಾನದ ಹತ್ತಿರ" ಈ ಎಲ್ಲಾ ಕಡೆಗಳಲ್ಲಿ ವಿಶೇಷ ನೀರಿನ ಕಂದಾಯ ವಸೂಲಾತಿ ಕೌಂಟರ್‌ಗಳನ್ನು ತೆರೆಯಲಾಗಿದೆ. ನೀರಿನ ಖಾತೆದಾರರು ಬಾಕಿ ಉಳಿಸಿಕೊಂಡಿರುವ ನೀರಿನ ಕಂದಾಯವನ್ನು ಪಾವತಿಸದಿದ್ದಲ್ಲಿ ನೀರಿನ ಸಂಪರ್ಕವನ್ನು ಕಡಿತಗೊಳಿಸುವುದು ಅನಿವಾರ್ಯವಾಗಲಿದೆ. ಸಾರ್ವಜನಿಕರು ಸಹಕರಿಸುವಂತೆ ಕರ್ನಾಟಕ ನಗರ ನೀರುಸರಬರಾಜು ಮತ್ತು ಒಳಚರಂಡಿ ಮಂಡಳಿಯ ಸಹಾಯಕ ಕಾರ್ಯಪಾಲಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಲಿಂಗಾನುಪಾತ ಸರಿಪಡಿಸಲು ಪಿಸಿಪಿಎನ್ಡಿಟಿ ಕಾಯ್ದೆ ಪರಿಣಾಮಕಾರಿ ಅನುಷ್ಠಾನಗೊಳಿಸಿ: ಡಾ.ವಿವೇಕ್ ದೊರೈ

ಶಿವಮೊಗ್ಗ: ಸಮಾಜದಲ್ಲಿ ಲಿಂಗಾನುಪಾತದ ಅಸಮತೋಲನ ಮತ್ತು ಅದರಿಂದ ಉಂಟಾಗುವ ಸಮಸ್ಯೆಗಳನ್ನು ತಡೆಗಟ್ಟಲು ಪಿಸಿಪಿಎನ್ಡಿಟಿ ಕಾಯ್ದೆಯನ್ನು ಜಾರಿಗೆ ತರಲಾಗಿದ್ದು ಪರಿಣಾಮಕಾರಿಯಾಗಿ ಅನುಷ್ಟಾನಗೊಳಿಸಬೇಕೆಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಪಿಸಿಪಿಎನ್ಡಿಟಿ ಉಪನಿರ್ದೇಶಕರಾದ ಡಾ.ವಿವೇಕ್ ದೊರೈ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಶಿವಮೊಗ್ಗ ಇವರ ಸಂಯುಕ್ತಾಶ್ರಯದಲ್ಲಿ ನಗರದ ಐಎಂಎ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಗರ್ಭಪೂರ್ವ ಮತ್ತು ಪ್ರಸವಪೂರ್ವ, ಭ್ರೂಣಲಿಂಗ ಪತ್ತೆ ತಂತ್ರ ವಿಧಾನಗಳ ನಿಷೇಧ ಕಾಯ್ದೆ–1994 ಕುರಿತಾದ ಜಿಲ್ಲಾ ಮಟ್ಟದ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿ, ಭ್ರೂಣಲಿಂಗ ಪತ್ತೆ ಕಾನೂನಿಗೆ ವಿರುದ್ದ ಮತ್ತು ಶಿಕ್ಷಾರ್ಹ ಅಪರಾಧವಾಗಿದೆ ಎಂದರು.

ಸಾಮಾನ್ಯವಾಗಿ ಎಲ್ಲರಿಗೂ ತಮ್ಮ ತಾಯಿ, ಸಹೋದರಿ, ಪತ್ನಿ ಹೀಗೆ ಮನೆಯ ಹೆಣ್ಣುಮಕ್ಕಳೇ ಅತ್ಯಂತ ಪ್ರೀತಿ ಪಾತ್ರರಾಗಿರುತ್ತಾರೆ. ಆದರೆ ಹುಟ್ಟುವ ಮಗು ಹೆಣ್ಣು ಆಗಬಾರದೆಂಬುದು ಸರಿಯಲ್ಲ. ಈ ಮನಸ್ಥಿತಿ ಬದಲಾಗಬೇಕು.

ಲಿಂಗಾನುಪಾತದಲ್ಲಿ ವ್ಯತ್ಯಾಸ ಉಂಟಾದರೆ ಇಡೀ ವ್ಯವಸ್ಥೆ ಮೇಲೆ ಪರಿಣಾಮ ಬೀರುತ್ತದೆ. ಆದ್ದರಿಂದ ಹೆಣ್ಣುಭ್ರೂಣ ಹತ್ಯೆ ನಿಲ್ಲಬೇಕು. ಹಾಗೂ ಹೆಚ್ಚು ಓದಿ ತಿಳಿದವರೇ ಇಂತಹ ತಪ್ಪಿಗೆ ಕೈ ಹಾಕಬಾರದು ಎಂದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾದಿಕಾರಿ ಡಾ.ರಾಜೇಶ್ ಸುರಗಿಹಳ್ಳಿ ಮಾತನಾಡಿ, ಯಾವ ಸಮಾಜದಲ್ಲಿ ಕೇವಲ ಗಂಡು ಪ್ರಾಧಾನ್ಯವಿರುತ್ತದೋ ಅಲ್ಲಿ ಆರ್ಥಿಕ, ಸಾಮಾಜಿಕ ಸೇರಿದಂತೆ ಬೆಳವಣಿಗೆ ಕುಂಠಿತವಾಗಿರುತ್ತದೆ ಎಂದು ಮಹಾತ್ಮಾಗಾಂಧಿಯವರು ಹೇಳಿದ್ದಾರೆ.

ಪುರುಷ–ಮಹಿಳೆಯರಲ್ಲಿ ಸಮಾನ ಅನುಪಾತ ಕಾಪಾಡುವ ದೃಷ್ಟಿಯಿಂದ ಹೆರಿಗೆಗೆ ಮುನ್ನ ಪ್ರಸವಪೂರ್ವ ಮತ್ತು ಗರ್ಭಪೂರ್ವ ಭ್ರೂಣಲಿಂಗ ಪತ್ತೆ ಮಾಡುವ ತಂತ್ರ–1994 ಕಾಯ್ದೆಯನ್ನು



1996 ರ ಜ.1 ರಂದು ಜಾರಿಗೆ ತರಲಾಗಿದೆ.

ಜಿಲ್ಲಿಯಲ್ಲಿ ನೊಂದಾಯಿತ 118 ಸ್ಕ್ಯಾನಿಂಗ್ ಸೆಂಟರ್‌ಗಳಿದ್ದು ಪಿಸಿಪಿಎನ್ಡಿಟಿ ನಿಯಮಾನುಸಾರ ತಪಾಸಣೆ ಕೈಗೊಳ್ಳುವ ಮೂಲಕ ಕಾಯ್ದೆಯ ಅನುಷ್ಟಾನ ಮಾಡಲಾಗುತ್ತಿದೆ.

ಗರ್ಭಿಣಿಯರು 12 ವಾರದೊಳಗೆ ಕಡ್ಡಾಯವಾಗಿ ನೋಂದಣಿ ಮತ್ತು ತಾಯಿ ಕಾರ್ಡ್ ಪಡೆಯಬೇಕು. ಹಾಗೂ ಆರ್ಸಿಹೆಚ್ ಪೋರ್ಟಲ್ಲಿ ಪ್ರತಿ ತಿಂಗಳು ಅಪ್ಡೇಟ್ ಆಗಬೇಕು. ಕಾಯ್ದೆಯನ್ವಯ ಎಲ್ಲ ಸ್ಕ್ಯಾನಿಂಗ್ ಸೆಂಟರ್‌ಗಳು ಮಾರ್ಗಸೂಚಿಗಳನ್ನು ಅನುಸರಿಸಿ ಪಾರದರ್ಶಕವಾಗಿ ಕೆಲಸ ಮಾಡಬೇಕು. ಇಲ್ಲವಾದರಲ್ಲಿ ಶಿಸ್ತಿನ ಕ್ರಮ ಜರುಗಿಸಲಾಗುವುದ. ಈ ಕಾಯ್ದೆ ಉಲ್ಲಂಘಿಸಿದಲ್ಲಿ 3 ವರ್ಷಗಳವರೆಗೆ ಜೈಲು ಶಿಕ್ಷೆ ಜೊತೆಗೆ ರೂ.10,000 ದಂಡ ವಿಧಿಸಲಾಗುವುದು ಎಂದರು.

ಮೆಗ್ಗಾನ್ ಬೋಧನಾ ಜಿಲ್ಲಾ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ.ತಿಮ್ಮಪ್ಪ ಟಿ.ಡಿ ಮಾತನಾಡಿ, ಹೆಣ್ಣೊಂದು ಕಲಿತರೆ ಶಾಲೆಯೊಂದು ತೆರೆದಂತೆ. ಹೆಣ್ಣು ಎಲ್ಲ ಕ್ಷೇತ್ರದಲ್ಲಿ ಸಮರ್ಥಳು. ಆದ್ದರಿಂದ ನಮ್ಮ ಮನಸ್ಥಿತಿ ಬದಲಾಗಬೇಕು. ಯಾವುದೇ ತಂತ್ರಜ್ಞಾನದ ದುರ್ಬಳಕೆ ಆಗಬಾರದು ಎಂದು ಕಿವಿಮಾತು ಹೇಳಿದರು.

ಪಿಸಿಪಿಎನ್ಡಿಟಿ ಜಿಲ್ಲಾ ಸಲಹಾ ಸಮಿತಿ ಅಧ್ಯಕ್ಷ ಡಾ.ಧನಂಜಯ ಸರ್ಜಿ ಮಾತನಾಡಿ, ಭಗವಂತನ ಸೃಷ್ಟಿ ಅತ್ಯಂತ ವಿಶೇಷವಾಗಿದ್ದು ಸ್ವಲ್ಪ ವ್ಯತ್ಯಾಸ ಮಾಡಿದರೂ ಅಸಮತೋಲನ ಉಂಟಾಗುತ್ತದೆ. ಮುಂದುವರೆದ ದೇಶಗಳು, ರಾಜ್ಯಗಳಲ್ಲಿ ಹೆಣ್ಣುಮಕ್ಕಳ ಸಂಖ್ಯೆ ಹೆಚ್ಚಿದೆ.

ಜಿಲ್ಲೆಯಲ್ಲಿ 1991 ರಲ್ಲಿ 1000 ಗಂಡಿಗೆ 951 ಹೆಣ್ಣು, 2001 ರಲ್ಲಿ 956, 2011 ರಲ್ಲಿ 960 ಮತ್ತು 2021 ರಲ್ಲಿ 1111 ಹೆಣ್ಣು ಮಕ್ಕಳ ಸಂಖ್ಯೆ ವೃದ್ದಿಯಾಗಿರುವುದಕ್ಕೆ ಕಾರಣ ಪಿಸಿಪಿಎನ್ಡಿಟಿ ಅನುಷ್ಟಾನ. ಎಲ್ಲ ಸ್ಕ್ಯಾನಿಂಗ್ ಕೇಂದ್ರಗಳು ಕಾಯ್ದೆ ಕುರಿತು ಅರಿವು ಹೊಂದಿ, ಅದನ್ನು ಅಳವಡಿಸಿಕೊಳ್ಳಬೇಕೆಂದರು.

ಮೆಗ್ಗಾನ್ ಬೋಧನಾ ಜಿಲ್ಲಾಸ್ಪತ್ರೆಯ ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಸಿದ್ದನಗೌಡ ಪಾಟೀಲ್ ಮಾತನಾಡಿ, ಲಿಂಗಾನುಪಾತದಲ್ಲಿ ಜಿಲ್ಲೆಯು ರಾಜ್ಯ ಸರಾಸರಿಗಿಂತ ಹೆಚ್ಚಿದೆ. ಪಿಸಿಪಿಎನ್ಡಿ ಕಾಯ್ದೆಯ ಪರಿಣಾಮಕಾರಿ ಅನುಷ್ಟಾನದಿಂದ ಈ ಸಾಧನೆ ಸಾಧ್ಯವಾಗಿದೆ.

ಉತ್ತರ ಭಾರತದ ರಾಜ್ಯಗಳಲ್ಲಿ ಹೆಣ್ಣುಮಕ್ಕಳ ಸಂಖ್ಯೆ ತುಂಬಾ ಕಡಿಮೆ ಇದೆ. ಇದು ಸರಿಹೋಗಲು ಹೆಣ್ಣು ಭ್ರೂಣ ಹತ್ಯೆ ನಿಲ್ಲಬೇಕು. ಎಲ್ಲ ಸ್ಕ್ಯಾನಿಂಗ್ ಸೆಂಟರ್‌ಗಳು ಕಡ್ಡಾಯವಾಗಿ ಕಾಯ್ದೆಯನ್ನು ಅನುಸರಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಪಿಸಿಪಿಎನ್ಡಿಟಿ ಸದಸ್ಯ ಕಾರ್ಯದರ್ಶಿ ಡಾ.ಶಿವಾನಂದ, ಸಲಹೆಗಾರ ಡಾ.ವೆಂಕಟೇಶ್ ರಾವ್, ಆರ್ಸಿಹೆಚ್ ಅಧಿಕಾರಿ ಡಾ.ನಾಗರಾಜ್ ನಾಯ್ಕ್, ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ.ವೆಂಕಟೇಶ್, ಐಎಂಎ ಅಧ್ಯಕ್ಷ ಡಾ.ರಮೇಶ್, ಡಾ.ಶಮಾ ಇತರೆ ವೈದ್ಯರು, ರೇಡಿಯಾಜಿಸ್ಟ್, ಸೋನಾಲಜಿಸ್ಟಳು, ಪ್ರಸೂತಿ ತಜ್ಞರು, ಸಿಬ್ಬಂದಿಗಳು ಹಾಜರಿದ್ದರು.

## ತಮಿಳು ನಟ ವಿಜಯ್ ರಾಜಕೀಯ ಪಕ್ಷದ ಹೆಸರು ಘೋಷಣೆ



ಚೆನ್ನೈ: ದಳಪತಿ ಖ್ಯಾತಿಯ ತಮಿಳು ನಟ ವಿಜಯ್ ಅಧಿಕೃತವಾಗಿ ರಾಜಕೀಯ ರಂಗ ಪ್ರವೇಶ ಮಾಡಿದ್ದಾರೆ. ತಮ್ಮ ಹೊಸ ಪಕ್ಷದ ಹೆಸರು ಘೋಷಣೆ ಮಾಡಿದ್ದು, ವಿಜಯ್ ಅಭಿಮಾನಿಗಳು ಸಂಭ್ರಮಾಚರಣೆ ಆರಂಭಿಸಿದ್ದಾರೆ.

ದಳಪತಿ ವಿಜಯ್ ತಮ್ಮ ನೂತನ ರಾಜಕೀಯ ಪಕ್ಷಕ್ಕೆ ತಮಿಳಗ ವಿಟ್ರಿ ಕಜಂ ಎಂಬ ಹೆಸರಿಟ್ಟಿದ್ದಾರೆ. ತಮಿಳಗ ವಿಟ್ರಿ ಕಜಂ ಅಂದ್ರೆ ತಮಿಳಿಗನ ಯಶಸ್ಸಿನ ಕಾಲ ಎಂದು ಅರ್ಥ. ತಮಿಳುನಾಡಿನಲ್ಲಿ ಹೊಸ ರಾಜಕೀಯದ ಅಲೆ ಸೃಷ್ಟಿಸಲು ಸಜ್ಜಾಗಿರೋ ನಟ ವಿಜಯ್ ಅವರು ಯಶಸ್ಸಿನ ಕಾಲ ಸೃಷ್ಟಿಸಲು ಹೊಸ ಹೆಜ್ಜೆ ಇಟ್ಟಿದ್ದಾರೆ.

ಸದ್ಯ ಹೊಸ ಪಕ್ಷದ ಹೆಸರು ಘೋಷಿಸಿರುವ ವಿಜಯ್ ಅವರು ತಮ್ಮ ರಾಜಕೀಯ ಜರ್ನಿಗೆ ಭದ್ರ ಬುನಾದಿ ಹಾಕುತ್ತಿದ್ದಾರೆ. ಇತ್ತೀಚೆಗೆ 200 ಸದಸ್ಯರ ಸಾಮಾನ್ಯ ಸದಸ್ಯರ ಸಭೆ ನಡೆಸಿದ್ದ ವಿಜಯ್ ಅವರು ರಾಜಕೀಯ ಪಕ್ಷದ ಹೆಸರಿಗಾಗಿ ಚುನಾವಣಾ ಆಯೋಗಕ್ಕೆ ಮನವಿ ಮಾಡಿದ್ದರು. ಇದೀಗ ಚುನಾವಣಾ ಆಯೋಗದ ಒಪ್ಪಿಗೆ ಬಳಿಕ ಪಕ್ಷದ ಹೆಸರು ಪ್ರಕಟವಾಗಿದೆ.

## ಅಪರಿಚಿತ ವ್ಯಕ್ತಿಯ ಬರ್ಬರ ಹತ್ಯೆ

ಹಾಸನ: ಹಾಸನ ಹೊರವಲಯದ ಬುಸ್ತೇನಹಳ್ಳಿ ಗ್ರಾಮದ ನಿರ್ಜನ ಪ್ರದೇಶವಾದ ಹಾಸನ–ಬೆಂಗಳೂರು ರೈಲ್ವೆ ಟ್ರ್ಯಕ್ ಬಳಿ ಅಂದಾಜು 40 ವರ್ಷ ಪ್ರಾಯದ ವ್ಯಕ್ತಿಯೊಬ್ಬನನ್ನು ಬರ್ಬರವಾಗಿ ಹತ್ಯೆ ಮಾಡಲಾಗಿದೆ. ಮೇಲ್ನೋಟಕ್ಕೆ ಮೃತ ವ್ಯಕ್ತಿ ಕೂಲಿ ಕಾರ್ಮಿಕ ಅಥವಾ ಕುರಿಗಾಹಿ ಎಂದು ಶಂಕಿಸಲಾಗಿದ್ದು, ಎರಡು ದಿನಗಳ ಹಿಂದೆ ಆತನನ್ನು ರಾತ್ರಿ ವೇಳೆಯಲ್ಲಿ ಜೊತೆಗೆ ಕರೆತಂದಿರುವ ಹಂತಕರು, ಮೃತದೇಹ ಪತ್ತೆಯಾಗಿರುವ ಸ್ಥಳದಲ್ಲೇ ಎಣ್ಣೆ ಪಾರ್ಟಿ ಮಾಡಿದ್ದಾರೆ. ಬಹುಶಃ ಮೃತ ವ್ಯಕ್ತಿಗೆ ಕಂಠಪೂರ್ತಿ ಕುಡಿಸಿ ಅಮಲಿನಲ್ಲಿದ್ದವನ ಮೇಲೆ ಬಾಟಲ್ನಿಂದ ಹಲ್ಲೆ ಮಾಡಿ, ಬಳಿಕ ತಲೆಮೇಲೆ ಕಲ್ಲು ಎತ್ತಿಹಾಕಿ ಹತ್ಯೆ ಮಾಡಲಾಗಿದೆ.

ಎರಡು ದಿನಗಳ ಬಳಿಕ ಶವ ಪತ್ತೆ: ಎರಡು ದಿನಗಳ ಬಳಿಕ ಅಂದರೆ ಇಂದು ಸ್ಥಳೀಯರು ಜಮೀನಿನ ಬಳಿ ಬಂದಾಗ ಮೃತದೇಹ ಬಿದ್ದಿರುವುದು ಪತ್ತೆಯಾಗಿದೆ. ಕೂಡಲೇ ಘಟನೆ ಬಗ್ಗೆ ಪೊಲೀಸರಿಗೆ ಮಾಹಿತಿ ನೀಡಲಾಗಿದೆ. ಸ್ಥಳಕ್ಕೆ ಬಂದ ಹಾಸನ ಬಡಾವಣೆ ಠಾಣೆ ಪೊಲೀಸರು ಪರೀಶೀಲನೆ ನಡೆಸಿದ್ದಾರೆ. ಬಳಿಕ ಮೃತದೇಹವನ್ನು ಹಾಸನದ ವೈದ್ಯಕೀಯ ಆಸ್ಪತ್ರೆಗೆ ಸ್ಥಳಾಂತರ ಮಾಡಿದ್ದಾರೆ. ಜೊತೆಗೆ ಬಂದವರು ಕುಡಿದ ಅಮಲಿನಲ್ಲಿ ಜಗಳ ಮಾಡಿಕೊಂಡು ಬಳಿಕ ಹತ್ಯೆ ನಡೆದಿರಬಹುದು ಅಥವಾ ಕೊಲೆಮಾಡಲೆಂದೇ ಕರೆತಂದು ಕಂಠಪೂರ್ತಿ ಕುಡಿಸಿ ಬಳಿಕ ಹತ್ಯೆ ಮಾಡಿರಬಹುದು. ಹೀಗೆ ಹಲವು ಅನುಮಾನಗಳ ಬೆನ್ನೇರಿ ಪೊಲೀಸರು ತನಿಖೆ ಕೈಗೊಂಡಿದ್ದು, ಮೊದಲು ಕೊಲೆಯಾದ ವ್ಯಕ್ತಿ ಯಾರು ಎನ್ನುವ ಗುರುತಿಗಾಗಿ ಪತ್ತೆಗಿಳಿದಿದ್ದಾರೆ.

# ಗರ್ಭಿಣಿಯರಿಗೆ ಮೂಲಭೂತ ಸೌಲಭ್ಯ ಒದಗಿಸಲು ಜಿಪಂ ಸಿಇಒ ರಾಹುಲ್ ಶಿಂಧೆ ಸೂಚನೆ

ಬೆಳಗಾವಿ: ತಾಯಿ ಮತ್ತು ಮಕ್ಕಳ ಆರೋಗ್ಯ ಕಾರ್ಯಕ್ರಮದಲ್ಲಿ ಗರ್ಭಿಣಿಯರಿಗೆ ಮೂಲಭೂತ ಸೇವಾ ಸೌಲಭ್ಯಗಳನ್ನು ಕೂಡಲೇ ಒದಗಿಸಬೇಕು ಎಂದು ಜಿಪಂ ಸಿಇಒ ರಾಹುಲ್ ಶಿಂಧೆ ತಿಳಿಸಿದರು.

ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಯ ಸಭಾ ಭವನದಲ್ಲಿ ಗುರುವಾರ (ಫೆ.1) ಜಿಲ್ಲಾ ಆರೋಗ್ಯ ಸಂಘದ ಸಭೆ ಹಾಗೂ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಾರ್ವತ್ರಿಕ ಲಸಿಕಾ ಕಾರ್ಯಕ್ರಮದಲ್ಲಿ



ಯಾವುದೇ ಮಗು ಲಸಿಕೆಯಿಂದ ವಂಚಿತವಾಗಬಾರದು. ಈ ನಿಟ್ಟಿನಲ್ಲಿ ಸಂಬಂಧಿಸಿದ ಅಧಿಕಾರಿಗಳು ಕ್ರಮಕೈಗೊಳ್ಳಬೇಕು. ಕ್ಷಯರೋಗಿ ಕುಷ್ಠ ರೋಗಿಗಳನ್ನು ಶೀಘ್ರ ಪತ್ತೆ ಹಚ್ಚಿ, ಚಿಕಿತ್ಸೆ ನೀಡಬೇಕು ಎಂದು ಸೂಚಿಸಿದರು.

ಹಾವು ಮತ್ತು ನಾಯಿ ಕಡಿತ ಪ್ರಕರಣಗಳಲ್ಲಿ ಔಷಧಿಗಳ ದಾಸ್ತಾನನ್ನು ಸರಿಯಾಗಿ ನಿರ್ವಹಿಸಬೇಕು. ಡೆಂಗೀ ಚಿಕನ್ ಗುನ್ಯಾ, ಮಲೇರಿಯಾ ರೋಗಗಳ ಸಮೀಕ್ಷೆಗಳನ್ನು ಕೈಗೊಳ್ಳಬೇಕು. ಈ ರೋಗಗಳು ಹರಡದಂತೆ ಮುಂಜಾಗ್ರತೆ ವಹಿಸಬೇಕು. ನೀರಿನ ಮಾದರಿಗಳನ್ನು ಸಂಗ್ರಹಿಸಿ ಪ್ರಯೋಗಾಲಯದಲ್ಲಿ ಪರೀಕ್ಷಿಸಿ, ಅವುಗಳ ಗುಣಮಟ್ಟವನ್ನು ಖಾತ್ರಿಪಡಿಸಿ ಗ್ರಾಪಂಗೆ ವರದಿ ಸಲ್ಲಿಸಬೇಕು. ಆಯುಷ್ಮಾನ್ ಭಾರತ, ಪ್ರಧಾನ ಮಂತ್ರಿ ಜನಾರೋಗ್ಯ, ಮುಖ್ಯಮಂತ್ರಿ ಆರೋಗ್ಯ ಕರ್ನಾಟಕ ಯೋಜನೆಗಳ ಕಾರ್ಡ್ ಜಿಲ್ಲೆಯ ಪ್ರತಿ ಒಬ್ಬರಿಗೂ ತಲುಪಿಸುವ ನಿಟ್ಟಿನಲ್ಲಿ ಕ್ರಮಕೈಗೊಳ್ಳಬೇಕು ಎಂದು ಜಿ.ಪಂ ಸಿಇಒ ರಾಹುಲ್ ಶಿಂಧೆ ಅವರು ನಿರ್ದೇಶನ ನೀಡಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಮಹೇಶ್ ಕೋಣಿ, ಜಿಲ್ಲಾ ಸರ್ಜನ್ ಡಾ.ವಿ.ವಿ.ಶಿಂಧೆ, ಅಪರ ಜಿಲ್ಲಾ ಆರೋಗ್ಯ ಅಧಿಕಾರಿ ಎಸ್.ಎಸ್. ಗಡೇದ ಹಾಗೂ ಆರೋಗ್ಯ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# 7ನೇ ವೇತನ ಆಯೋಗದ ಮುಂದೆ ಆತಂಕ ಹೇಳಿದ ಸರ್ಕಾರಿ ನೌಕರರು

ಬೆಂಗಳೂರು: ಕರ್ನಾಟಕದ ಕಾಂಗ್ರೆಸ್ ಸರ್ಕಾರದ ಮುಂದೆ ಸರ್ಕಾರಿ ನೌಕರರು 7ನೇ ರಾಜ್ಯ ವೇತನ ಆಯೋಗದ ವರದಿ ಜಾರಿಗೊಳಿಸಬೇಕು ಎಂದು ಬೇಡಿಕೆ ಇಟ್ಟಿದ್ದಾರೆ. ಸರ್ಕಾರ ಕೆ. ಸುಧಾಕರ್ ನೇತೃತ್ವದ ವೇತನ ಆಯೋಗದ ಅವಧಿಯನ್ನು ಮಾರ್ಚ್ ತನಕ ವಿಸ್ತರಣೆ ಮಾಡಿ ಆದೇಶ ಹೊರಡಿಸಿದೆ.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸಿ. ಎಸ್. ಷಡಾಕ್ಷರಿ ನೇತೃತ್ವದ ನಿಯೋಗವು ಗುರುವಾರ 7ನೇ ವೇತನ ಆಯೋಗದ ಅಧ್ಯಕ್ಷ, ಸದಸ್ಯರನ್ನು ಭೇಟಿ ಮಾಡಿತು.

ಹಲವಾರು ವಿಚಾರಗಳ ಕುರಿತು ವಿವರವಾದ ಚರ್ಚೆಯನ್ನು ನಡೆಸಿತು. ಸರ್ಕಾರಿ ನೌಕರರ ಆತಂಕವನ್ನು ಸಹ ವಿವರಿಸಿತು.

ಈ ಕುರಿತು ಪತ್ರಿಕಾ ಪ್ರಕಟಣೆಯಲ್ಲಿ ರಾಜ್ಯ ಸರ್ಕಾರಿ ನೌಕರರ ಸಂಘ ಮಾಹಿತಿ ನೀಡಿದೆ. ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷರು, ಪದಾಧಿಕಾರಿಗಳಿಂದ ರಾಜ್ಯ 7ನೇ ವೇತನ ಆಯೋಗದ ಅಧ್ಯಕ್ಷರ ಭೇಟಿ ಎಂಬ ವಿಷಯವನ್ನು ಈ ಪ್ರಕಟಣೆ ಒಳಗೊಂಡಿದೆ.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ. ಎಸ್. ಷಡಾಕ್ಷರಿ ಅವರು ಸಂಘದ



ಪದಾಧಿಕಾರಿಗಳ ನಿಯೋಗದೊಂದಿಗೆ 7ನೇ ವೇತನ ಆಯೋಗದ ಅಧ್ಯಕ್ಷ ಸುಧಾಕರ್ ರಾವ್ ಅವರನ್ನು ಭೇಟಿ ಮಾಡಿ ಈ ಕೆಳಕಂಡ ಅಂಶಗಳನ್ನು ಆಯೋಗದ ಗಮನಕ್ಕೆ ತರಲಾಯಿತು ಎಂದು ತಿಳಿಸಲಾಗಿದೆ.

**ಯಾವ–ಯಾವ ವಿಚಾರಗಳು:**

* ಈ ಹಿಂದೆ 6ನೇ ವೇತನ ಆಯೋಗದ ಅಧ್ಯಕ್ಷರಾದ ಶ್ರೀ ಶ್ರೀನಿವಾಸ ಮೂರ್ತಿ ಅವರು 8 ತಿಂಗಳ ಅವಧಿಯೊಳಗೆ ಸರ್ಕಾರಕ್ಕೆ ಸಲ್ಲಿಸಿದ 6ನೇ ವೇತನ ಆಯೋಗದ ವರದಿಯನ್ನು ಸ್ವೀಕರಿಸಿದ ಒಂದು ತಿಂಗಳ ಅವಧಿಯಲ್ಲಿ ಅಂದಿನ ರಾಜ್ಯ ಸರ್ಕಾರವು ಅನುಷ್ಠಾನಗೊಳಿಸಿರುವ ಅಂಶವನ್ನು ಗಮನಕ್ಕೆ ತರಲಾಯಿತು

* ವೇತನ ಆಯೋಗ ರಚನೆಯಾಗಿ 14 ತಿಂಗಳುಗಳಾಗಿದ್ದು, ವರದಿ ಸಲ್ಲಿಸಲು ಈಗಾಗಲೇ ತುಂಬಾ ವಿಳಂಬವಾಗಿರುವ ವಿಷಯವನ್ನು ಹಾಗೂ ವೇತನ ಆಯೋಗದ ಅನುಷ್ಠಾನದ ಬಗ್ಗೆ ನೌಕರರಲ್ಲಿ ಮೂಡಿರುವ ಆತಂಕದ ವಿಷಯವನ್ನು ಈ ಸಭೆಯಲ್ಲಿ ಪ್ರಸ್ತಾಪಿಸಲಾಯಿತು.

* ಮಾರ್ಚ್ ತಿಂಗಳಿನಿಂದ ಲೋಕಸಭೆ ಹಾಗೂ ಸ್ಥಳೀಯ ಸಂಸ್ಥೆಗಳ ಚುನಾವಣೆಗಳು ಬರುವುದರಿಂದ ವೇತನ ಆಯೋಗದ ವರದಿಯನ್ನು ಜಾರಿಗೊಳಿಸಲು ತೊಡಕಾಗಲಿರುವ ಅಂಶವನ್ನು ಆಯೋಗಕ್ಕೆ ತಿಳಿಸಲಾಯಿತು.

ಸರ್ಕಾರ ಮಂಡಿಸಲಿರುವ ಆಯವ್ಯಯಕ್ಕಿಂತ ಮುಂಚಿತವಾಗಿ ಹಾಗೂ ಲೋಕಸಭಾ ಚುನಾವಣೆ ನೀತಿ ಸಂಹಿತೆ ಪ್ರಾರಂಭವಾಗುವುದಕ್ಕಿಂತ ಮೊದಲು 7ನೇ ವೇತನ ಆಯೋಗದ ವರದಿ ಅನುಷ್ಠಾನಗೊಳಿಸಲು ಅನುಕೂಲವಾಗುವಂತೆ ವರದಿಯನ್ನು ಶೀಘ್ರ ಸರ್ಕಾರಕ್ಕೆ ಸಲ್ಲಿಸಲು ಮನವಿ ಮಾಡಲಾಯಿತು.

7ನೇ ವೇತನ ಆಯೋಗದ ಅಧ್ಯಕ್ಷರು ಮತ್ತು ಸದಸ್ಯರು ಸರ್ಕಾರಿ ನೌಕರರ ಸಂಘದ ಮನವಿಗೆ ಪೂರಕವಾಗಿ ಸ್ಪಂದಿಸಿ, ವರದಿ ಸಲ್ಲಿಸುವ ಬಗ್ಗೆ ಕ್ರಮವಹಿಸಲಾಗುವುದೆಂದು ತಿಳಿಸಿದ್ದಾರೆ. ವೇತನ ಆಯೋಗದ ಅಧ್ಯಕ್ಷರು ಹಾಗೂ ಸದಸ್ಯರಾದ ರಾಮಮೂರ್ತಿ, ಶ್ರೀಕಾಂತ್ ವನವಳ್ಳಿ, ಸದಸ್ಯ ಕಾರ್ಯದರ್ಶಿಯಾದ ಹೆಬ್ಸಿಬರಾಣಿ ಕೊರ್ಲಾಪಾಟಿ ಅವರು ಸಭೆಯಲ್ಲಿ ಉಪಸ್ಥಿತರಿದ್ದರು.

# ಅಕ್ರಮವಾಗಿ ಗಾಂಜಾ ಸಾಗಾಟ

## ಮಾಜಿ ಕಾರ್ಪೊರೇಟರ್ ಪುತ್ರ ಅಂದರ್



ಬೆಂಗಳೂರು: ಸಿಲಿಕಾನ್ ಸಿಟಿ ಬೆಂಗಳೂರಿಗೆ ಅಕ್ರಮವಾಗಿ ಗಾಂಜಾ ಸಾಗಿಸುತ್ತಿದ್ದ ಮೂವರು ಪೆಡ್ಲರ್ಸ್‌ಗಳನ್ನು ಆಂಧ್ರ ಪ್ರದೇಶದಲ್ಲಿ ಬಂಧಿಸಲಾಗಿದೆ.

ಎಚ್.ಎಸ್.ಆರ್ ಲೇಔಟ್ ಕಿಶೋರ್ ಪ್ರಕಾಶ್ ರೆಡ್ಡಿ (34), ಸುದ್ದಗುಂಟೆಪಾಳ್ಯ ಮಾಜಿ ಕಾರ್ಪೊರೇಟರ್ ಮಗ ಅಭಿನವ್ (30), ಬಾಲಾಜಿ ನಗರ ವಾಸಿ ಸುಮಂತ್ ಕುಮಾರ್ (24) ಬಂಧಿತರು. ಆಂಧ್ರಪ್ರದೇಶ ಗುಂಟೂರಿನಲ್ಲಿ ಇವರನ್ನು ಬಂಧಿಸಿರುವ ಪೊಲೀಸರು, 60 ಕೆಜಿ ಗಾಂಜಾ, ಏಳು ಮೊಬೈಲ್, ಎರಡು ಕಾರು ಮತ್ತು 2.28 ಲಕ್ಷ ನಗದು ಸೇರಿದಂತೆ ಒಟ್ಟು 44 ಲಕ್ಷ ಮೌಲ್ಯದ ವಸ್ತುಗಳನ್ನು ಜಪ್ತಿ ಮಾಡಿದ್ದಾರೆ. ಒಡಿಶಾದ ಕೋರಾಪುಟ್ ಜಿಲ್ಲೆಯ ಅರಗೊಂಡ ಗ್ರಾಮದಿಂದ ಗಾಂಜಾ ಖರೀದಿಸಿ, ಬೆಂಗಳೂರಿಗೆ ತರಲಾಗುತ್ತಿತ್ತು. ತನಿಖೆ ವೇಳೆ ಗಾಂಜಾ ಖರೀದಿ ಮತ್ತು ಮಾರಾಟದ ಬಗ್ಗೆ ಆರೋಪಿಗಳು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

## ಜಿಲ್ಲಾ ಮಕ್ಕಳ ಕಲ್ಯಾಣ ಮತ್ತು ರಕ್ಷಣಾ ಸಮಿತಿ ಸಭೆ

# ಮಕ್ಕಳ ರಕ್ಷಣಾ ಕಾರ್ಯಾಚರಣೆ ಚುರುಕುಗೊಳಿಸಿ: ಜಿಲ್ಲಾಧಿಕಾರಿ ನಿತೇಶ್ ಪಾಟೀಲ



ಬೆಳಗಾವಿ: ಬಾಲಕಾರ್ಮಿಕರು, ಚಿಂದಿ ಆಯುವ ಮಕ್ಕಳು, ಭಿಕ್ಷೆ ಬೇಡುವ, ಬಾಲ್ಯ ವಿವಾಹಕ್ಕೊಳಗಾದ, ಮನೆಯಿಂದ ತಪ್ಪಿಸಿಕೊಂಡ ಮಗು, ಜೈಲಿನಲ್ಲಿರುವ ತಂದೆ ತಾಯಿ ಮಕ್ಕಳು, ಪ್ರೇಮ ಪ್ರಕರಣಕ್ಕೊಳಗಾದ ಮಕ್ಕಳು ಸೇರಿದಂತೆ 18 ವರ್ಷದೊಳಗಿನ ಅನಾಥ, ಏಕಪೋಷಕ, ಕುಟುಂಬಿಕ ಸಮಸ್ಯೆಗಳಿಂದ ಬಳಲಿದಂತಹ ಮಕ್ಕಳ ರಕ್ಷಣಾ ಕಾರ್ಯಾಚರಣೆಯನ್ನು ಚುರುಕುಗೊಳಿಸಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಶುಕ್ರವಾರ (ಫೆ.02) ನಡೆದ ಜಿಲ್ಲಾ ಮಕ್ಕಳ ಕಲ್ಯಾಣ ಮತ್ತು ರಕ್ಷಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬೆಳಗಾವಿ ನಗರ ಮತ್ತು ಬೆಳಗಾವಿ ಜಿಲ್ಲಾ ವ್ಯಾಪ್ತಿಗೆ ಪ್ರತ್ಯೇಕವಾಗಿ ಎರಡು ಮಕ್ಕಳ ವಿಶೇಷ ಪೊಲೀಸ್ ಘಟಕಗಳು ಕಾರ್ಯ ನಿರ್ವಹಿಸುತ್ತವೆ. ತಮ್ಮ ವ್ಯಾಪ್ತಿಯಲ್ಲಿ ಕಾನೂನು ಸಂಘರ್ಷಕ್ಕೊಳಪಟ್ಟ ಮಕ್ಕಳು ಕಂಡು ಬಂದಲ್ಲಿ ಅಂತಹ ಮಕ್ಕಳನ್ನು ರಕ್ಷಣೆ ಮಾಡಿ ತಕ್ಷಣವೇ ಬಾಲನ್ಯಾಯ ಮಂಡಳಿ ಮುಂದೆ ಹಾಜರುಪಡಿಸಬೇಕು ಎಂದು ಹೇಳಿದರು.

ಮಕ್ಕಳ ರಕ್ಷಣೆಯ ಬಳಿಕ ಅಗತ್ಯ ತನಿಖಾ ವರದಿಯನ್ನು ಸಲ್ಲಿಸಬೇಕು. ಬಾಲ್ಯ ವಿವಾಹ, ಬಾಲಕಾರ್ಮಿಕ, ಶಿಕ್ಷಣದಿಂದ ವಂಚಿತ ಮಕ್ಕಳು ಇರುವುದು ಗಮನಕ್ಕೆ ಬಂದಲ್ಲಿ ಅಂತಹ ಮಕ್ಕಳನ್ನು ಅಗತ್ಯ ಕ್ರಮಕ್ಕಾಗಿ ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರುಪಡಿಸಿ ಎಫ್. ಐ.ಆರ್ ದಾಖಲಿಸಿಕೊಂಡು ತನಿಖೆ ಕೈಗೊಳ್ಳಬೇಕು ಎಂದು ತಿಳಿಸಿದರು.

ಈ ವೇಳೆ ಮಾತನಾಡಿದ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ರಕ್ಷಣಾಧಿಕಾರಿ ಮಹಾಂತೇಶ ಭಜಂತ್ರಿ ಅವರು ಕಳೆದ ಸಭೆಯಲ್ಲಿ ಜಿಲ್ಲಾಧಿಕಾರಿಗಳ ನಿರ್ದೇಶನದಂತೆ ಎಲ್ಲಾ ಶಾಲಾ ಕಾಲೇಜುಗಳಲ್ಲಿ, ಗ್ರಾಮ ಪಂಚಾಯಿತಿಗಳಲ್ಲಿ ಮಹಿಳಾ ಮತ್ತು ಮಕ್ಕಳ ರಕ್ಷಣಾ ಕಾವಲು ಸಮಿತಿ ರಚಿಸಿ ಸಭೆಗಳನ್ನು ನಡೆಸಲಾಗುತ್ತಿದೆ. ಬಾಲ್ಯ ವಿವಾಹ, ಬಾಲ ಕಾರ್ಮಿಕ ಕಾಯ್ದೆ ಸೇರಿದಂತೆ ಮಕ್ಕಳ ರಕ್ಷಣೆಯ ಕಾಯ್ದೆಗಳ ಕುರಿತು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜನೆ ಮಾಡಲಾಗುತ್ತಿದೆ ಎಂದು ಹೇಳಿದರು.

ವಿವಿಧ ಯೋಜನೆಗಳ ವರದಿ ಪರಿಶೀಲನೆ:

ಮಿಷನ್ ವಾತ್ಸಲ್ಯ ಯೋಜನೆ ಅಡಿಯಲ್ಲಿ ಅನುಷ್ಠಾನಗೊಳ್ಳುತ್ತಿರುವ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಯೋಜನೆಗಳಾದ ಮುಖ್ಯಮಂತ್ರಿ ಬಾಲ ಸೇವಾ ಯೋಜನೆ, ಪ್ರಾಯೋಜಕತ್ವ ಯೋಜನೆ, ವಿಶೇಷ ಪಾಲನಾ ಯೋಜನೆ, ಉಪಕಾರ ಯೋಜನೆ, ಮಕ್ಕಳ ಕಲ್ಯಾಣ ಸಮಿತಿ, ಚೈಲ್ಡ್ ಲೈನ್ –1098, ಮಕ್ಕಳ ಪಾಲನಾ ಸಂಸ್ಥೆಗಳ ವರದಿಯ ಕುರಿತು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಪರಿಶೀಲನೆ ಮಾಡಿದರು.

**ಪೋಸ್ಟರ್ ಬಿಡುಗಡೆ:**

ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿ ನಿತೇಶ್ ಪಾಟೀಲ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಪಿ. ಮುರುಳಿ ಮೋಹನ್ ರೆಡ್ಡಿ ಅವರು ಜಿಲ್ಲೆಯ ಪ್ರತಿ ಗ್ರಾಮ ಪಂಚಾಯತಿಗಳಲ್ಲಿ ರಚಿಸಿದ ಮಹಿಳಾ ಮತ್ತು ಮಕ್ಕಳ ಕಾವಲು ಸಮಿತಿಯ 30 ಅಂಶಗಳ ಮಾಹಿತಿ ಇರುವ ಪೋಸ್ಟರ್ ಬಿಡುಗಡೆ ಮಾಡಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಪಿ. ಮುರಳಿ ಮೋಹನ ರೆಡ್ಡಿ, ಬೆಳಗಾವಿ ನಗರ ಪೊಲೀಸ್ ಅಪರಾಧ ವಿಭಾಗದ ಎಸಿಪಿ ಸದಾಶಿವ ಕಟ್ಟಿಮನಿ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾ ನಿರ್ದೇಶಕ ಗಂಗಾಧರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ಎಂ ಬಸವರಾಜ, ಕ್ರೀಡಾ ಇಲಾಖೆ ಉಪ ನಿರ್ದೇಶಕ ಬಿ.ಶ್ರೀನಿವಾಸ ಹಾಗೂ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

# ಎಪಿಜೆ ಸುರೇಂದ್ರ ಪಾರ್ಕ್ ಹೋಟೇಲ್ ಐಪಿಒ




ಹುಬ್ಬಳ್ಳಿ: ಎಪಿಜೆ ಸುರೇಂದ್ರ ಪಾರ್ಕ್ ಹೊಟೇಲ್ ಲಿಮಿಟೆಡ್ ("ದಿ ಪಾರ್ಕ" ಅಥವಾ "ಕಂಪನಿ") ತನ್ನ ಆರಂಭಿಕ ಸಾರ್ವಜನಿಕ ಷೇರುಗಳ ಕೊಡುಗೆ(ಐಪಿಒ)ಗೆ ಸಂಬಂಧಿಸಿದಂತೆ ತನ್ನ ಬಿಡ್/ಆಫರ್ ಅನ್ನು ಫೆಬ್ರವರಿ 5,2024 ರ ಸೋಮವಾರದಂದು ತೆರೆಯಲಿದೆ.

ಈ ಈಕ್ವಿಟಿ ಷೇರುಗಳ ಒಟ್ಟು ಕೊಡುಗೆ ಗಾತ್ರವು ರೂ 9,200 ದಶಲಕ್ಷದವರೆಗೆ [ರೂ920 ಕೋಟಿ] ಒಟ್ಟು ರೂ6,000 ದಶಲಕ್ಷದವರೆಗೆ [ರೂ600 ಕೋಟಿ] ಹೊಸ ಸಂಚಿಕೆ ಮತ್ತು ಷೇರುದಾರರು ಹೊಂದಿರುವ ಷೇರುಗಳನ್ನು ಮಾರಾಟ ಮಾಡುವ ಮೂಲಕ ರೂ3,200 ದಶಲಕ್ಷದವರೆಗೆ [ರೂ320 ಕೋಟಿ] ಮಾರಾಟದ ಪ್ರಸ್ತಾಪವನ್ನು ಒಳಗೊಂಡಿದೆ.

("ಒಟ್ಟು ಕೊಡುಗೆ ಗಾತ್ರ") ಆಂಕರ್ ಹೂಡಿಕೆದಾರರ ಬಿಡ್ಡಿಂಗ್ ದಿನಾಂಕವು ಶುಕ್ರವಾರ, ಫೆಬ್ರವರಿ 2,2024 ಆಗಿರುತ್ತದೆ.

ಬಿಡ್/ ಆಫರ್ ಸೋಮವಾರ, ಫೆಬ್ರವರಿ 5,2024 ರಂದು ಚಂದಾದಾರಿಕೆಗಾಗಿ ತೆರೆಯುತ್ತದೆ ಮತ್ತು ಬುಧವಾರ, ಫೆಬ್ರವರಿ 7,2024 ರಂದು ಮುಕ್ತಾಯಗೊಳ್ಳುತ್ತದೆ.

ಆಫರ್ ನ ದರ ಪಟ್ಟಿಯನ್ನು ಅನ್ನು ಪ್ರತಿ ಈಕ್ವಿಟಿ ಷೇರಿಗೆ ರೂ 147 ರಿಂದ ರೂ 155 ಎಂದು ನಿಗದಿಪಡಿಸಲಾಗಿದೆ. ಕನಿಷ್ಠ 96 ಈಕ್ವಿಟಿ ಷೇರುಗಳಿಗೆ ಮತ್ತು ನಂತರ 96 ಈಕ್ವಿಟಿ ಷೇರುಗಳ ಗುಣಾಕಾರಗಳಲ್ಲಿ ಬಿಡ್ ಗಳನ್ನು ಮಾಡಬಹುದು.

ಈಕ್ವಿಟಿ ಷೇರುಗಳ ಹೊಸ ವಿತರಣೆಯಿಂದ ಬರುವ ನಿವ್ವಳ ಆದಾಯವನ್ನು ಮರುಪಾವತಿ/ಪೂರ್ವಪಾವತಿಗಾಗಿ, ಕಂಪನಿಯು ಪಡೆದ ಕೆಲವು ಬಾಕಿ ಸಾಲಗಳ ಪೂರ್ಣ ಅಥವಾ ಭಾಗಶಃ ಮತ್ತು ಉಳಿದ ಮೊತ್ತವನ್ನು ಸಾಮಾನ್ಯ ಕಾರ್ಪೊರೇಟ್ ಉದ್ದೇಶಗಳಿಗಾಗಿ ("ವಿತರಣೆಯ ಉದ್ದೇಶ") ಬಳಸಿಕೊಳ್ಳಲು ಕಂಪನಿಯು ಪ್ರಸ್ತಾಪಿಸಿದೆ.

ಮಾರಾಟದ ಪ್ರಸ್ತಾಪವು ಆರ್ಸ್ಪಿ IV ಪಾರ್ಕ್ ಹೋಟೆಲ್ ಇನ್ವೆಸ್ಟರ್ಸ್ ಲಿಮಿಟೆಡ್ ನಿಂದ ರೂ230.00 ಮಿಲಿಯನ್ (ರೂ23 ಕೋಟಿ) ವರೆಗೆ ಮತ್ತು ಆರ್ಸ್ಪಿ IV ಪಾರ್ಕ್ ಹೋಟೆಲ್ ಕೋ–ಇನ್ವೆಸ್ಟರ್ಸ್ ಲಿಮಿಟೆಡ್ (ಇನ್ವೆಸ್ಟರ್ ಸೆಲ್ಲಿಂಗ್ ಶೇರ್ ಹೋಲ್ಡರ್ಸ್) ನಿಂದ ರೂ10.00 ಮಿಲಿಯನ್ (ರೂ1 ಕೋಟಿ) ವರೆಗೆ ರೂ2,960.00 ಮಿಲಿಯನ್ (ರೂ296 ಕೋಟಿ) ವರೆಗಿನ ಈಕ್ವಿಟಿ ಷೇರುಗಳ ಮಾರಾಟವನ್ನು ಒಳಗೊಂಡಿದೆ.

ಜೆಎಂ ಫೈನಾನ್ಷಿಯಲ್ ಲಿಮಿಟೆಡ್, ಆಕ್ಸಿಸ್ ಕ್ಯಾಪಿಟಲ್ ಲಿಮಿಟೆಡ್ ಮತ್ತು ಐಸಿಐಸಿಐ ಸೆಕ್ಯುರಿಟೀಸ್ ಲಿಮಿಟೆಡ್ ಸಂಸ್ಥೆಗಳು ಈ ವಿತರಣೆಯ ಬುಕ್ ರನ್ನಿಂಗ್ ಲೀಡ್ ಮ್ಯಾನೇಜರ್ ಗಳು ಅಥವಾ ಬಿಆರ್‌ಎಲ್‌ಎಂಗಳು ಆಗಿವೆ.

ಈ ಇಕ್ವಿಟಿ ಷೇರುಗಳನ್ನು ಕಂಪನಿಯ ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ ಮೂಲಕ ಜನವರಿ 29,2024 ರಂದು ("ಆರ್‌ಎಚ್ಪಿ") ಕೊಲಕತ್ತಾದಲ್ಲಿರುವ ಪಶ್ಚಿಮ ಬಂಗಾಳದ ಕಂಪನಿಗಳ ರಿಜಿಸ್ಟ್ರಾರ್ಗೆ ("ಆರ್ಸಿ") ಸಲ್ಲಿಸಲಾಗಿದೆ ಮತ್ತು ಇದನ್ನು ಬಿಎಸ್‌ಇ ಲಿಮಿಟೆಡ್ ("ಬಿಎಸ್‌ಇ") ಮತ್ತು ನ್ಯಾಷನಲ್ ಸ್ಟಾಕ್ ಎಕ್ಸ್ಚೇಂಜ್ ಆಫ್ ಇಂಡಿಯಾ ಲಿಮಿಟೆಡ್ ("ಎನ್‌ಎಸ್‌ಇ") ನಲ್ಲಿ ಪಟ್ಟಿ ಮಾಡಲು ಪ್ರಸ್ತಾಪಿಸಲಾಗಿದೆ.

# ಜ್ಯೋತಿ ಸಿ.ಎಂ ಡಾಕ್ಟರೇಟ್ ಪ್ರದಾನ



ಬೆಳಗಾವಿ: ಏಷ್ಯಾ ಇಂಟರ್ನ್ಯಾಷನಲ್ ಕಲ್ಚರಲ್ ರಿಸರ್ಚ್ ಯುನಿವರ್ಸಿಟಿಯಿಂದ ಶಹಾಪೂರಿನ ಸರ್ಕಾರಿ ಚಿಂತಾಮಣ್ ರಾವ್ ಪೂರ್ವ ಕಾಲೇಜಿನ ಕನ್ನಡ ಉಪನ್ಯಾಸಕಿ ಜ್ಯೋತಿ .ಸಿ.ಎಂ ಅವರಿಗೆ ಜ.27 ರಂದು ಸಾಹಿತ್ಯ, ಶಿಕ್ಷಣ ಹಾಗೂ ಸಾಮಾಜಿಕ ಕ್ಷೇತ್ರದ ಸೇವೆಗಾಗಿ ಗೌರವ ಡಾಕ್ಟರೇಟ್ ಪ್ರದಾನ ಮಾಡಲಾಗಿದೆ.

# ಕಾರ್ಮಿಕ ಇಲಾಖೆಯಿಂದ ವಿವಿಧೆಡೆ ದಾಳಿ: 02 ಬಾಲಕಾರ್ಮಿಕರ ರಕ್ಷಣೆ

ಬಳ್ಳಾರಿ: ಜಿಲ್ಲಾಧಿಕಾರಿಗಳ ನಿರ್ದೇಶನದಂತೆ ಕುರುಗೋಡು ಪಟ್ಟಣದಲ್ಲಿ ವಿವಿಧೆಡೆ ದಾಳಿ ನಡೆಸಿ ಇಬ್ಬರು ಬಾಲ ಕಾರ್ಮಿಕ ಮಕ್ಕಳನ್ನು ರಕ್ಷಿಸಲಾಗಿದೆ ಎಂದು ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ಮೌನೇಶ್ ಅವರು ತಿಳಿಸಿದ್ದಾರೆ.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಬಾಲಕಾರ್ಮಿಕ ಯೋಜನೆ, ಕಾರ್ಮಿಕ ಇಲಾಖೆ, ಪೋಲಿಸ್ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣ ಘಟಕ, ಶಿಕ್ಷಣ ಇಲಾಖೆ, ಆರೋಗ್ಯ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಮತ್ತು ಚೈಲ್ಡ್‌ಲೈನ್ ಸಹಯೋಗದೊಂದಿಗೆ ನಗರದ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ (ನಿಷೇದ ಮತ್ತು ನಿಯಂತ್ರಣ) ಕಾಯ್ದೆ 1986 ರಡಿಯಲ್ಲಿ ನೇಮಕವಾದ ನಿರೀಕ್ಷಕರ ಟಾಸ್ಕ್ ಪೋರ್ಸ್ ಸಮಿತಿ ಸಭೆಯನ್ನು ನಡೆಸಿ ಈ ಕಾರ್ಯಚಾರಣೆ ಮಾಡಲಾಗಿದೆ.

ಪಟ್ಟಣದ ಬಳ್ಳಾರಿ ರಸ್ತೆ, ವದ್ದಟ್ಟಿ ರಸ್ತೆ ಮತ್ತು ಪಟ್ಟಣದಲ್ಲಿರುವ ಮಂತಾದ ಸ್ಥಳಗಳಲ್ಲಿರುವ ಗ್ಯಾರೇಜ್, ಬೇಕರಿ, ಹೋಟೆಲ್, ಮೆಕ್ಯಾನಿಕ್ ಶಾಪ್, ಕಿರಾಣಿ ಅಂಗಡಿ, ಇಟ್ಟಂಗಿ ಭಟ್ಟಿ, ಗುಜರಿ ಶಾಪ್ ಇತ್ಯಾದಿ ಉದ್ದಿಮೆಗಳ ಮೇಲೆ ಆಕಸ್ಮಿಕ ದಾಳಿ ಮಾಡಿ 02 ಬಾಲಕಾರ್ಮಿಕ ಹಾಗೂ ಕಿಶೋರಕಾರ್ಮಿಕ ಮಕ್ಕಳನ್ನು ಕೆಲಸದಿಂದ ಬಿಡುಗಡೆಗೊಳಿಸಿ ಮಕ್ಕಳನ್ನು ಶಿಕ್ಷಣದ ಮುಖ್ಯವಾಹಿನಿ ತರಲು ಸಂಬಂಧಿಸಿದ ಇಲಾಖೆಗೆ ಒಪ್ಪಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಈ ಟಾಸ್ಕ್ ಪೋರ್ಸ್ ಸಮಿತಿಯಲ್ಲಿ ಕುರುಗೋಡು ಗ್ರೇಡ್–2 ತಹಶೀಲ್ದಾರ ಮಲ್ಲೇಶಪ್ಪ, ಕಾರ್ಮಿಕ ನಿರೀಕ್ಷಕ ರವಿದಾಸ್, ಕುರುಗೋಡು ಪುರಸಭೆಯ ಹಿರಿಯ ಆರೋಗ್ಯ ನಿರೀಕ್ಷಕ ಯುವರಾಜ್, ಕಂದಾಯ ನಿರೀಕ್ಷಕ ಬಿ.ಮಲ್ಲಿಕಾರ್ಜುನ, ಶಿಕ್ಷಣ ಇಲಾಖೆಯ ಷಣ್ಮುಖಪ್ಪ, ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಮಲ್ಲೇಶಪ್ಪ, ಚೈಲ್ಡ್‌ಲೈನ್ ಸಿಬ್ಬಂದಿ ಚಂದ್ರಕಳ ಸೇರಿದಂತೆ ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕಂದಾಯ ಇಲಾಖೆ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ಇಬ್ಬರು ಕಾನ್ಸ್ಟೇಬಲ್ ಅಮಾನತು




ರಾಯಚೂರು: ಜಿಲ್ಲೆಯ ಮಾನ್ವಿ ತಾಲೂಕಿನ ಸಿರವಾರದಲ್ಲಿ ಟಿಪ್ಪು ಸುಲ್ತಾನ್ ಭಾವಚಿತ್ರಕ್ಕೆ ಅಪಮಾನ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಕರ್ತವ್ಯ ಲೋಪದಡಿ ಇಬ್ಬರು ಕಾನ್ಸ್ಟೇಬಲ್ಗಳನ್ನು ಅಮಾನತುಗಳಿಸಿ ರಾಯಚೂರು ಎಸ್ಪಿ ಬಿ.ನಿಖಿಲ್ ಆದೇಶಿಸಿದ್ದಾರೆ.ಸಿರವಾರ ಠಾಣೆಯ ಕಾನ್ಸ್ಟೇಬಲ್ಗಳಾದ ಇಸ್ಮಾಯಿಲ್ ಹಾಗೂ ರೇವಣಸಿದ್ದ ಅವರು ರಾತ್ರಿ ಪಾಳಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ಕರ್ತವ್ಯಲೋಪ ಹಿನ್ನಲೆ ಅಮಾನತು ಮಾಡಲಾಗಿದೆ. ಏನಿದು ಘಟನೆ: ಸಿರವಾರ ಪಟ್ಟಣದ ಮಟನ್ ಮಾರ್ಕೆಟ್ ಬಳಿ ಇರುವ ಟಿಪ್ಪು ಸರ್ಕಲ್‌ನಲ್ಲಿ ಟಿಪ್ಪು ಸುಲ್ತಾನ್ ಭಾವಚಿತ್ರಕ್ಕೆ ರಾತ್ರೋರಾತ್ರಿ ಕೆಲ ಕಿಡಿಗೇಡಿಗಳು ಚಪ್ಪಲಿ ಹಾರ ಹಾಕಿ ವಿಕೃತಿ ಮೆರೆದಿದ್ದರು. ಇದನ್ನು ನೋಡಿದ ಮುಸ್ಲಿಂ ಮುಖಂಡರು ತೀವ್ರ ಆಕ್ರೋಶ ಹೊರ ಹಾಕಿದ್ದರು. ಕೂಡಲೇ ಕಿಡಿಗೇಡಿಗಳನ್ನು ಬಂಧಿಸುವಂತೆ ಆಗ್ರಹಿಸಿ ರಸ್ತೆ ತಡೆದು ಪ್ರತಿಭಟನೆ ನಡೆಸಿದ್ದರು. ಬಳಿಕ ಸಿರವಾರ ಪಟ್ಟಣದಲ್ಲಿ ಬಿಗುವಿನ ವಾತಾವರಣ ನಿರ್ಮಾಣವಾಗಿದ್ದು, ಪ್ರತಿಭಟನಾಕಾರರು ರಸ್ತೆ ಮಧ್ಯದಲ್ಲಿ ಕುಳಿತು ಸಂಚಾರಕ್ಕೆ ಬಂದ್ ಮಾಡಿ, ರಸ್ತೆ ಮಧ್ಯೆ ಟಯರ್‌ಗಳಿಗೆ ಬೆಂಕಿ ಹಚ್ಚಿ ಆಕ್ರೋಶ ಹೊರ ಹಾಕಿದ್ದರು. ಇನ್ನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಸ್ಥಳಕ್ಕೆ ಆಗಮಿಸಿದ ಪೊಲೀಸರು, 24 ಗಂಟೆಗಳಲ್ಲಿ ಆರೋಪಿಯನ್ನು ಬಂಧಿಸುವ ಭರವಸೆ ಕೊಟ್ಟಿದ್ದರು. ಅದರಂತೆ ಪೊಲೀಸರು ಸ್ಥಳೀಯ ಸಿಸಿ ಟಿವಿ ಫುಟೇಜ್‌ಗಳ ಪರಿಶೀಲನೆ ನಡೆಸಿದ್ದರು. ಪ್ರಕರಣದ ಸಂಬಂಧ ಮೂವರು ಶಂಕಿತರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಸಿರವಾರ ಪಟ್ಟಣದ ನಿವಾಸಿ ಆರೋಪಿ ಆಕಾಶ್ (23) ತಪ್ಪೊಪ್ಪಿಕೊಂಡಿದ್ದಾನೆ. ಬಳಿಕ ಪೊಲೀಸರು ಆಕಾಶ್ನ ಹಿನ್ನೆಲೆ, ಕೃತ್ಯ ಎಸಗಿದ್ದರ ಉದ್ದೇಶದ ಬಗ್ಗೆ ಹೇಳಿಕೆ ದಾಖಲಿಸಿಕೊಂಡಿದ್ದರು. ಇದೀಗ ಕರ್ತವ್ಯಲೋಪದಡಿ ಇಬ್ಬರು ಪೊಲೀಸ್ ಪೇದೆಗಳನ್ನು ಅಮಾನತುಗೊಳಿಸಲಾಗಿದೆ.

# ಸ್ವಚ್ಛ ಪರಿಸರ ಸ್ವಾಭಿಮಾನಿ ಪ್ರಜೆಗಳ ಕರ್ತವ್ಯ: ಸತೀಶ ನಾಯಕ




ಬೆಳಗಾವಿ: ಜಿಲ್ಲೆಯ ಬೆಳಗಾವಿ ತಾಲೂಕಿನ ಅಗಸಗಾ ಗ್ರಾಮದ ಕಲ್ಮೇಶ್ವರ ಸಭಾ ಭವನದಲ್ಲಿ, ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ ರಾಜ ಇಲಾಖೆ ಕರ್ನಾಟಕ ಸರ್ಕಾರ ಮತ್ತು ಮಹಿಳಾ ಕಲ್ಯಾಣ ಸಂಸ್ಥೆ ಬೆಳಗಾವಿ ಮತ್ತು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣ ಅಭಿವೃದ್ಧಿ ಯೋಜನೆ ಅಗಸಗಾ ಸಹಯೋಗದಲ್ಲಿ ಬೆಳಗಾವಿ ಜಿಲ್ಲೆಯ ಬೆಳಗಾವಿ ತಾಲೂಕಿನ ಅಗಸಗಾ ಗ್ರಾಮದ ಕಲ್ಮೇಶ್ವರ ಸಭಾ ಭವನದಲ್ಲಿ ಸ್ವ–ಸಹಾಯ ಸಂಘಗಳ ಸದಸ್ಯರಿಗೆ ಹಾಗೂ ಗ್ರಾಮ ಪಂಚಾಯತ ಸದಸ್ಯರಿಗೆ ನವೀಕರಿಸಬಹುದಾದ ಇಂಧನ, ಮಳೆ ನೀರು ಕೊಯ್ಲು, ಹಾಗೂ ಘನತ್ಯಾಜ್ಯ ನಿರ್ವಹಣೆ ಕುರಿತು ಒಂದು ದಿನದ ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಅತಿಥಿಗಳಾಗಿ ಆಗಮಿಸಿದ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮ ಅಭಿವೃದ್ಧಿ ಯೋಜನೆಯ ಜಿಲ್ಲಾ ನಿರ್ದೇಶಕರು ಶ್ರೀ ಸತೀಶ ನಾಯಕ ಇವರು ಕಸದ ವಿಂಗಡಣೆ ನಮ್ಮ ಮನೆಯಿಂದಲೇ ಆರಂಭ ಮಾಡೋಣ ಇದು ಪ್ರತಿಯೊಬ್ಬ ಸ್ವಾಭಿಮಾನಿ ಪ್ರಜೆಯ ಕರ್ತವ್ಯ ನಾವೆಲ್ಲ ಸ್ವಚ್ಛ ಸುರಕ್ಷಿತ ಸುಂದರ ಹಸುರಿನ ಪರಿಸರ ನಿರ್ಮಾಣ ಮಾಡಲು ಶ್ರಮ ವಹಿಸೋಣ ಎಂದು ತಿಳಿಸಿದರು. ಕಾರ್ಯಕ್ರಮದ ಉದ್ಘಾಟಕರಾಗಿ ಶ್ರೀ ಕಲಗೌಡ ಪಾಟೀಲ ದೇವಸ್ಥಾನ ಪಂಚಕಮೀಟಿ ಅಧ್ಯಕ್ಷರು ಅಗಸಗಾ ಮತ್ತು ಶ್ರೀ ನಾಗರಾಜ್ ಹದ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣ ಅಭಿವೃದ್ಧಿ ಯೋಜನೆ ಬೆಳಗಾವಿ ತಾಲೂಕ ಯೋಜನಾಧಿಕಾರಿಗಳು ಆಗಮಿಸಿದ್ದರು. ಅಧ್ಯಕ್ಷರಾಗಿ ಶ್ರೀ ಅಮೃತ ಮುದ್ದೇನ್ನವರ ಗ್ರಾಮ ಪಂಚಾಯತ ಅಧ್ಯಕ್ಷರು ಅಗಸಗಾ ಗ್ರಾಮದ ಸ್ವಚ್ಛತೆಯಲ್ಲಿ ನಮ್ಮೆಲ್ಲರ ಪಾತ್ರ ಮುಖ್ಯ ಎಂದು ತಿಳಿಸಿದರು.

ಅತಿಥಿಗಳಾಗಿ ಸಂಪನ್ಮೂಲ ವ್ಯಕ್ತಿಗಳಾಗಿ ಮಹಿಳಾ ಕಲ್ಯಾಣ ಸಂಸ್ಥೆಯ ಶ್ರೀಮತಿ.ಸುರೇಖಾ.ಡಿ.ಪಾಟೀಲ ಇವರು ಮಳೆ ನೀರು ಕೊಯ್ಲಿನ ಮಹತ್ವವನ್ನು ತಿಳಿಸುತ್ತ ನೀರು ಸಂಗ್ರಹಣೆ ತುಂಬಾ ಅಗತ್ಯ ಅದಕ್ಕೆ ನೀರನ್ನು ಹೇಗೆ ಸಂಗ್ರಹಣೆ ಮಾಡುವುದು ಎಂದು ವಿವರಿಸಿದರು. ಮತ್ತೋರ್ವ ಸಂಪನ್ಮೂಲ ವ್ಯಕ್ತಿಗಳಾದ ಶ್ರೀ. ಎಂ.ಎಂ.ಗಡಗಲಿ ಆಗಮಿಸಿ ತ್ಯಾಜ್ಯ ಎಂದರೇನು? ತ್ಯಾಜ್ಯದ ವಿಧಗಳು ಯಾವುವು? ತ್ಯಾಜ್ಯದ ವಿಂಗಡಣೆಯಿಂದಾಗುವ ಅನುಕೂಲಗಳು ಮತ್ತು ತ್ಯಾಜ್ಯ ವಿಂಗಡಣೆ ಮಾಡದೆ ಹೋದರೆ ಆಗುವ ಪರಿಣಾಮಗಳ ಕುರಿತು ಮಾಹಿತಿ ನೀಡಿದರು. ಸಂಪನ್ಮೂಲ ವ್ಯಕ್ತಿಯಾದ ಕು.ಸುಗಂಧಾ ಅಳ್ಳಟ್ಟಿ ಸಂವಹನ ಕೌಶಲ್ಯ ಮತ್ತು ನಾಯಕತ್ವ ಕೌಶಲ್ಯದ ಕುರಿತು ತಿಳಿಸಿದರು.

ಈ ಸಂದರ್ಭದಲ್ಲಿ ಒಕ್ಕೂಟದ ಅಧ್ಯಕ್ಷರು ಶ್ರೀಮತಿ ಶೋಭಾ ಗುಂಡು ಕುರೆನ್ನವರ, ಒಕ್ಕೂಟದ ಉಪಾಧ್ಯಕ್ಷ ದೇವಾಕ್ಕ ಪಾಟೀಲ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಸದಸ್ಯರು ಒಕ್ಕೂಟದ ಪದಾಧಿಕಾರಿಗಳು ಮಹಿಳೆಯರು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಲಲಿತಾ ಜೆಕೆ ನಿರೂಪಿಸಿದರು. ಪಾರ್ಥನಾ ಗೀತೆಯನ್ನು ಶ್ರೀಮತಿ ಸುಜಾತಾ ಹೇಳಿದರು. ಸುಗಂಧಾ ಶಂಕರ ಅಳ್ಳಟ್ಟಿ ಸ್ವಾಗತಿಸಿ ವಂದಿಸಿದರು.

# ಪೊಲೀಸ್ ಠಾಣೆಯಿಂದ ಕಳ್ಳತನ ಪ್ರಕರಣದ ಆರೋಪಿ ಪರಾರಿ



ತುಮಕೂರು: ಪೊಲೀಸ್ ಠಾಣೆಯಿಂದಲೇ ಆರೋಪಿಯೊಬ್ಬ ಎಸ್ಕೇಪ್ ಆಗಿರುವ ಘಟಣೆ ತುಮಕೂರಿನ ಗುಬ್ಬಿ ಪೊಲೀಸ್ ಠಾಣೆಯಲ್ಲಿ ನಡೆದಿದೆ.

ಠಾಣೆಯಿಂದಲೇ ಆರೋಪಿ ಸೈಯದ್ ಎಂಬಾತ ಎಸ್ಕೇಪ್ ಆಗಿದ್ದಾನೆ. ಗದಗ ಜಿಲ್ಲೆಯ ಹುಲ್ಲೂರು ಗ್ರಾಮದ ವಾಸಿರುವ ಸೈಯದ್, ಡ್ಯಾನ್ಸ್ ಕೋರಿಯಾಗ್ರಾಪರ್ ಆಗಿ ಕಾರ್ಯ ನಿರ್ವಹಿಸುತ್ತಿದ್ದ. ಕಳ್ಳತನ ಪ್ರಕರಣದಲ್ಲಿ ಬೆಂಗಳೂರಿನಲ್ಲಿ ಆರೋಪಿಯನ್ನು ಬಂಧಿಸಿ ಗುಬ್ಬಿ ಠಾಣೆಗೆ ಕರೆತರಲಾಗಿತ್ತು. ಇಂದು ಬೆಳಗಿನ ಜಾವ 4:30ಕ್ಕೆ ಠಾಣೆಯಿಂದ ಸೈಯದ್ ಪರಾರಿಯಾಗಿದ್ದಾನೆ. ಆರೋಪಿ ಸೈಯದ್ ಎಡಗೈ ಮೇಲೆ ಸಿರಿಗನ್ನಡಂ, ಬಲಗೈ ಮೇಲೆ ಎಲ್ಲಾ ಧರ್ಮದ ಹಚ್ಚೆ ಇದೆ ಎಂದು ತಿಳಿದುಬಂದಿದೆ.

# ಕೋರ್ಟ್‌ನಲ್ಲಿ ನ್ಯಾಯವಾದಿ ಪತಿ ಆತ್ಮಹತ್ಯೆ



ಬೆಳಗಾವಿ: ನ್ಯಾಯಾಲಯದಲ್ಲೇ ನ್ಯಾಯವಾದಿಯ ಪತಿ ಟಿವಿ ಕೇಬಲ್ ವೈರ್‌ನಿಂದ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡ ಘಟನೆ ಬೆಳಗಾವಿ ಜಿಲ್ಲೆಯ ಹುಕ್ಕೇರಿಯಲ್ಲಿ ನಡೆದಿದೆ.

ಲಗಮಪ್ಪ ಹೊಸೂರಿ (48) ಮೃತ ದುರ್ದೈವಿ. ಲಗಮಪ್ಪ ಹೊಸೂರಿ ಪತ್ನಿ ಅನಿತಾ ಕುಲಕರ್ಣಿ ನ್ಯಾಯವಾದಿಯಾಗಿ ಕೆಲಸ ಮಾಡುತ್ತಿದ್ದಾರೆ. ಲಗಮಪ್ಪ ನ್ಯಾಯಾಲಯದ ಇ– ಗ್ರಂಥಾಲಯದ ಸಂಗ್ರಹ ಕೋಣೆಯಲ್ಲಿ ನೇಣು ಬಿಗಿದುಕೊಂಡಿದ್ದಾರೆ. ಆತ್ಮಹತ್ಯೆಗೆ ನಿಖರ ಕಾರಣ ತಿಳಿದುಬಂದಿಲ್ಲ.

ಘಟನೆಗೆ ಸಂಬಂಧಿಸಿ ಹುಕ್ಕೇರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ವಿಷಯ ತಿಳಿಯುತ್ತಿದ್ದಂತೆ ಹುಕ್ಕೇರಿ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಿದ್ದು, ಈ ಸಂಬಂಧ ತನಿಖೆಯನ್ನು ಮುಂದುವರಿಸಿದ್ದಾರೆ.

# ಉತ್ಪಾದನಾ ವಲಯದಲ್ಲಿ ಶೇ 80 ರಷ್ಟು ನವೀಕೃತ ಇಂಧನ ಬಳಕೆ ಅಗತ್ಯ: ಡಾ.ಎನ್.ಮುತ್ತುಕುಮಾರ್ ಕರೆ

## ಮೂರು ದಿನಗಳ ಇಂಡಿಯನ್ ಪೌಂಡ್ರಿ ಕಾಂಗ್ರೆಸ್ ಅಂಡ್ ಐಎಫ್‌ಇಎಕ್ಸ್ 2024 ವಸ್ತು ಪ್ರದರ್ಶನಕ್ಕೆ ಚಾಲನೆ




ಬೆಂಗಳೂರು: ಕೈಗಾರಿಕಾ ಉತ್ಪಾದನೆಯಲ್ಲಿ ಹಸಿರು ತಂತ್ರಜ್ಞಾನ ಅಳವಡಿಸಿಕೊಳ್ಳುವುದು ಅತ್ಯಂತ ಅಗತ್ಯವಾಗಿದ್ದು, ಪರಿಸ್ಥಿತಿಗೆ ತಕ್ಕಂತೆ ನವೀಕೃತ ಇಂಧನ, ಅದರಲ್ಲೂ ವಿಶೇಷವಾಗಿ ಸೌರ ವಿದ್ಯುತ್ ಬಳಕೆಗೆ ಒತ್ತು ನೀಡಬೇಕೆಂದು ಮೆರಿಟೋರ್ ಸಂಸ್ಥೆಯ ಅಧ್ಯಕ್ಷ ಡಾ.ಎನ್. ಮುತ್ತುಕುಮಾರ್ ಹೇಳಿದ್ದಾರೆ.

ತುಮಕೂರು ರಸ್ತೆಯ ಅಂತರರಾಷ್ಟ್ರೀಯ ವಸ್ತುಪ್ರದರ್ಶನ ಕೇಂದ್ರದಲ್ಲಿ ದಿ ಇನ್ಸಿಟ್ಯೂಟ್ ಆಫ್ ಇಂಡಿಯನ್ ಪೌಂಡೇಶನ್ ನಿಂದ ಆಯೋಜಿಸಲಾದ ಮೂರು ದಿನಗಳ 72ನೇ ಇಂಡಿಯನ್ ಪೌಂಡ್ರಿ ಕಾಂಗ್ರೆಸ್ ಅಂಡ್ ಐಎಫ್‌ಇಎಕ್ಸ್ 2024 ವಸ್ತು ಪ್ರದರ್ಶನ ಮತ್ತು ಕಾರ್ಯಾಗಾರಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಇಂಡಿಯನ್ ಫೌಂಡ್ರಿ ಕಾಂಗ್ರೆಸ್ ವ್ಯಾಪ್ತಿಯಲ್ಲಿ ವೈಮಾನಿಕ, ರಕ್ಷಣಾ ವಲಯ, ಆಟೋ ಮೊಬೈಲ್, ಮೊಬೈಲ್ ಫೋನ್, ವಿದ್ಯುನ್ಮಾನ ವಾಹನಗಳು ಒಳಗೊಂಡಂತೆ ಹಲವಾರು ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿದ್ದು, ಖರ್ಚು ವೆಚ್ಚಗಳನ್ನು ಕಡಿಮೆ ಮಾಡಲು ಹಸಿರು ತಂತ್ರಜ್ಞಾನದ ಮೂಲಕ ಸುಸ್ಥಿರ ಉತ್ಪಾದನೆಗೆ ಒತ್ತು ನೀಡಬೇಕು. ಸೌರ ವಿದ್ಯುತ್ ಉತ್ಪಾದನೆಯನ್ನು ಪ್ರತಿಯೊಂದು ಘಟಕಗಳ ವ್ಯಾಪ್ತಿಯಲ್ಲಿ ಅಳವಡಿಸಿಕೊಂಡರೆ ವೆಚ್ಚ ಕಡಿಮೆಯಾಗಿ ಸುಸ್ಥಿರ ಅಭಿವೃದ್ಧಿಗೆ ನಾಂದಿಯಾಗಲಿದೆ ಎಂದು ಕಿವಿ ಮಾತು ಹೇಳಿದರು.

ಭಾರತ ಭವಿಷ್ಯದ ದೇಶವಾಗಿದ್ದು, ಮುಂದಿನ ಪೀಳಿಗೆಗೆ ಸುಸ್ಥಿರ ತಂತ್ರಜ್ಞಾನ ಅಳವಡಿಕೆಯನ್ನು ಪ್ರೋತ್ಸಾಹಿಸಬೇಕಾಗಿದೆ. ಅದಕ್ಕಾಗಿ ಈಗಿನಿಂದಲೇ ಪ್ರಯತ್ನಗಳನ್ನು ಆರಂಭಿಸಬೇಕು. ತನ್ನ ಉತ್ಪಾದನೆಯ ಶೇ 80 ಇಂಧನವನ್ನು ನವೀಕೃತ ವಲಯದಿಂದ ಪಡೆಯುವಂತೆ ಸೂಕ್ತ ಕಾರ್ಯಯೋಜನೆ ರೂಪಿಸಬೇಕು. ಸಂಸ್ಕರಣೆ ಮಾಡಿದ ನೀರು ಬಳಕೆಗೂ ಉತ್ತೇಜನ ನೀಡಬೇಕು. ಫೌಂಡ್ರಿ ವಲಯದಲ್ಲಿ ಕಾರ್ಯನಿರ್ವಹಿಸುತ್ತಿರುವವರ ಸರಾಸರಿ ಜೀವನ ಮಟ್ಟ ಅತ್ಯಂತ ಕಡಿಮೆ ಇದ್ದು, ಮುಂದಿನ ನೂರು ವರ್ಷಗಳಿಗೆ ಅಗತ್ಯವಾಗಿರುವ ತಂತ್ರಜ್ಞಾನವನ್ನು ವರ್ಗಾಯಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಬೇಕು. ಸಕಾರಾತ್ಮಕ ಚಿಂತನೆ, ವರ್ತನೆ, ಬದ್ಧತೆಯಿಂದ ಭಾರತ ಭವಿಷ್ಯದಲ್ಲಿ ನಂಬರ್ ಒನ್ ಉತ್ಪಾದನಾ ದೇಶವಾಗಬೇಕು ಎಂದು ಡಾ.ಎನ್. ಮುತ್ತುಕುಮಾರ್ ಹೇಳಿದರು.

ವೋಲ್ವೋ ಗ್ರೂಪ್ ಖರೀದಿ ವಿಭಾಗದ ಉಪಾಧ್ಯಕ್ಷ ಗಿರೀಶ್ ಡಿ.ಎಂ ಮಾತನಾಡಿ, ಫೌಂಡ್ರಿ ಸೇರಿದಂತೆ ಹಲವಾರು ವಲಯಗಳ ಉತ್ಪಾದನಾ ಕ್ಷೇತ್ರಕ್ಕೆ ಭವ್ಯ ಭವಿಷ್ಯವಿದ್ದು, ಇದನ್ನು ಸದ್ಬಳಕೆ ಮಾಡಿಕೊಳ್ಳಬೇಕು. 1.2 ಟ್ರಿಲಿಯನ್ ಡಾಲರ್ ಮೊತ್ತದ ಉತ್ಪಾದನಾ ಪರಿಕರಗಳು ಭಾರತಕ್ಕೆ ಆಮದಾಗುವ ನಿರೀಕ್ಷೆಯಿದ್ದು, ಇದರಲ್ಲಿ ಆಟೋಮೊಬೈಲ್ ಕ್ಷೇತ್ರಕ್ಕೆ ಸಂಬಂಧಿಸಿದಂತೆ 400 ಶತಕೋಟಿ ಡಾಲರ್ ಪರಿಕರಗಳು ದೊರೆಯುವ ನಿರೀಕ್ಷೆ ಇದೆ. ಇದರಲ್ಲಿ ಫೌಂಡ್ರಿ ವಲಯಕ್ಕೆ ಉತ್ತಮ ಅವಕಾಶವಿದೆ. ಬ್ಯಾಟರಿ ಆಧಾರಿತ ವಾಹನಗಳು, ಅದರಲ್ಲೂ ನಿರ್ದಿಷ್ಟವಾಗಿ ಕಾರುಗಳು, ಸರಕು ಸಾಗಾಣೆ ವಾಹನಗಳಿಗೆ ವ್ಯಾಪಕ ಬೇಡಿಕೆ ಬರಲಿದೆ. ಇದನ್ನು ಗಮನದಲ್ಲಿಟ್ಟುಕೊಂಡು ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಇಂಡಿಯನ್ ಪೌಂಡ್ರಿ ಕಾಂಗ್ರೆಸ್ ನ ಸಂಘಟನಾ ವಿಭಾಗದ ಅಧ್ಯಕ್ಷ ರುದ್ರೇಗೌಡ ಮಾತನಾಡಿ, ಆಟೋಮೊಬೈಲ್ಸ್, ಅರ್ಥ್ಮೂವಿಂಗ್, ಪಂಪ್ಸ್ ಅಂಡ್ ವಾಲ್ಸ್, ಎರೋಸ್ಪೇಸ್, ಡಿಫೇನ್ಸ್ ಸೇರಿ ಹಲವು ಕ್ಷೇತ್ರಗಳಲ್ಲಿ ಬಳಸುವ ಅಗತ್ಯ ಬಿಡಿಭಾಗಗಳಿಗೆ ಬೇಡಿಕೆ ಹೆಚ್ಚಾಗುತ್ತಿದೆ. ವ್ಯಾಪಾರ, ಉತ್ಪಾದನೆ, ಕೈಗಾರಿಕಾ ಬೆಳಣಿಗೆಗೆ ವಿಪುಲ ಅವಕಾಶಗಳಿದ್ದು, ಇದನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ವಸ್ತು ಪ್ರದರ್ಶನದಲ್ಲಿ 350 ಕ್ಕೂ ಹೆಚ್ಚು ಪ್ರದರ್ಶಕರು ತಮ್ಮ ಇತ್ತೀಚಿನ ಅತ್ಯಾಧುನಿಕ ಉತ್ಪನ್ನಗಳು ಮತ್ತು ತಂತ್ರಜ್ಞಾನಗಳನ್ನು ಪ್ರದರ್ಶಿಸಿದ್ದಾರೆ. ವಸ್ತುಗಳು, ಉಪಕರಣಗಳು ಮತ್ತು ಎರಕಹೊಯ್ದು, ಕರಗುವ, ಅಚ್ಚೊತ್ತುವಿಕೆ, ಪೂರ್ಣಗೊಳಿಸುವಿಕೆ, ತಪಾಸಣೆ, ವಿನಾಶಕಾರಿಯಲ್ಲದ ಪರೀಕ್ಷೆ, ರೊಬೊಟಿಕ್ ಆಟೊಮೇಷನ್ ಮತ್ತು ಸುರಕ್ಷತಾ ಉಪಕರಣಗಳಂತಹ ಯಂತ್ರೋಪಕರಣಗಳನ್ನು ಕಾಣಬಹುದಾಗಿದೆ. ದೇಶ ವಿದೇಶದ 1500 ಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗವಹಿಸಿದ್ದಾರೆ.

ಕಾರ್ಯಕ್ರಮದಲ್ಲಿ ಐಐಎಫ್ ಅಧ್ಯಕ್ಷ ಡಾ.ಸಿ.ಚಂದ್ರಶೇಖರ್, ಆಯೋಜಕ ಸಮಿತಿಯ ಉಪಾಧ್ಯಕ್ಷ ಡಿ.ಜಿ.ಬೆನಕಪ್ಪ, ಕಾರ್ಯದರ್ಶಿಗಳಾದ ಅಂಕಿತ್ ದಿವೇಕರ್, ವಿಗ್ನೇಶ್ ರಾಮನನ್ ಮತ್ತಿತರರು ಉಪಸ್ಥಿತರಿದ್ದರು.



BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089